ಬೆಂಗಳೂರು ಸಂಪುಟ: 16 ಸಂಚಿಕೆ: 41 ಪುಟ: 06 ಶುಕ್ರವಾರ 03-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಆರ್‌ಜಿ ಸಲ್ಯೂಷನ್ ಕೇಳಿ ಸಿನಿ ಇಂಡಸ್ಟ್ರಿ ಶಾಕ್!

ವಡಿವೇಲು ಮೇಲೆ ಕೆಂಡ ಕಾರಿದ ಕನ್ನಡತಿ!

ರಶ್ಮಿಕಾ ಮೇಲೆ ಯಾಕಿಷ್ಟು ಕೋಪ? ↘ ಪುಟ 6

# ದರ ಏರಿಕೆಗೆ ಆಕ್ರೋಶ

## ಪ್ರಯಾಣ ದರ ಹೆಚ್ಚಳ ಖಂಡಿಸಿ ಬೀದಿಗಿಳಿದ ಬಿಜೆಪಿ; ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ

**ಬೆಂಗಳೂರು:** ಬಸ್ ಪ್ರಯಾಣದ ದರ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ನಗರದ ಮೆಜೆಸ್ಟಿಕ್ ಕೆಂಪೇಗೌಡ ಬಸ್ ನಿಲ್ದಾಣದಲ್ಲಿ ಬಿಜೆಪಿ ನಾಯಕರು ಇಂದು ಪ್ರತಿಭಟನೆ ನಡೆಸಿದರು.

ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮುಖವಾಡ ಧರಿಸಿದ್ದ ಬಿಜೆಪಿ ಕಾರ್ಯಕರ್ತರು, ವಿನೂತನವಾಗಿ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು. ಬಸ್ ನಿಲ್ದಾಣದಲ್ಲಿದ್ದ ಪುರುಷ ಪ್ರಯಾಣಿಕರಿಗೆ ಗುಲಾಬಿ ಹೂ ನೀಡಲಾಯಿತು.

ಪ್ರತಿಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, "ಕರ್ನಾಟಕದ 7 ಕೋಟಿ ಜನರು ಹೊಸ ವರ್ಷದ ಉಡುಗೊರೆಗಾಗಿ ಕಾಯುತ್ತಿದ್ದೆವು. ಮೋದಿಯವರು ಹೊಸ ವರ್ಷಕ್ಕೆ ನಿಜವಾದ ಉಡುಗೊರೆ ನೀಡಿದ್ದಾರೆ. ಆದರೆ, ರಾಜ್ಯ ಸರ್ಕಾರ, ದಿ ಗ್ರೇಟ್ 14 ಬಜೆಟ್ ಚಾಂಪಿಯನ್ ಸಿದ್ದರಾಮಯ್ಯನವರು ಬಸ್ ದರ ಏರಿಕೆಯ ಉಡುಗೊರೆ ನೀಡಿದ್ದಾರೆ" ಎಂದು ಟೀಕಿಸಿದರು.

"ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೇರಿದ ಬಳಿಕ ಪ್ರತಿದಿನ ತೆರಿಗೆ ಹೆಚ್ಚಿಸುವುದೇ ಸಾಧನೆ ಮಾಡುತ್ತಿದೆ. ಅಭಿವೃದ್ಧಿ ವಿಚಾರದಲ್ಲಿ ಶೂನ್ಯ ಸಾಧನೆ ಮಾಡಿರುವ ರಾಜ್ಯ ಸರ್ಕಾರ, ಬೆಲೆ ಏರಿಕೆಯನ್ನ ನಿರಂತರವಾಗಿ ಮಾಡುತ್ತಿದೆ" ಎಂದರು.

ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, "ಇದು ಹೆಣ್ಣು ಮಕ್ಕಳಿಗೆ ಉಚಿತ ಪ್ರಯಾಣ ನೀಡಿ, ಗಂಡಸರಿಗೆ ಬರೆ ಹಾಕುವ ಸರ್ಕಾರ" ಎಂದು ಟೀಕಿಸಿದರು.

"ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಫಲವಾಗಿ ಇಂದು ಜನರು ಪ್ರತಿಯೊಂದಕ್ಕೂ ದುಬಾರಿ ಬೆಲೆ ತೆರಬೇಕಾಗಿದೆ. ಹಾಲಿನ ದರ ಏರಿಸಿದ್ದೀರಿ, ವಿದ್ಯುತ್ ದರ ಏರಿಕೆ ಮಾಡಿದ್ದೀರಿ, ಸ್ಟ್ಯಾಂಪ್ ಡ್ಯೂಟಿ, ರಿಜಿಸ್ಟ್ರೇಷನ್ ಶುಲ್ಕ ಮಾತ್ರವಲ್ಲದೆ ವಿವಿಧ ತೆರಿಗೆಗಳನ್ನೂ ಹೆಚ್ಚಿಸಲಾಗಿದೆ. ಅಭಿವೃದ್ಧಿಯೊಂದನ್ನು ಬಿಟ್ಟು ತಲೆ ಬೋಳಿಸುವ ಕೆಲಸ ಮಾಡುವ ಸರ್ಕಾರ ಇದಾಗಿದೆ. ಸರ್ಕಾರದ ಖಜಾನೆ ಪೂರ್ತಿ ಖಾಲಿಯಾಗಿದ್ದು, ಕೇವಲ ದಿನ ದೂಡಲು ಜನರಿಗೆ ಬರೆ



ಹಾಕುವ ಕೆಲಸ ಮಾಡಿದ್ದಾರೆ" ಎಂದರು.

ಸಿಎಂ ಸಿದ್ದರಾಮಯ್ಯ ಅವರೇ ಎಲ್ಲಾ ವಸ್ತುಗಳ ದರವನ್ನು ಏರಿಸುವುದೇ ನಿಮ ಅಸಲಿ ಕರ್ನಾಟಕ ಮಾಡೆಲ್ ಆಗಿದೆಯಾ? ಮಹಾನ್ ಸುಳ್ಳುಗಾರ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರೆ, ಸಾರಿಗೆ ಸಂಸ್ಥೆಗಳು ಹೆಚ್ಚಿನ ಲಾಭದಲ್ಲಿವೆ ಎಂದಾದ ಮೇಲೆ ಬಸ್ ಪ್ರಯಾಣ ದರವನ್ನು ಏರಿಸಿರುವುದು ಯಾವ ಪುರುಷಾರ್ಥ ಸಾಧನೆಗಾಗಿ? ಎಂದು ಪ್ರಶ್ನಿಸಿದೆ.


ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪೋಸ್ಟ್ ಮಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ.. ಯಾವ ಮುಖವಿಟ್ಟುಕೊಂಡು ನೀವು ರಾಜ್ಯದ ಜನತೆಗೆ ಪಂಚಭಾಗ್ಯ ಯೋಜನೆಯನ್ನು ಕೊಟ್ಟಿದ್ದೇವೆ ಎಂದು ಜಂಬ ಕೊಚ್ಚಿಕೊಳ್ಳುತ್ತೀರಿ? ಶಕ್ತಿ ಯೋಜನೆಗೆ ಹಣ ಒದಗಿಸಲು ವಿಫಲವಾಗಿರುವ ನೀವು ಸಾರಿಗೆ ಸಂಸ್ಥೆಯು ನಷ್ಟದ ಹಾದಿಯನ್ನು ತುಳಿಯಲು ಕಾರಣರಾಗಿದ್ದೀರಿ. ಮಹಿಳೆಯರಿಗೆ ಉಚಿತ, ಪುರುಷರಿಗೆ ಅದರ ಹೊರೆ ಖಚಿತ ಪುಟ 2



ಹೆಚ್ ಎ ಎಲ್ ವಿಮಾನ ನಿಲ್ದಾಣದಲ್ಲಿ ರಾಷ್ಟ್ರಪತಿ ದ್ರೌಪದಿ ಮರ್ಮು ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ವಾಗತಿಸಿದರು. ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ , ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಉಪಸ್ಥಿತರಿದ್ದರು.


## ದೆಹಲಿ ಅಭಿವೃದ್ಧಿಗೆ ಇಂದು ಮಹತ್ವದ ದಿನ

**ನವದೆಹಲಿ:** ರಾಷ್ಟ್ರ ರಾಜಧಾನಿಯಲ್ಲಿಂದು ವಿವಿಧ ಮೂಲಸೌಕರ್ಯ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಲಿದ್ದಾರೆ. ಇದಕ್ಕೂ



ಮುನ್ನ 'ಎಕ್ಸ್' ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, "ಇಂದು ದೆಹಲಿ ಅಭಿವೃದ್ಧಿಗೆ ಅತ್ಯಂತ ಮಹತ್ವದ ದಿನ. ಈ ಯೋಜನೆಗಳು ಮುಂದಿನ ಪೀಳಿಗೆಯನ್ನು ಜ್ಞಾನ, ಅವಿಷ್ಕಾರ ಮತ್ತು ಅವಕಾಶಗಳ ಮೂಲಕ ಸಬಲಗೊಳಿಸಿ, ಪೋಷಿಸಲಿವೆ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಬದ್ಧತೆಯನ್ನು ತೋರಿಸುತ್ತದೆ" ಎಂದು ತಿಳಿಸಿದ್ದಾರೆ. "ಭಾರತದ ಪ್ರತಿಯೊಬ್ಬರಿಗೂ ಸೂಕ್ತ ಮನೆ ನೀಡುವ ಭರವಸೆಗೆ ನಾವು ಬದ್ಧ. ಇಂದು ಕೊಳೆಗೇರಿ ಪುನರ್ವಸತಿ ಯೋಜನೆ ಅಡಿಯಲ್ಲಿ ಹೊಸದಾಗಿ ನಿರ್ಮಾಣವಾಗಿರುವ 1,675 ಪುಟ 2

## ಕಾಂಗ್ರೆಸ್ಸಿಗರು ನಿರ್ಲಜ್ಜರು



ಹುಬ್ಬಳ್ಳಿ: ಕರ್ನಾಟಕದಲ್ಲಿ ಗ್ಯಾರಂಟಿಗಳ ಹೆಸರಿನಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂತು. ಆದರೆ ಈಗ ನಿತ್ಯದ ಜೀವನಕ್ಕೆ ಬೇಕಾದ ಎಲ್ಲ ದರಗಳು ಹೆಚ್ಚಾಗಿವೆ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ವಾಗ್ದಾಳಿ ನಡೆಸಿದರು.

ಕೆಎಸ್‌ಆರ್‌ಟಿಸಿ ಬಸ್ ಟಿಕೆಟ್ ದರ ಹೆಚ್ಚಳ ಖಂಡಿಸಿ ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ದೇಶದಲ್ಲಿ ಸುಳ್ಳು ಗ್ಯಾರಂಟಿ ಕೊಟ್ಟಿತ್ತು. ಅದು ಈಗ ಎಕ್ಸ್‌ಪೋಸ್ ಆಗುತ್ತಿದೆ. ಉಚಿತ ವಿದ್ಯುತ್ ಎಂದರು, ಈಗ ವಿದ್ಯುತ್ ದರ ಹೆಚ್ಚಳವಾಗಿದೆ. ಕಾಕಾಸಾಹೇಬ್ ಪಾಟೀಲ್, ಮಹದೇವಪ್ಪ ನಿನಗೂ ಫ್ರೀ ಅಂದರು. ಹಾಲು, ಪೆಟ್ರೋಲ್, ಡಿಸೇಲ್‌ಗೆ ಸೆಸ್ ಹಾಕಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆಸ್ತಿ ನೋಂದಣಿ ದರ ಹೆಚ್ಚಳವಾಗಿದೆ. ಮದ್ಯದ ದರ ಹೆಚ್ಚಳವಾಗಿದೆ. ಈಗ ಸರ್ಕಾರ ಬಸ್ ಟಿಕೆಟ್ ದರ ಕೂಡ ಹೆಚ್ಚಳ ಮಾಡಿದೆ. ಹಿಮಾಚಲ ಪ್ರದೇಶದಲ್ಲಿ ಗ್ಯಾರಂಟಿಗಳನ್ನು ನಿಲ್ಲಿಸಲು ಹೊರಟಿದ್ದಾರೆ. ಅಧಿಕಾರಕ್ಕಾಗಿ ಯಾವ ಕೀಳುಮಟ್ಟಕ್ಕೂ ಇಳಿಯಲು ಕಾಂಗ್ರೆಸ್‌ನವರು ಹಿಂದೆ ಸರಿಯಲ್ಲ. ಕಾಂಗ್ರೆಸ್‌ನವರು ಬರೀ ಸುಳ್ಳು ಹೇಳುತ್ತಾರೆ, ನಿರ್ಲಜ್ಜರು ಎಂದು ವಾಗ್ದಾಳಿ ನಡೆಸಿದರು.

ಸಾರಿಗೆ ಸಂಸ್ಥೆ 2,000 ಕೋಟಿ ರೂಪಾಯಿ ಸಾಲ ಮಾಡುವ ಹಂತಕ್ಕೆ ಬಂದಿದೆ. ಕಾಂಗ್ರೆಸ್ ಸರ್ಕಾರದಲ್ಲಿ ನೌಕರರಿಗೆ ಸಂಬಳ ನೀಡಲು ಹಣ ಇಲ್ಲ. ಸಿದ್ದರಾಮಯ್ಯ ಸರ್ಕಾರ ದಿವಾಳಿ ಆಗಿದೆ ಎಂದು ಜೋಶಿ ವಾಗ್ದಾಳಿ ನಡೆಸಿದರು.

## ಬಿಜೆಪಿ ಬೌದ್ಧಿಕ ದಿವಾಳಿಯಾಗಿದೆ

**ಬೆಂಗಳೂರು :** ಗುಂಪುಗಾರಿಕೆ ಹಾಗೂ ಆಂತರಿಕ ಕಚ್ಚಾಟದಿಂದ ಕೆಂಗೆಟ್ಟು ಬೌದ್ಧಿಕವಾಗಿ ದಿವಾಳಿಯಾಗಿರುವ ಬಿಜೆಪಿಯು ರಾಜ್ಯದ ಜನಪರ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಮಾಡಲು ಹೊರಟಿರುವುದು ಹಾಸ್ಯಾಸ್ಪದ ಎಂದು ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್ ಹೇಳಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿ ಎಂದೂ ಜನರಿಂದ ಬಹುಮತ ಪಡೆಯದ ಬಿಜೆಪಿ ವಾಮ ಮಾರ್ಗದ ಮೂಲಕ ಅಧಿಕಾರ ಹಿಡಿದು ಹತ್ತಾರು ಹಗರಣ ಮಾಡಿ 40 ಪರ್ಸೆಂಟ್ ಸರ್ಕಾರ ಎಂಬ . ಪುಟ 2

## ಅದಾನಿ ಪ್ರಕರಣ ವಿಚಾರಣೆಗೆ ಅಮೆರಿಕ ಕೋರ್ಟ್ ಆದೇಶ

ನ್ಯೂಯಾರ್ಕ್: ದ್ಯಮಿ ಗೌತಮ್ ಅದಾನಿ ವಿರುದ್ದದ ಲಂಚ ಪ್ರಕರಣದ ತನಿಖೆಗೆ ಜಂಟಿ ಕ್ರಿಮಿನಲ್ ಮತ್ತು ಸಿವಿಲ್ ವಿಚಾರಣೆಗೆ ಅಮೆರಿಕಾ ನ್ಯಾಯಾಲಯ ಆದೇಶಿಸಿದೆ.ನ್ಯೂಯಾರ್ಕ್ ನ್ಯಾಯಾಲಯ ಕೈಗಾರಿಕೋದ್ಯಮಿ ಗೌತಮ್ ಅದಾನಿ ವಿರುದ್ಧದ ಮೂರು ಪ್ರಕರಣಗಳನ್ನು ಜಂಟಿ ವಿಚಾರಣೆಗೆ ಆದೇಶಿಸಿದೆ. ಸೋಲಾರ್ ಒಪ್ಪಂದಗಳಿಗೆ 265 ದಶಲಕ್ಷ ಡಾಲರ್ ಮೊತ್ತವನ್ನು ಲಂಚವಾಗಿ ನೀಡಿದ ಆರೋಪ ಇದಾಗಿದೆ.ಗೌತಮ್ ಅದಾನಿ ವಿರುದ್ಧ ಜಂಟಿ ವಿಚಾರಣೆಗಾಗಿ 3 ಪ್ರಕರಣಗಳನ್ನು ಸೇರಿಸಿ ತನಿಖೆಗೆ ಆದೇಶಿಸಿದ್ದು ಈ ನಿರ್ಧಾರದಿಂದ ನ್ಯಾಯಾಂಗ ದಕ್ಷತೆಯ ಪುಟ 2


## ಕೋಲಾರ ಬಂದ್: ಪ್ರಯಾಣಿಕರ ಪರದಾಟ



**ಕೋಲಾರ:** ಅಂಬೇಡ್ಕರ್ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆ ಖಂಡಿಸಿ ಪ್ರಗತಿಪರ ಸಂಘಟನೆಗಳು ಇಂದು ನಗರ ಬಂದ್‌ಗೆ ಕರೆ ನೀಡಿದ್ದ ಕಾರಣ, ಬೆಳಗ್ಗೆಯೇ ಪ್ರತಿಭಟನಾಕಾರರು ಬೀದಿಗಿಳಿದು ಆಕ್ರೋಶ ವ್ಯಕ್ತಪಡಿಸಿದರು. ಗುರುವಾರವೇ ನಗರದ ಪ್ರಮುಖ ರಸ್ತೆಗಳಲ್ಲಿ ಬೈಕ್ ರ್‍ಯಾಲಿ ಮೂಲಕ ಬಂದ್‌ಗೆ ಬೆಂಬಲ ನೀಡುವಂತೆ ಅಂಗಡಿ ಮಾಲೀಕರು ಹಾಗೂ ಸಾರ್ವಜನಿಕರಲ್ಲಿ ಮನವಿ ಮಾಡಿದ್ದರು. ಪುಟ 2

## ದರ ಏರಿಕೆಗೆ ಪ್ರತಿಭಟಿಸಿದ ಜನರ ಬಗ್ಗೆ ಕೇಂದ್ರ ಸಚಿವರ ಬೇಸರ

ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರಕಾರ ಬಸ್ ಪ್ರಯಾಣ ದರವನ್ನು ಶೇಕಡಾ 15ರಷ್ಟು ಹೆಚ್ಚಳ ಮಾಡಿರುವುದಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು; ಅಧಿಕಾರಕ್ಕೆ ಬಂದಾಗಿನಿಂದ ಈ ಸರಕಾರ ಜನರ ಮೇಲೆ ಬರೆ ಎಳೆಯುವುದು, ಅದನ್ನು ಜನರೂ ಭರಿಸಿಕೊಂಡು ಹೋಗುವುದು ಮಾಮೂಲಿ ಆಗಿಬಿಟ್ಟಿದೆ ಎಂದು ಹರಿಹಾಯ್ದರು.



ಈ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಉತ್ತರ ಕೊಟ್ಟ ಕೇಂದ್ರ ಸಚಿವರು; ಈ ರಾಜ್ಯದಲ್ಲಿ ಸರಕಾರ ಎನ್ನುವುದು ಇದೆಯಾ? ಇದನ್ನು ಸರಕಾರ ಎಂದು ಕರೆಯುತ್ತಾರಾ? ಈ ಸರಕಾರ ಬಂದಾಗಿನಿಂದ ಬರೀ ಬೆಲೆ ಏರಿಕೆ ಮಾಡುವುದೇ ಆಗಿದೆ ಎಂದು ಅವರು ಕಿಡಿಕಾರಿದರು.

ನಮ್ಮ ರಾಜ್ಯದಲ್ಲಿ ದರ ಏರಿಕೆ, ಬೆಲೆ ಏರಿಕೆ ಎನ್ನುವುದು ಅಚ್ಚರಿಯ ವಿಷಯ ಅಲ್ಲ. ಸರಕಾರ ಪ್ರಯಾಣ ದರವನ್ನು ಶೇಕಡಾ 15ರಷ್ಟು ಏರಿಕೆ ಮಾಡಿ ಜನರ ಮೇಲೆ ದೊಡ್ಡ ಬರೆ ಹಾಕಿದೆ. ಜನರೂ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಜನರಿಗೂ ಅಭ್ಯಾಸವಾಗಿ ಹೋಗಿದೆ. ಎರಡು ದಿನ ಆಕ್ರೋಶ ವ್ಯಕ್ತಪಡಿಸಿ

ಮೂರನೇ ದಿನ ಮರೆತು ಹೋಗಿ ಪ್ರಯಾಣ ದರ ಏರಿಕೆಗೇ ಅಡ್ಜೆಸ್ಟ್ ಆಗುತ್ತಾರೆ. ಇದು ನೈಜ ಪರಿಸ್ಥಿತಿ ಎಂದು ಕೇಂದ್ರ ಸಚಿವರು ಬೇಸರ ವ್ಯಕ್ತಪಡಿಸಿದರು.

**ಗ್ಯಾರಂಟಿ ಸಂತೋಷದಲ್ಲಿ ಜನರು ಆಕ್ರೋಶ ವ್ಯಕ್ತಪಡಿಸುತ್ತಿಲ್ಲ:**

ಇದೇ ಕಾಂಗ್ರೆಸ್ ಸರಕಾರ ಡಿಸೇಲ್, ಪೆಟ್ರೋಲ್ ಮೇಲೆ ಸೆಸ್ ಹಾಕಿತ್ತು. ಜನರು ಪ್ರತಿಭಟನೆ ಮಾಡಿದರೆ? ಪುಟ 2

## ಸಿಎಂ ಸಿದ್ಧು ಬಿಎಸ್‌ವೈ ಮಾದರಿ ಅನುಸರಿಸಲಿ

ಹುಬ್ಬಳ್ಳಿ: ಮೈಸೂರಿನ ಕೆಆರ್‌ಎಸ್ ರಸ್ತೆಗೆ ಸಿಎಂ ಸಿದ್ದರಾಮಯ್ಯನವರ ಹೆಸರಿಡುವ ವಿಚಾರಕ್ಕೆ



ಸಂಬಂಧಿಸಿದಂತೆ ಬಿಜೆಪಿ ಸಂಸದ ಜಗದೀಶ್ ಶೆಟ್ಟರ್ ಪ್ರತಿಕ್ರಿಯೆ ನೀಡಿದ್ದಾರೆ. ಈ ಕುರಿತು ಮಾಧ್ಯಮಗಳ ಜೊತೆ ಮಾತನಾಡಿರುವ ಸಂಸದ ಜಗದೀಶ್ ಶೆಟ್ಟರ್, ಸಿಎಂ ಸಿದ್ದರಾಮಯ್ಯನವರಿಗೆ ಯಾಕೆ ಈ ಆಸೆ ಹುಟ್ಟಿತು ಗೊತ್ತಿಲ್ಲ. ಸಿಎಂ ಸಿದ್ದರಾಮಯ್ಯ ಇದನ್ನ ಬೇಡ ಅಂದ್ರೆ ಎಲ್ಲಾ ಮುಗಿದು ಹೋಗುತ್ತದೆ. ಒಂದು ರಸ್ತೆಗೆ ಇಷ್ಟೆಲ್ಲಾ ವಿವಾದನಾ ಎಂದು ಟೀಕಿಸಿದರು. ಹಾಗೆಯೇ ಸಿಎಂ ಸಿದ್ದರಾಮಯ್ಯ ಅವರು ಬಿ.ಎಸ್. ಯಡಿಯೂರಪ್ಪ ಅವರ ಮಾದರಿ ಅನುಸರಿಸಲಿ ಎಂದು ಶೆಟ್ಟರ್ ಸಲಹೆ ನೀಡಿದರು.

## ಜಗತ್ತಿನ ಅತ್ಯುತ್ತಮ ಆಸ್ಪತ್ರೆಗಳಲ್ಲಿ ನಿಮ್ಹಾನ್ಸ್ ಕೂಡ ಒಂದು

**ಬೆಂಗಳೂರು:** ಜಗತ್ತಿನ ಅತ್ಯುತ್ತಮ 200 ಆಸ್ಪತ್ರೆಗಳಲ್ಲಿ ನಿಮ್ಹಾನ್ಸ್ (ಓಐಒಊಂಓಖ) ಕೂಡ ಒಂದಾಗಿದೆ. ನಿಮ್ಹಾನ್ಸ್ ಆಸ್ಪತ್ರೆಯಲ್ಲಿ ವಾರ್ಷಿಕ 7 ಲಕ್ಷ ಜನ ಚಿಕಿತ್ಸೆ ಪಡೆಯುತ್ತಾರೆ. ಹೊಸದಾಗಿ ಸಹ ಕೆಲವು ಸೇವೆಗಳನ್ನು ಆಸ್ಪತ್ರೆಯಲ್ಲಿ ಆರಂಭಿಸಲಾಗಿದೆ ಎಂದು ನಿಮ್ಹಾನ್ಸ್ ಅಧ್ಯಕ್ಷ ಮತ್ತು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ತಿಳಿಸಿದರು.

ಮಾನಸಿಕ ಆರೋಗ್ಯದ ಆರೈಕೆ ಜೊತೆಗೆ ರೋಗದ ಕುರಿತಾಗಿ ಸಾಮಾನ್ಯವಾಗಿ ಅಂಟಿಕೊಳ್ಳುವ ಸಮಾಜದ ನಕರಾತ್ಮಕ ದೃಷ್ಟಿಕೋನವನ್ನು ಬಹುತೇಕ ನಿವಾರಿಸುವಲ್ಲಿ ನಿಮ್ಹಾನ್ಸ್ ಯಶಸ್ವಿಯಾಗಿದೆ, ಪಾರ್ಶ್ವವಾಯು, ತೀವ್ರತರ ಮೆದುಳು ಕಾಯಿಲೆಗಳು ಮತ್ತು ನರರೋಗ ಚಿಕಿತ್ಸೆಯಲ್ಲಿ ಅತ್ಯುತ್ತಮ ಗುಣಮಟ್ಟವನ್ನು ಸಾಧಿಸುವ ಮೂಲಕ ಮಾನಸಿಕ ಸ್ವಾಸ್ಥ್ಯ ಕಾಪಾಡುವಲ್ಲಿ ನಿಮ್ಹಾನ್ಸ್ ಕೊಡುಗೆ ಶ್ಲಾಘನೀಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ನಗರದ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ ಆಯೋಜಿಸಿದ್ದ ಸುವರ್ಣ ಮಹೋತ್ಸವ




ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತಾನಾಡಿದರು.

ನಮ್ಮ ದೇಶದ ಹೆಮ್ಮೆಯ ಮಾನಸಿಕ ಆರೋಗ್ಯ ಮತ್ತು ನರರೋಗಗಳ ರಾಷ್ಟ್ರೀಯ ಸಂಸ್ಥೆ ನಿಮ್ಹಾನ್ಸ್ನ ಸುವರ್ಣ ಮಹೋತ್ಸವ ಆಚರಣೆಯಲ್ಲಿ ಪಾಲ್ಗೊಳ್ಳುವುದು ನನಗೆ ಅತ್ಯಂತ ಹೆಮ್ಮೆಯ ಸಂಗತಿ, ನಿಮ್ಹಾನ್ಸ್ ಕಳೆದ ಐದು ದಶಕಗಳ ಅವಧಿಯಲ್ಲಿ ದೇಶದ ಮಾನಸಿಕ ಆರೋಗ್ಯ ಹಾಗೂ ನರರೋಗಗಳ ಕ್ಷೇತ್ರದಲ್ಲಿ ಅಸಾಧಾರಣ ಕೊಡುಗೆ ನೀಡುತ್ತಾ ಬಂದಿದ್ದು, ದೇಶದ ಪ್ರಮುಖ ಸಂಸ್ಥೆಯಾಗಿ ತನ್ನ ಛಾಪು ಮೂಡಿಸಿದೆ,

ಮೈಸೂರು ಸರ್ಕಾರದ ಮಾನಸಿಕ ಆಸ್ಪತ್ರೆ ಮತ್ತು ಭಾರತೀಯ ಮಾನಸಿಕ ಆರೋಗ್ಯ ಸಂಸ್ಥೆಯನ್ನು ಒಗ್ಗೂಡಿಸುವ ಮೂಲಕ ಪ್ರಾರಂಭವಾದ ನಿಮ್ಹಾನ್ಸ್, ಮಾನಸಿಕ ಆರೋಗ್ಯ ಮತ್ತು ಶಿಕ್ಷಣಕ್ಕೆ ಮೀಸಲಾದ ಭಾರತದ ಪ್ರಪ್ರಥಮ ಸಂಸ್ಥೆ ಎಂಬ ಹೆಗ್ಗಳಿಕೆ ಹೊಂದಿದೆ ಎಂದವರು ಹೇಳಿದರು

ರಾಷ್ಟ್ರೀಯ ಮಹತ್ವವನ್ನು ಹೊಂದಿರುವ ಈ ಸಂಸ್ಥೆಯು ತನ್ನ ಐದು ದಶಕದ ಪಯಣದಲ್ಲಿ ಆರೈಕೆ, ಪುಟ 2

## ಅಂಬೇಡ್ಕರ್ ಸಂವಿಧಾನ ಕಲಬುರಗಿಯಲ್ಲಿ ಅನ್ವಯವಾಗುವುದಿಲ್ಲವೇ?

**ಬೆಂಗಳೂರು:** ಬಿಜೆಪಿ ನಾಯಕರ ಹಳೆಯ ಹೇಳಿಕೆಗಳು, ಅವುಗಳಿಗೆ ಸಂಬಂಧಿಸಿದ ವಿಡಿಯೋ ತುಣುಕಗಳನ್ನೇ ಮುಂದಿಟ್ಟುಕೊಂಡು ವಾಗ್ದಾಳಿ ನಡೆಸುತ್ತಿದ್ದ ಸಚಿವ ಪ್ರಿಯಾಂಕ್ ಖರ್ಗೆಗೆ ಅದೇ ಧಾಟಿಯಲ್ಲಿ ಪ್ರತಿಪಕ್ಷ ನಾಯಕ ಆರ್ ಅಶೋಕ್ ತಿರುಗೇಟು ನೀಡಿದ್ದಾರೆ. ಬಿಜೆಪಿ ಕಾರ್ಯಕರ್ತರು ಕಲಬುರಗಿ ಜಿಲ್ಲೆಗೆ ಕಾಲಿಡಂತೆ ಮಾಡುತ್ತೇವೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದ ಹಳೆಯ ವಿಡಿಯೋ ತುಣುಕನ್ನು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅಶೋಕ್, ಅಂಬೇಡ್ಕರ್ ಸಂವಿಧಾನ ಕಲಬುರಗಿಯಲ್ಲಿ ಅನ್ವಯವಾಗುವುದಿಲ್ಲವೇ ಎಂದು ಪ್ರಶ್ನಿಸಿದ್ದಾರೆ. ರಿಪಬ್ಲಿಕ್ ಆಫ್ ಕಲಬುರ್ಗಿಯ ನಿಜಾಮ ಜನಾಬ್ ಪ್ರಿಯಾಂಕ್ ಖರ್ಗೆ ಅವರು ಹೊರಡಿಸಿರುವ ಫತ್ವಾ ಏನು ಅಂತ ಒಮ್ಮೆ ಕೇಳಿ: "ಖರ್ಗೆ ಕುಟುಂಬದವರು ಮನಸ್ಸು ಮಾಡಿದರೆ ಬಿಜೆಪಿ ಕಾರ್ಯಕರ್ತರು ಕಲಬುರ್ಗಿ ಜಿಲ್ಲೆಗೆ ಕಾಲು ಇಡುವುದಕ್ಕೂ ಬಿಡುವುದಿಲ್ಲವಂತೆ!" ಜನಾಬ್ ಪ್ರಿಯಾಂಕ್ ಖರ್ಗೆ ಅವರೇ, ಎರಡು ಬಾರಿ ಸಚಿವರಾದ ಮಾತ್ರಕ್ಕೆ ತಾವು ಅಂಬೇಡ್ಕರ್ ಅವರಿಗಿಂತ ದೊಡ್ಡವರೂ ಅಂದುಕೊಂಡು ಬಿಟ್ಟಿದ್ದೀರಾ? ಅಂಬೇಡ್ಕರ್ ಅವರ ಸಂವಿಧಾನ ಕಲಬುರ್ಗಿಯಲ್ಲಿ ಅನ್ವಯ ಆಗುವುದಿಲ್ಲವೇ? ಅಲ್ಲಿ ಬಿಜೆಪಿ ಕಾರ್ಯಕರ್ತರಿಗೆ ಸಂವಿಧಾನ ನೀಡಿರುವ ಮೂಲಭೂತ ಹಕ್ಕುಗಳು ಸಿಗುವುದಿಲ್ಲವೇ ಎಂದು ಅಶೋಕ್ ಪ್ರಶ್ನಿಸಿದ್ದಾರೆ. ತಾವೂ ನಿಜಾಮರೂ ಅಲ್ಲ, ತಮ್ಮ ಹಿಂಬಾಲಕರು ರಜಾ ಕರರೂ ಅಲ್ಲ. ಅಧಿಕಾರದ ಮದದಲ್ಲಿ ಮೈಮರೆತು ತಾವೊಬ್ಬ ಜನಪ್ರತಿನಿಧಿ, ಜನಸೇವಕ ಅನ್ನೋದನ್ನು ಮರೆಯಬೇಡಿ ಎಂದು ಅಶೋಕ್ ಕಿಡಿಕಾರಿದ್ದಾರೆ.

## ಸಿದ್ದರಾಮಯ್ಯನವರೇ ಮುಖ್ಯಮಂತ್ರಿಯಾಗಿ ಮುಂದುವರಿಯುತ್ತಾರೆ!

**ಬೆಂಗಳೂರು:** ರಾಜ್ಯದ ಮುಖ್ಯ ಮಂತ್ರಿಯಾಗಿ ಸಿದ್ದರಾಮಯ್ಯ ಅವರೇ ಮುಂದುವರಿಯುತ್ತಾರೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಎಚ್‌ಸಿ ಮಹದೇವಪ್ಪ ಅವರು ಭವಿಷ್ಯ ನುಡಿದರು. ಶುಕ್ರವಾರ ಮಾತನಾಡಿದ ಅವರು, ಸಿದ್ದರಾಮಯ್ಯ ಪರವಾಗಿ ಮತ್ತೊಮ್ಮೆ ಬ್ಯಾಟಿಂಗ್ ಮಾಡಿದ್ದಾರೆ.

ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿದ್ದಾರೆ. ಮುಂದಿನ ದಿನಗಳಲ್ಲೂ ಸಿದ್ದರಾಮಯ್ಯನವರೇ ಸಿಎಂ ಆಗಿ ಮುಂದುವರೆಯುತ್ತಾರೆ. ಯಾಕೆ ಈ ವಿಚಾರದಲ್ಲಿ ಪದೇ ಪದೇ ಪ್ರಶ್ನೆ ಎಂದ ಬರುತ್ತಿದೆ ಎಂದು ಮರು ಪ್ರಶ್ನಿಸಿದರು. ಅಲ್ಲದೆ, ಸರ್ಕಾರದ ವಿರುದ್ಧ ವಿಪಕ್ಷಗಳ ಆರೋಪಗಳಿಗೆ ಪರಿಣಾಮಕಾರಿ ಪ್ರತ್ಯುತ್ತರ ಕೊಡುವ ಬಗ್ಗೆ ಔತಣಕೂಟದಲ್ಲಿ ಚರ್ಚೆ ಮಾಡಿದ್ದೇವೆ. ಅದರ ಹೊರತಾಗಿ ಸಂಪುಟ ಪುನರ್ ರಚನೆ ಬಗ್ಗೆ ಚರ್ಚೆ ಆಗಲಿಲ್ಲ. ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ, ಹೆಚ್ಚುವರಿ ಡಿಸಿಎಂ ಸ್ಥಾನ ಸೃಷ್ಟಿ ವಿಚಾರ ಚರ್ಚೆ ಆಗಿಲ್ಲ. ಇವೆಲ್ಲವೂ ಹೈಕಮಾಂಡ್‌ಗೆ ಬಿಟ್ಟ ವಿಚಾರವಾಗಿ ಎಂದರು.

**ರಸ್ತೆಗೆ ಹೆಸರಿಡಲು ವಿರೋಧ ಏಕೆ?:** ಇನ್ನು ಇದೇ ಸಂದರ್ಭದಲ್ಲಿ ಮೈಸೂರು ರಸ್ತೆಗೆ ಸಿದ್ದರಾಮಯ್ಯ ಹೆಸರು ಇಡುವ ವಿಚಾರವಾಗಿ ಮಾತನಾಡಿದ ಅವರು, ಹೆಸರಿಡುವುದು ಏನು ದೊಡ್ಡ ವಿಚಾರನಾ? ಅದರಲ್ಲಿ ವಿವಾದ ಯಾಕೆ? ಸಿದ್ದರಾಮಯ್ಯ ಅವರೇನು ಅರ್ಜಿ ಹಾಕಿದ್ದಾರಾ ನನ್ನ ಹೆಸರು ಇಡಿ ಅಂತ? ಸ್ಥಳಿಯವಾಗಿ ಒತ್ತಾಯ ಮಾಡಿದ್ದಾರೆ ಸಿದ್ದರಾಮಯ್ಯ ಹೆಸರಿಡಿ ಅಂತ ಎಂದು ಸಮರ್ಥಿಸಿಕೊಂಡರು. ರಸ್ತೆಗೆ ಸಿದ್ದರಾಮಯ್ಯ ಹೆಸರಿಟ್ಟರು ಹೆಸರು ಇಡದಿದ್ದರು ಜನರ ಮನಸ್ಸಿಲ್ಲಿ ಸಿದ್ದರಾಮಯ್ಯ ಇದ್ದೆ ಇದ್ದಾರೆ. ರಸ್ತೆಗೆ ಹೆಸರಿಡುವ ವಿಚಾರ ಸ್ಥಳೀಯ ಆಡಳಿತ ನೋಡಿಕೊಳ್ಳುತ್ತದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

# ಬೀದಿ ಬದಿ ವ್ಯಾಪಾರಿಗಳ ಸಭೆ



ಚಿಕ್ಕಬಳ್ಳಾಪುರ: ನಗರದ ಪ್ರಮುಖ ಬಿಬಿ ರಸ್ತೆಯಲ್ಲಿ ಉಪಾಹಾರ, ಕಬಾಬ್ ಹಾಗೂ ಇತರೆ ಬೀದಿ ಬದಿ ವ್ಯಾಪಾರಸ್ಥರು ಫುಟ್ ಪಾತ್ತನ್ನು ಬಿಡದೆ ಎಲ್ಲಿಂದರಲ್ಲಿ ಅಂಗಡಿ ಜೋಡಿಸಿ ವ್ಯಾಪರ ಮಾಡುತ್ತಿದ್ದು, ಟ್ರಾಫಿಕ್ ಸಮಸ್ಯೆ ಉಂಟಾಗಿರುವ ಬಗ್ಗೆ ಜನಸಾಮಾನ್ಯರಿಂದ ವ್ಯಾಪಕ ದೂರುಗಳು ಬಂದಿದ್ದು,ನಗರಸಭೆ ಅಧ್ಯಕ್ಷ ಗಜೇಂದ್ರ ಉಪಾಧ್ಯಕ್ಷ ನಾಗರಾಜ್.ಜೆ ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ,ಒಳಗೊಂಡಂತೆ ಇಂದು ನಗರಸಭೆ ಸಭಾಂಗಣದಲ್ಲಿ ಬೀದಿ ಬದಿ ವ್ಯಾಪಾರಿಗಳ ಸಭೆ ಏರ್ಪಡಿಸಲಾಗಿತ್ತು.

ನಗರಸಭೆ ಅಧ್ಯಕ್ಷ ,ಉಪಾಧ್ಯಕ್ಷ ಹಾಗೂ ನಗರಸಭೆ ಪೌರಾಯುಕ್ತರು ಬೀದಿ ಬದಿಯ ವ್ಯಾಪಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರಸಭೆ ಅಧ್ಯಕ್ಷ ಗಜೇಂದ್ರ ಮಾತನಾಡಿ ಫುಟ್ ಪಾಥ್ ಜಾಗದಲ್ಲಿ ಅಂಗಡಿ ಜೋಡಿಸುವುದರಿಂದ ನಡೆಯಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿತ್ತು ಹಾಗೂ ಉಪಾಹಾರ ಸವಿಯಲು ಬರುವವರು ಎಲ್ಲಿಂದರಲ್ಲಿ ವಾಹನ ನಿಲ್ಲಿಸುವುದರಿಂದ ಬಹಳಷ್ಟು ಟ್ರಾಫಿಕ್ ಸಮಸ್ಯೆ ಉಂಟಾಗಿರುವ ಬಗ್ಗೆ ವ್ಯಾಪಕ ದೂರುಗಳು ಕೇಳಿ ಬಂದಿದ್ದು, ಬೀದಿ ಬದಿಯ ವ್ಯಾಪಾರಿಗಳಿಗೆ ಒಂದಿಷ್ಟು ಸೂಚನೆಗಳನ್ನ ನೀಡಲಾಗಿದೆ. ಪ್ರಮುಖವಾಗಿ ಗುಣಮಟ್ಟ ಆಹಾರ,ಪ್ಲಾಸ್ಟಿಕ್ ಬಳಕೆ ಮಾಡಬಾರದು,ನೈರ್ಮಲ್ಯ ಕಾಪಾಡಲು ಸಲಹೆ ಸೂಚನೆಗಳು ನೀಡಿದ್ದೇವೆ ಇನ್ನು ಪರವಾನಗಿ ಪಡೆಯಲು ಕೊಡ ಸೂಚಿಸಿದ್ದು ಅಂಗಡಿಗಳನ್ನು ಇಡುವ ಸಮಯದ ಬಗ್ಗೆ ಕೂಡ ಸೂಚಿಸಲಾಗಿದೆ,

ಪ್ರಮುಖವಾಗಿ ಆಹಾರ ಸೇವಿಸಲು ಬರುವವರೆಗೆ ವಾಹನ ನಿಲ್ಲಿಸಲು ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳಬೇಕು ಗಾಡಿ ಮುಂದೆಯೇ ವಾಹನ ನಿಲ್ಲಿಸಲು ಬಿಡಬಾರದು. ಇಂದು ನೀಡಿರುವ ಸೂಚನೆಗಳನ್ನು ಚಾಚು ತಪ್ಪದೆ ಪಾಲಿಸಬೇಕು ಇಲ್ಲವಾದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದರು.

ನಗರಸಭೆ ಉಪಾಧ್ಯಕ್ಷ ನಾಗರಾಜ್.ಜೆ ಮಾತನಾಡಿ ಫುಟ್ ಪಾಥ್ ವ್ಯಾಪಾರಸ್ಥರ ಬಗ್ಗೆ ಬಂದ ದೂರಿನ ಹಿನ್ನೆಲೆಯಲ್ಲಿ ಇಂದು ವ್ಯಾಪಾರಸ್ಥರ ಜೊತೆ ಸಭೆ ನಡೆಸಿದ್ದು ಫುಟ್ ಪಾಥ್ ವ್ಯಾಪಾರಸ್ಥರು ವ್ಯಾಪಾರದ ವೇಳೆ ಏನೆಲ್ಲ ಪಾಲಿಸಬೇಕು ಎಲ್ಲವನ್ನೂ ಸೂಚನೆ ನೀಡಿದ್ದು ಅದನ್ನ ಪಾಲಿಸಬೇಕು,ಇನ್ನು

ಚಿಕ್ಕಬಳ್ಳಾಪುರ ಪ್ರವಾಸಿ ತಾಣಯಾಗಿದೆ ನಗರಕ್ಕೆ ಜನರ ಆಗಮನ ಹೆಚ್ಚಾಗಿದೆ ಟ್ರಾಫಿಕ್ ಕೂಡ ಜ್ಯಾಸ್ತಿಯಾಗಿದೆ ಬಿಬಿ ರಸ್ತೆಯಲ್ಲಿ ಅಧಿಕವಾಗಿ ವಾಹನ ಸಂಚಾರ ಇದ್ದು ಬೀದಿ ಬದಿ ವ್ಯಾಪಾರಸ್ಥರಿಂದ ಟ್ರಾಫಿಕ್ ಸಮಸ್ಯೆ ಉಂಟಾಗಬಾರದು. ಈಗಾಗಲೇ ವ್ಯಾಪಾರಸ್ಥರ ಬಗ್ಗೆ ವ್ಯಾಪಕ ದೂರುಗಳು ಕೇಳಿ ಬಂದಿವೆ ಹಾಗಾಗಿ ಕ್ರಮ ಕೈಗೊಳ್ಳುವ ಮುಂಚಿತವಾಗಿ ಅವರಿಗೆ ಕಲವು ಸೂಚನೆಗಳನ್ನ ನೀಡಲು ಇಂದು ನಗರಸಭೆ ಅಧ್ಯಕ್ಷರು ಸಭೆ ಕರೆದ್ದಿದ್ದು ಬೀದಿ ಬದಿ ವ್ಯಾಪಾರಿಗಳಿಗೆ ಅನುಸರಿಸಬೇಕಾದಂತಹ ವಿಧಾನಗಳನ್ನು ತಿಳಿಸಲಾಗಿದೆ. ಅದನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಇಲ್ಲವಾದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು.

ಇನ್ನು ಆರೋಗ್ಯಕ್ಕೆ ಹಾನಿ ಉಂಟುಮಾಡುವ ಪದಾರ್ಥಗಳನ್ನು ಬಳಕೆ ಮಾಡಬಾರದು ಜನರ ಆರೋಗ್ಯದ ಬಗ್ಗೆ ಚೆಲ್ಲಾಟ ಮಾಡದಿರಿ ಚಿಕ್ಕಬಳ್ಳಾಪುರ ಘನತೆ ಗೌರವ ಉಳಿಸಿ ಹೊರಗಿನಿಂದ ಬರುವ ಜನರಿಗೆ ಉತ್ತಮ ಗುಣಮಟ್ಟದ ಆಹಾರ ನೀಡಿ ಎಂದು ಸಲಹೆ ನೀಡಿದರು.

ನಗರಸಭೆ ಪೌರಾಯುಕ್ತ ಮನ್ಸೂರ್ ಅಲಿ ಮಾತನಾಡಿ ಬೀದಿ ಬದಿ ವ್ಯಾಪಾರಿಗಳು ಫುಟ್ ಪಾಥ್ ಪಾದಚಾರಿಗಳಿಗೆ ತಂದರೂ ಆಗದಂತೆ ನೋಡಿಕೊಳ್ಳಬೇಕು ಗಾಡಿ ಮುಂದೆಯೇ ವಾಹನ ನಿಲುಗಡೆಗೆ ಅವಕಾಶ ನೀಡಬಾರದು ವಾಹನ ನಿಲ್ಲಿಸದರೆ ವಾಹನಗಳ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗುತ್ತೆ ಈ ಸಮಯದಲ್ಲಿ ಏನಾದರೂ ಅನಾಹುತ ಸಂಭವಿಸಿದರೆ ಅದಕ್ಕೆ ಕಾರಣ ಯಾರು ಹಾಗಾಗಿ ಗ್ರಾಹಕರ ವಾಹನಗಳ ನಿಲುಗಡೆಗೆ ವ್ಯವಸ್ಥೆ ನೀವೇ ಮಾಡಿಕೊಳ್ಳಬೇಕು ಸಾರ್ವಜನಿಕರಿಗೆ ತೊಂದರೆ ಉಂಟು ಮಾಡಿದೆ ನಿಮ್ಮ ವ್ಯಾಪಾರ ವಹಿವಾಟು ನಡೆಸಿಕೂಳ್ಳಬೇಕೆಂದರು.

ಅಮರ್ ಮಾತನಾಡಿ ಬಿಬಿ ರಸ್ತೆಯಲ್ಲಿನ ಬೀದಿ ಬದಿ ವ್ಯಾಪಾರಸ್ಥರು ರಸ್ತೆಯ ಎರಡು ಬದಿ ಅಂಗಡಿ ಇಟ್ಟುಕೊಂಡಿದ್ದು ಟ್ರಾಫಿಕ್ ಕಿರಿಕಿರಿ ಅನುಭವಿಸುವಂತಾಗಿದೆ ಇನ್ನು ನಿಮ್ಮ ಬಳಿ ಬರುವವರೆಗೆ ವಾಹನ ನಿಲುಗಡೆಗೆ ವ್ಯವಸ್ಥೆ ಮಾಡಿಕೊಡಿ ಎಲ್ಲೆಂದರಲ್ಲಿ ಅಲ್ಲಿ ವಾಹನ ನಿಲ್ಲಿಸುತ್ತಿರುವ ಕಾರಣ ಟ್ರಾಫಿಕ್ ಸಮಸ್ಯೆ ಉಂಟಾಗಿದ್ದು ನಾವು ನೀಡಿರುವ ಸೂಚನೆಗಳನ್ನು ಪಾಲಿಸಿ ಇಲ್ಲವಾದಲ್ಲಿ ಕ್ರಮ ಕೈಗೊಳ್ಳಲಾಗುವುದು ಇನ್ನು ನಿಗದಿತ ಸಮಯದಲ್ಲಿ ವ್ಯಾಪಾರ ವಹಿವಾಟು ಮುಗಿಸಬೇಕು ಬಳಿಕ ಅವಕಾಶ ಇರುವುದಿಲ್ಲ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಕಚೇರಿ ಜಿಲ್ಲಾ ವ್ಯವಸ್ಥಾಪಕರು ವೆಂಕಟಚಲಪತಿ,ಟ್ರಾಫಿಕ್ ಪೊಲೀಸ್ ಎ ಎಸ್ ಐ ನಾಗರಾಜ್, ಆಹಾರ ನಿರೀಕ್ಷಕರಾದ ಹರೀಶ್,ಪರಿಸರ ಅಭಿಯಂತರ ಉಮಾಶಂಕರ್ ಮತ್ತು ಇತರರು ಉಪಸ್ಥಿತರಿದ್ದರು.

## 2020ರಲ್ಲಿ ಹೆಚ್ಚಿಸಿದಾಗ ಜನರ ತೊಂದರೆ ತಿಳಿಯಲಿಲ್ಲವೇ?

**ಬೆಂಗಳೂರು:** ಬಸ್ ಪ್ರಯಾಣ ದರ ಏರಿಕೆ ಖಂಡಿಸಿ ಪ್ರತಿಭಟನೆಗೆ ಮುಂದಾಗಿರುವ ಬಿಜೆಪಿಗೆ ಸಾರಿಗೆ ಸಚಿವ ರಾಮಲಿಂಗರೆಡ್ಡಿ ಟಾಂಗ್ ನೀಡಿದ್ದಾರೆ. ಈ ಕುರಿತು ಮಾತನಾಡಿದ ಸಚಿವ ರಾಮಲಿಂಗರೆಡ್ಡಿ, ಕೇಂದ್ರ ಸರ್ಕಾರದಲ್ಲಿರುವ ಬಿಜೆಪಿ ಡಾಲರ್ ಬೆಲೆ ಕಡಿಮೆಯಾದರೂ ಪೆಟ್ರೋಲ್ ಡೀಸೆಲ್ ಬೆಲೆ ಕಳೆದ 9 ವರ್ಷಗಳಿಂದ ಕಡಿಮೆ ಮಾಡಿಲ್ಲ, ಇದೇ ಬಿಜೆಪಿ ತಾನು ಆಡಳಿತದಲ್ಲಿದ್ದಾಗ 2020ರಲ್ಲಿ ಬಸ್ ಪ್ರಯಾಣ ದರ ಏರಿಕೆ ಮಾಡಿದ್ದರು, ಆಗ ಅವರಿಗೆ ಜನರ ತೊಂದರೆ ತಿಳಿಯಲಿಲ್ಲವೇ? ಎಂದು ಕಟಕಿಯಾಡಿದ್ದಾರೆ.

ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿ ನೋಡಿದರೇ ನಮ್ಮ ರಾಜ್ಯದಲ್ಲೇ ಪ್ರಯಾಣದರ ಕಡಿಮೆ ಇದೆ, ಈಗಲಾದರೂ ಬಿಜೆಪಿಯವರು ಕೇವಲ ಸುಳ್ಳು ಹೇಳಿ ತನ್ನ ಫೇಕ್ ವಾಟ್ಸಪ್ ಸೋಷಿಯಲ್ ಮೀಡಿಯಾ ಯೂನಿವರ್ಸಿಟಿಯಿಂದ ಜನರ ದಾರಿ ತಪ್ಪಿಸುವುದನ್ನು ಬಿಡಬೇಕು ಎಂದು ಸಲಹೆ ನೀಡಿದ್ದಾರೆ.

## ಶಕ್ತಿ ಕೇಂದ್ರಗಳ ಕಟ್ಟಡದಲ್ಲಿ ಪ್ರವಾಸಿತಾಣಗಳ ಛಾಯಾಚಿತ್ರಗಳ ಮೆರಗು

**ಬೆಂಗಳೂರು:** ಶಕ್ತಿ ಕೇಂದ್ರಗಳಾದ ವಿಧಾನಸೌಧ, ವಿಕಾಸಸೌಧದಲ್ಲಿ ಪ್ರವಾಸೋದ್ಯಮ ಇಲಾಖೆ ವತಿಯಿಂದ ಪ್ರಖ್ಯಾತ ಪ್ರವಾಸಿ ತಾಣಗಳ ಛಾಯಾಚಿತ್ರಗಳನ್ನ ಅಳವಡಿಕೆ ಮಾಡಲಾಗಿದ್ದು ಸಿಎಂ ಸಿದ್ದರಾಮಯ್ಯ ಅವುಗಳನ್ನ ಅನಾವರಣಗೊಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರವಾಸೋದ್ಯಮ ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಹೆಚ್. ಕೆ. ಪಾಟೀಲ್ ಅವರು ವಿಧಾನಸೌಧದ ಕ್ಯಾಬಿನೆಟ್ ಹಾಲ್ ಮುಂಭಾಗ ಕಳೆದ ವರ್ಷ ಯುನೆಸ್ಕೋ ಪಟ್ಟಿಗೆ ಸೇರಿದ ಚೆನ್ನಕೇಶವ ದೇವಾಲಯ, ಸೋಮನಾಥಪುರ ಹಾಗೂ ವಿಷ್ಣು ಮೂರ್ತಿ, ಗುಹಾಂತರ ದೇವಾಲಯ ಬಾದಾಮಿಯ ಛಾಯಾಚಿತ್ರಗಳನ್ನು ಅನಾವರಣಗೊಳಿಸಿದರು.

ವಿಧಾನಸೌಧದಲ್ಲಿ ವಿಜಯಪುರದ ಗೋಲಗುಮ್ಮಟ, ವೀರನಾರಾಯಣ ದೇವಾಲಯ, ಗದಗ, ಪಟ್ಟದಕಲ್ಲು, ಹಂಪಿ, ಮೈಸೂರು ದಸರಾ, ಮೈಸೂರು ಅರಮನೆಯ ದರ್ಬಾರ್ ಹಾಲ್, ಜೋಗ ಜಲಪಾತ, ಕಬಿನಿ, ಯಕ್ಷಗಾನ, ಕಂಬಳ ಮತ್ತು ಕರ್ನಾಟಕ ರಾಜ್ಯದ ಭೌಗೋಳಿಕ ಸೂಚ್ಯಂಕದ ಉತ್ಪನ್ನಗಳ ಛಾಯಾಚಿತ್ರಗಳನ್ನು ಅಳವಡಿಸಲಾಗುತ್ತಿದೆ. ವಿಧಾನಸೌಧ ಹಾಗೂ ವಿಕಾಸಸೌಧ ಕಟ್ಟಡಗಳ ಸೌಂದರ್ಯವನ್ನು ಹೆಚ್ಚಿಸಲು ಹಾಗೂ ನಮ್ಮ ರಾಜ್ಯದ ಪ್ರಖ್ಯಾತ ಪ್ರವಾಸಿ ತಾಣಗಳು, ಶಿಲ್ಪಕಲೆ, ಪಾಕಶೈಲಿ ಮತ್ತು ಸಂಸ್ಕೃತಿಯನ್ನು ಪ್ರಚಾರಪಡಿಸುವ ಹಿತದೃಷ್ಟಿಯಿಂದ ಪ್ರವಾಸೋದ್ಯಮ ಇಲಾಖಾ ವತಿಯಿಂದ ಛಾಯಾಚಿತ್ರಗಳನ್ನು ಅಳವಡಿಸಲಾಗುತ್ತಿದೆ.

## ಎಚ್.ಟಿ.ಬಳಿಗಾರ್ ಅವರ ನಿಧನಕ್ಕೆ ವಿಜಯೇಂದ್ರ ಸಂತಾಪ

**ಬೆಂಗಳೂರು:** ನಿವೃತ್ತ ಕೆಎಎಸ್ ಅಧಿಕಾರಿ, ರಾಜ್ಯ ಉಗ್ರಾಣ ನಿಗಮದ ಮಾಜಿ ಅಧ್ಯಕ್ಷ ಹಾಗೂ ಪಕ್ಷದ ಮುಖಂಡರಾಗಿದ್ದ ಎಚ್.ಟಿ.ಬಳಿಗಾರ್ ಅವರು ಹಠಾತ್ ನಿಧನ ಹೊಂದಿದ ಸುದ್ದಿ ದುಃಖ ತರಿಸಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತೀವ್ರ ಸಂತಾಪ ಸೂಚಿಸಿದ್ದಾರೆ.

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಅನನ್ಯ ಸೇವೆ ಸಲ್ಲಿಸಿ, ಶಿಕಾರಿಪುರ ಕ್ಷೇತ್ರದಲ್ಲಿ 2 ಬಾರಿ ಸ್ಪರ್ಧಿಸಿದ್ದ ಸಾಮಾಜಿಕ ಕಳಕಳಿಯುಳ್ಳ ಸರಳ ವ್ಯಕ್ತಿತ್ವದ ಬಳಿಗಾರ್ ಅವರು ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ವಾಲ್ಮೀಕಿ ಸಮುದಾಯವನ್ನು ಸಂಘಟಿಸುವಲ್ಲಿಯೂ ತಮ್ಮನ್ನು ತೊಡಗಿಸಿಕೊಂಡು, ಶಿಕಾರಿಪುರದಲ್ಲಿ ಪಕ್ಷ ಸಂಘಟನೆಗೆ ಮಹತ್ವದ ಕೊಡುಗೆ ನೀಡಿರುವ ಅವರ ನಿಧನದಿಂದ ಪಕ್ಷಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ತಿಳಿಸಿದ್ದಾರೆ.

ಅವರ ಕುಟುಂಬಸ್ಥರು, ಬಂಧುಗಳು, ಹಿತೈಷಿಗಳು ಹಾಗೂ ಅಭಿಮಾನಿಗಳಿಗೆ ಅಗಲಿಕೆಯ ನೋವು ಸಹಿಸುವ ಶಕ್ತಿಯನ್ನು ಭಗವಂತನು ಕರುಣಿಸಲಿ. ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಎಂದು ಪ್ರಾರ್ಥಿಸಿದ್ದಾರೆ.




**ನಗರದ ಅರಮನೆ ಗಾಯತ್ರಿ ವಿಹಾರದಲ್ಲಿ ಮೂರು ದಿನಗಳ ಕಾಲ ಹಮ್ಮಿಕೊಂಡಿರುವ ಫಸ್ಟ್ ಸರ್ಕಲ್ ಉದ್ಯಮಿ ಒಕ್ಕಲಿಗ ಎಕ್ಸ್‌ಪೋ 2025ರ ಉದ್ಘಾಟನೆಯನ್ನು ಆದಿ ಚುಂಚನಗಿರಿ ಮಠದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ನೆರವೇರಿಸಿದರು. ಕಾರ್ಯಕ್ರಮದಲ್ಲಿ ಸಚಿವ ಚಲುವರಾಯಸ್ವಾಮಿ ಮಾಜಿ ಉಪ ಮುಖ್ಯ ಮಂತ್ರಿ ಮತ್ತು ಶಾಸಕರಾದ ಅಶ್ವಥ್ ನಾರಾಯಣ್ ಮಾಜಿ ಸಚಿವರು ಹಾಗು ಶಾಸಕರಾದ ಕೆ ಗೋಪಾಲಯ್ಯ ಎಫ್ ಕೆ ಸಿ ಸಿ ಐ ಅಧ್ಯಕ್ಷ ಬಾಲಕೃಷ್ಣ ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಕೆಂಚಪ್ಪಗೌಡ, ಬಿ ಎಲ್ ಶಂಕರ್ ಸೇರಿದಂತೆ ಸಮುದಾಯದ ಅಧಿಕಾರಿಗಳು ಹಾಗು ಉದ್ಯಮಿಗಳು ಉಪಸ್ಥಿತರಿದ್ದರು.**

ಮೊದಲ ಪುಟದಿಂದ

## ದರ ಏರಿಕೆಗೆ ಆಕ್ರೋಶ

ಎಂಬುದನ್ನು ಇದೀಗ ಶೇ.15ರಷ್ಟು ಬಸ್ ಪ್ರಯಾಣ ದರ ಏರಿಸುವ ಮೂಲಕ ಸಾರಿಗೆ ವ್ಯವಸ್ಥೆ ಆಶ್ರಯಿಸಿರುವ ಜನರಿಗೆ ಬರೆ ಎಳೆದಿದ್ದೀರಿ.ಶಕ್ತಿ ಯೋಜನೆ ಹೇಗಾಗಿದೆ ಎಂದರೆ ವಾಣಿಜ್ಯ ಉತ್ಪನ್ನಗಳ ಮಾರಾಟದ ಆಕರ್ಷಣೆಗೆ ಮಳಿಗೆಗಳಲ್ಲಿ ಬೈ–1 ಗೆಟ್–2 (ಒಂದು ಖರೀದಿಸಿದರೆ–ಒಂದು ಉಚಿತ) ಬೋರ್ಡ್ ಪ್ರದರ್ಶಿಸುವ ಮಾದರಿಯಲ್ಲಿ ರಾಜ್ಯದ ಜನರಿಗೆ ಟೋಪಿ ಹಾಕಲು ಹೊರಟಿದ್ದೀರಿ. ಶೇ.15 ರಷ್ಟು ಸಾರಿಗೆ ದರ ಹೆಚ್ಚಳದ ಕಾಂಗ್ರೆಸ್ ಸರ್ಕಾರದ ನಿರ್ಧಾರ ಅವೈಜ್ಞಾನಿಕ ಹಾಗೂ ಜನವಿರೋಧಿಯಾಗಿದ್ದು ಇದನ್ನು ವಿರೋಧಿಸಿ ಬಿಜೆಪಿ ಜನರ ಪರ ದನಿ ಎತ್ತಲಿದೆ ಎಂದು ತಿಳಿಸಿದ್ದಾರೆ.

ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಬಿಜೆಪಿ ನಾಯಕರು ಪ್ರವೇಶಿಸುತ್ತಿದ್ದ ವೇಳೆ ಪೊಲೀಸರು ತಡೆದರು. ಇದರಿಂದ ಆಕ್ರೋಶಗೊಂಡ ವಿಪಕ್ಷ ನಾಯಕ ಆರ್. ಅಶೋಕ್ "ವಶಕ್ಕೆ ಪಡೆದರೆ ಕೋರ್ಟ್‌ಗೆ ಹೋಗುವೆ. ನಾವು ಪ್ರತಿಭಟನೆ ಮಾಡಲು ಬಂದಿಲ್ಲ. ಪ್ರಯಾಣಿಕರಿಗೆ ಹೂವು ಕೊಡಲು ಬಂದಿದ್ದೆನೆ. ಹೊಡಿಯುತ್ತೀಯಾ, ಹೊಡಿ, ಹೊಡಿ, ಏಯ್ ನಾನು ವಿರೋಧ ಪಕ್ಷದ ನಾಯಕ, ನನ್ನನ್ನು ಮುಟ್ಟಿದರೆ ಹುಷಾರ್. ಜನ್ಮದಲ್ಲಿ ನೆನಪಿನಲ್ಲಿಟ್ಟುಕೊಳ್ಳಬೇಕು ಹಾಗೆ ಮಾಡುವೆ." ಎಂದು ಅಬ್ಬರಿಸಿದರು.

ಪ್ರತಿಭಟನೆಯಲ್ಲಿ ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್, ಬಿಜೆಪಿ ಮುಖಂಡ ಸಪ್ತಗಿರಿಗೌಡ ಸೇರಿದಂತೆ ಪ್ರಮುಖರು ಮತ್ತು ಕಾರ್ಯಕರ್ತರು ಭಾಗಿಯಾಗಿದ್ದರು.

## ಬೌದ್ಧಿಕ ದಿವಾಳಿಯಾಗಿದೆ

ಕುಖ್ಯಾತಿ ಪಡೆದು ಜನರಿಂದ ತಿರಸ್ಕೃತ ವಾಗಿದೆ. ಪ್ರತಿ ಪಕ್ಷ ಸ್ಥಾನದ ಜವಾಬ್ದಾರಿ ಯನ್ನೂ ಸರಿಯಾಗಿ ನಿಭಾಯಿಸದೆ ವಿಫಲಗೊಂಡು ಇದೀಗ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ಎಂಬ ಹೊಸ ನಾಟಕ ಆರಂಭಿಸಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದ್ದಾರೆ.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆ ಅನುಷ್ಠಾನ ಹಾಗೂ ಜನಪರ ತೀರ್ಮಾನ ಗಳನ್ನು

ಬಿಜೆಪಿ ಗೆ ಸಹಿಸಲು ಆಗುತ್ತಿಲ್ಲ, ಹೀಗಾಗಿ ಅನಗತ್ಯ ವಿಷಯ ಮುಂದಿಡುತ್ತಿದೆ. ಮೊದಲಿಗೆ ಮುಡಾ ಆಯ್ತು, ನಂತರ ವಕ್ಫ್ ಆಯ್ತು, ಇದೀಗ ಗುತ್ತಿಗೆದಾರ ಸಚಿನ್ ಪಂಚಾಳ್ ಆತ್ಮಹತ್ಯೆ ಪ್ರಕರಣ ದಲ್ಲಿ ಹೋರಾಟ ಎಂದು ಹೇಳಿದೆ. ರಾಜಕೀಯವಾಗಿ ಪ್ರಿಯಾಂಕ್ ಖರ್ಗೆ ಅವರನ್ನು ಎದುರಿಸಲು ಸಾಧ್ಯವಾಗದೆ ಅವರಿಗೆ ಸಂಬಂಧವೇ ಇಲ್ಲದ ಅವರ ಪಾತ್ರವೇ ಇರದ ಸಚಿನ್ ಆತ್ಮಹತ್ಯೆ ಪ್ರಕರಣ ದಲ್ಲಿ ರಾಜೀನಾಮೆ ಕೇಳುತ್ತಿರುವುದು ಬಿಜೆಪಿಯವರ ಎಳಸುತನಕ್ಕೆ ಸಾಕ್ಷಿ ಎಂದು ಜಮೀರ್ ಅಹಮದ್ ಖಾನ್ ಲೇವಡಿ ಮಾಡಿದ್ದಾರೆ.ವಕ್ಫ್ ವಿಚಾರದಲ್ಲಿ ಅಧಿವೇಶನ ದಲ್ಲಿ ಎರಡೂ ಸದನಗಳಲ್ಲಿ ಸಮರ್ಪಕ ಉತ್ತರ ನೀಡಲಾಗಿದೆ. ಆಗ ಗಪ್ ಚುಪ್ ಆಗಿ ಯಾರೂ ಏನೂ ಮಾತನಾಡಲಿಲ್ಲ. ವಿಧಾನ ಸಭೆಯಲ್ಲಿ ಉತ್ತರ ನೀಡುವಾಗ ಬಸನಗೌಡ ಪಾಟೀಲ್ ಯತ್ನಾಳ್ ಅವರು ತಪ್ಪಿಸಿಕೊಂಡು ಹೋದರು. ಅಂದು ನಾಪತ್ತೆ ಆಗಿದ್ದವರು ಈಗ ಮತ್ತೆ ಕಂಪ್ಲಿ ಯಿಂದ ಹೋರಾಟ ಎಂದು ಹೊರಟಿದ್ದಾರೆ. ರಾಜ್ಯದ ಜನತೆಯನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿರುವ ಅವರಿಗೆ ಸರಿಯಾದ ಪಾಠ ಕಲಿಸಲಿದ್ದಾರೆ. ಬಿಜೆಪಿಯವರು ಎಷ್ಟೇ ಬಟ್ಟೆ ಹರಿದುಕೊಂಡು ಅರಚಿದರೂ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ವನ್ನು ಅಲ್ಲಾಡಿಸಲು ಸಾಧ್ಯವಿಲ್ಲ. ಅಭಿವೃದ್ಧಿ ವಿಚಾರದಲ್ಲಿ ಬಹಿರಂಗ ಚರ್ಚೆಗೆ ಬರಲಿ ಎಂದು ಜಮೀರ್ ಅಹಮದ್ ಖಾನ್ ಅವರು ಸವಾಲು ಹಾಕಿದ್ದಾರೆ.

## ಇಂದು ಮಹತ್ವದ ದಿನ

ಫ್ಲಾಟ್‌ಗಳನ್ನು ಉದ್ಘಾಟಿಸಲಾಗುವುದು. ಈ ಮೂಲಕ ಜನರಿಗೆ ಉತ್ತಮ ಮತ್ತು ಆರೋಗ್ಯಯುತ ನಿವಾಸದ ಭರವಸೆ ನೀಡುತ್ತಿದ್ದೇವೆ. ದೇಶದ ಅಭಿವೃದ್ಧಿಯಲ್ಲಿ ಕೊಡುಗೆ ನೀಡಿದ ಸರ್ಕಾರಿ ಉದ್ಯೋಗಿಗಳಿಗೆ ಸರೋಜಿನಿ ನಗರ್‌ನಲ್ಲಿ ಹೊಸ ಟೈಪ್ 2 ಕ್ವಾರ್ಟರ್ಸ್ ಪ್ರಯೋಜನಕಾರಿಯಾಗಿದೆ" ಎಂದಿದ್ದಾರೆ.

ಇದೇ ವೇಳೆ, ಪ್ರಧಾನಿ ಮೋದಿ ಶಿಕ್ಷಣ ವಲಯದಲ್ಲಿನ ಮೂಲಸೌಕರ್ಯ ಯೋಜನೆಗೆ ಕಾಲೇಜು ನಿರ್ಮಾಣಕ್ಕೆ ಅಡಿಗಲ್ಲು ಹಾಕಲಿದ್ದಾರೆ. ಈ ಕಾಲೇಜಿಗೆ ವೀರ್ ಸಾವರ್ಕರ್ ಅವರ ಹೆಸರಿಡಲಾಗುವುದು. ಇದು ವಿದ್ಯಾರ್ಥಿಗಳಿಗೆ ಉನ್ನತ ಕಲಿಕೆಯ ಪರಿಸರ ನೀಡುವ ಜೊತೆಗೆ ಶೈಕ್ಷಣಿಕ ಮೂಲಸೌಕರ್ಯವನ್ನು ಬಲಗೊಳಿಸಲು ಸಹಾಯ ಮಾಡುತ್ತದೆ. ದೆಹಲಿಯನ್ನು ಶಿಕ್ಷಣದ ಹಬ್ ಆಗಿ ಗುರುತಿಸುವ ಮೂಲಕ ಭಾರತದೆಲ್ಲೆಡೆ ಇಲ್ಲಿಗೆ ವಿದ್ಯಾರ್ಥಿಗಳನ್ನು ಸೆಳೆಯಲು ಸಹಾಯಕಾರಿಯಾಗಲಿದೆ. ದೆಹಲಿ ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ರಾಜಕೀಯ ಕಾವೇರುತ್ತಿದ್ದು, ಪ್ರಧಾನಿ ನರೇಂದ್ರ ಮೋದಿ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡುತ್ತಿದ್ದಾರೆ. 2013ರಿಂದ ಸರ್ಕಾರದಲ್ಲಿರುವ ಎಎಪಿಯ ಹಿಡಿತವನ್ನು ತಪ್ಪಿಸಲು ಬಿಜೆಪಿ ಸಿದ್ಧತೆ ನಡೆಸುತ್ತಿದೆ.

## ಸಚಿವರ ಬೇಸರ

ಇಲ್ಲ, ಅದಕ್ಕೆ ಅಡ್ಜೆಸ್ಟ್ ಆದರು. ಮುದ್ರಾಂಕ ಶುಲ್ಕ ಹೆಚ್ಚಳ ಮಾಡಿದರು. ಗೈಡ್ ಲೈನ್ಸ್ ವ್ಯಾಲ್ಯೂ, ಮದ್ಯದ ದರವನ್ನು ಏರಿಕೆ ಮಾಡಿದರು. ಹಾಲಿನ ದರವನ್ನು ಏರಿಕೆ ಮಾಡುತ್ತಾರಂತೆ. ಈಗ ನೀರಿನ ದರವೂ ಏರಿಕೆ ಆಗುತ್ತದೆ ಎನ್ನುವ ಮಾಹಿತಿ ಬರುತ್ತಿದೆ. ಎಲ್ಲಾ ದರಗಳನ್ನು ಸರಕಾರ ಏರಿಕೆ ಮಾಡುತ್ತಿದೆ. ಆದರೆ, ಗ್ಯಾರಂಟಿ ಸಂತೋಷದಲ್ಲಿ ಜನರು ಆಕ್ರೋಶ ವ್ಯಕ್ತಪಡಿಸುತ್ತಿಲ್ಲ, ಪ್ರತಿಭಟನೆ ಮಾಡುತ್ತಿಲ್ಲ. ಬೆಲೆ ಏರಿಕೆಗೆ ಜನರ ಸಮ್ಮತಿ ಇದೆ ಎಂದು ಸರಕಾರ ಭಾವಿಸಿದಂತಿದೆ ಎಂದು ಕುಮಾರಸ್ವಾಮಿ ಅವರು ಬೇಸರ ವ್ಯಕ್ತಪಡಿಸಿದರು.

ಹೊಸ ವರ್ಷದಲ್ಲಿ ರಾಜ್ಯ ಸರಕಾರ ಅಭಿವೃದ್ಧಿಗೆ ಹೊಸ ಕಾರ್ಯಕ್ರಮ ಘೋಷಣೆ ಮಾಡಬೇಕಿತ್ತು. ಆದರೆ, ಬೆಲೆ ಏರಿಕೆ ಘೋಷಣೆ ಮಾಡಿದೆ. ಬೆಲೆ ಏರಿಕೆಗೆ ವರ್ಷಪೂರ್ತಿ ತಯಾರಾಗಿ ಎಂದು ಸರ್ಕಾರ ಜನರಿಗೆ ಸಂದೇಶ ಕೊಡುತ್ತಿದೆ ಎಂದು ಕೇಂದ್ರ ಸಚಿವರು ಲೇವಡಿ ಮಾಡಿದರು.

ಅನಿವಾರ್ಯ ಇದ್ದಾಗ ಮಾತ್ರ ಬೆಲೆ ಏರಿಕೆ ಮಾಡುವುದನ್ನು ನೋಡಿದ್ದೇವೆ. ಹಿಂದಿನ ಸರಕಾರಗಳ ಅವಧಿಯಲ್ಲಿ ಅನಿವಾರ್ಯವಿದ್ದಾಗ ಬೆಲೆ ಏರಿಕೆ ಮಾಡುವುದು, ಕಡಿಮೆ ಮಾಡುವುದು ಸಾಮಾನ್ಯ. ಆದರೆ, ಇವರು ಮಾಡಿರುವ ತಪ್ಪಿಗೆ ಜನರ ಮೇಲೆ ಬರೆ ಎಳೆಯುತ್ತಿದ್ದಾರೆ. ಎಲ್ಲಾ ಸಮಸ್ಯೆಗಳನ್ನೂ ಸರಕಾರವೇ ಮೈ ಮೇಲೆ ಎಳೆದುಕೊಂಡಿದೆ ಎಂದು ಅವರು ಟೀಕಿಸಿದರು.

ಎಲ್ಲೆಲ್ಲಿ ಸಾಧ್ಯವೋ ಅಲ್ಲೆಲ್ಲಾ ಬೆಲೆ ಏರಿಕೆ ಮಾಡಲಾಗುತ್ತಿದೆ. ವಿದ್ಯುತ್ ಇಲಾಖೆ ಏನಾಗುತ್ತದೋ ನೋಡಬೇಕು. ಸರಕಾರದ ಅಸಮರ್ಪಕ ನಿರ್ವಹಣೆಯಿಂದ ಇಲಾಖೆ ಹಾಳಾಗುತ್ತಿದೆ. ಗ್ಯಾರಂಟಿಗಳಲ್ಲಿ ಯುವನಿಧಿ ಯೋಜನೆ ಮಾಡಿದ್ದಾರೆ. ಇದುವರೆಗೆ ಎಷ್ಟು ಯುವ ಜನರಿಗೆ ಹಣ ಹೋಗಿದೆ. ಈ ಸರಕಾರ ಸ್ವೇಚ್ಛಾಚ್ಚರವಾಗಿ ಹಣ ಖರ್ಚು ಮಾಡುತ್ತಿದೆ. ಸಾರ್ವಜನಿಕರ ತೆರಿಗೆ ಹಣ ದುರ್ಬಳಕೆ ಮಾಡಿಕೊಳ್ಳುತ್ತಿದೆ. ಜನರು ಇದರ ಬಗ್ಗೆ ಅರ್ಥ ಮಾಡಿಕೊಳ್ಳಬೇಕು ಎಂದು ಕೇಂದ್ರ ಸಚಿವರು ಕಿವಿಮಾತು ಹೇಳಿದರು.

ಒಂದು ಕೈಯಲ್ಲಿ ಗ್ಯಾರಂಟಿ ಕೊಟ್ಟು ಇನ್ನೊಂದು ಕೈಯಲ್ಲಿ ಕಿತ್ತುಕೊಳ್ಳುತ್ತಿದೆ ಸರಕಾರ. ಈ ಸರಕಾರ ಬಂದ ದಿನದಿಂದ ಇದೇ ನಡೆಯುತ್ತಿದೆ. ಹೀಗೆ ಹೇಳುತ್ತಾ ಹೋದರೆ ಬಹಳಷ್ಟು ಹೇಳಬಹುದು. ಸಂಕ್ರಾಂತಿ ಕಳೆಯಲಿ, ಆಮೇಲೆ ಈ ಸರಕಾರದ ಬಗ್ಗೆ ಚರ್ಚೆ ಮಾಡುತ್ತೇನೆ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರ ಕೊಟ್ಟರು.

## ಪ್ರಯಾಣಿಕರ ಪರದಾಟ

ಇಂದು ಆಟೋ, ಕಾರು ಮುಂತಾದ ವಾಹನಗಳನ್ನು ತಡೆದು ಬಂದ್‌ಗೆ ಬೆಂಬಲ ನೀಡಬೇಕೆಂದು ಸೂಚಿಸಿದರು.

ಬೆಳಗ್ಗೆ ನಗರದ ಕೆ.ಎಸ್.ಆರ್.ಟಿ.ಸಿ ಡಿಪೋ ಮುಂಭಾಗ ರಸ್ತೆತಡೆ ನಡೆಸಿ ಪ್ರತಿಭಟಿಸಿದರು. ಡಿಪೋ ಮುಂದೆ ಟೈರ್‌ಗೆ ಬೆಂಕಿ ಹಚ್ಚಲು ಮುಂದಾದಾಗ ಪೊಲೀಸರು ತಡೆದು ಬೆಂಕಿ ನಂದಿಸಿದರು.

ಬಸ್ ನಿಲ್ದಾಣಕ್ಕೆ ಬಂದ ಬಸ್‌ಗಳನ್ನು ವಾಪಸ್ ಡಿಪೋಗೆ ಕಳುಹಿಸಲಾಯಿತು. ನಿಲ್ದಾಣ ಬಸ್‌ಗಳಿಲ್ಲದೆ ಬಿಕೋ ಎನ್ನುತ್ತಿದೆ. ಇತ್ತ ಬಸ್ ಸಿಗದೆ ಪ್ರಯಾಣಿಕರು ಪರದಾಡಿದರು. ಸಂಸತ್ತಿನಲ್ಲಿ ಅಮಿತಾ ಶಾ ಅವರು ಅಂಬೇಡ್ಕರ್ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ್ದಾರೆ. ಕೂಡಲೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಬಲವಂತವಾಗಿ ಬಂದ್ ಮಾಡಬಾರದು ಎಂದು ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಪ್ರತಿಭಟನಾಕಾರರಿಗೆ ಎಚ್ಚರಿಕೆ ನೀಡಿತ್ತು. ಮುನ್ನೆಚ್ಚರಿಕೆ ಕ್ರಮವಾಗಿ ನಗರದೆಲ್ಲೆಡೆ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.

## ನಿಮ್ಹಾನ್ಸ್ ಕೂಡ ಒಂದು

ಸಂಶೋಧನೆ ಮತ್ತು ಶಿಕ್ಷಣ ವಲಯದಲ್ಲಿ ವಿಶ್ವದ ಗಮನ ಸೆಳೆದಿದೆ. ಮಾನಸಿಕ ಆರೋಗ್ಯ ಕುರಿತಾದ ನೀತಿ ನಿರೂಪಣೆಯಲ್ಲಿ ನಿಮ್ಹಾನ್ಸ್ ಕೊಡುಗೆಯನ್ನು ಜಾಗತಿಕವಾಗಿ ಗುರುತಿಸಲಾಗಿರುವುದು ಹೆಮ್ಮೆಯ ಸಂಗತಿ, ಮಾನಸಿಕ ಆರೋಗ್ಯ ಕ್ಷೇತ್ರದಲ್ಲಿ ಶ್ರೇಷ್ಠತೆಯನ್ನು ಸಾಧಿಸಿರುವ ರಾಷ್ಟ್ರೀಯ ಮಹತ್ವದ ಈ ಸಂಸ್ಥೆ ಕರ್ನಾಟಕದಲ್ಲಿರುವುದು ನಮಗೆಲ್ಲರಿಗೂ ಅತ್ಯಂತ ಹೆಮ್ಮೆಯ ವಿಷಯ, ರಾಜ್ಯದಾದ್ಯಂತ ಮಾನಸಿಕ ಆರೋಗ್ಯ ಸೇವೆಯನ್ನು ಕಲ್ಪಿಸಲು ಸರ್ಕಾರ ನಿಮ್ಹಾನ್ಸ್‌ನೊಂದಿಗೆ ಜೊತೆಗೂಡಿ ಕಾರ್ಯನಿರ್ವಹಿಸುತ್ತಿದೆ, ನಿಮ್ಹಾನ್ಸ್‌ನೊಂದಿಗಿನ ಜಂಟಿ ಸಹಭಾಗಿತ್ವದ ಮೂಲಕ ರಾಜ್ಯದ ಪ್ರತಿಯೊಬ್ಬರಿಗೂ ಮಾನಸಿಕ ಆರೋಗ್ಯ ಸೇವೆಯನ್ನು ಖಾತ್ರಿಪಡಿಸಲು ನಮಗೆ ಸಾಧ್ಯವಾಗಿದೆ ಎಂದು ಮುಖ್ಯಮಂತ್ರಿಗಳು ಶ್ಲಾಘಿಸಿದರು.

ನಮ್ಮ ಸರ್ಕಾರ ಮಾನಸಿಕ ಆರೋಗ್ಯ ಸೇವೆಯನ್ನು ಒದಗಿಸಲು ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ, ಜಿಲ್ಲಾ ಮತ್ತು ತಾಲೂಕು ಮಟ್ಟಗಳಲ್ಲಿ ಆತ್ಮಹತ್ಯೆ ತಡೆ, ದುಶ್ಚಟ ಹೊಂದಿದವರ ಪುನರ್ವಸತಿ ಮತ್ತು ಸಮುದಾಯ ಮಾನಸಿಕ ಆರೋಗ್ಯ ಕಾರ್ಯಕ್ರಮಗಳಿಗೆ ಒತ್ತು ನೀಡಿದೆ, ಟೆಲಿ ಮಾನಸ್ ಕಾರ್ಯಕ್ರಮ ಅತ್ಯಂತ ಯಶಸ್ವಿಯಾಗಿದ್ದು, ರಾಜ್ಯದಲ್ಲಿ ಮಾನಸಿಕ ಆರೋಗ್ಯದ ಬೆಂಬಲ

ಅಗತ್ಯವಿರುವ ಸುಮಾರು 17 ಲಕ್ಷ ಜನರು ಇದರ ಪ್ರಯೋಜನ ಪಡೆದಿದ್ದಾರೆ, ನಿಮ್ಹಾನ್ಸ್ ಮತ್ತು ಧಾರವಾಡದ ಡಿಮ್ಹಾನ್ಸ್‌ಗಳಲ್ಲಿ ಈ ಘಟಕಗಳ ಕಾರ್ಯ ನಿರ್ವಹಿಸುತ್ತಿದ್ದು, ಅಗತ್ಯ ಆರೋಗ್ಯ ಸೇವೆಯನ್ನು ಕಲ್ಪಿಸುತ್ತಿದೆ, ರಾಜ್ಯ ಸರ್ಕಾರ ನೀತಿ ಆಯೋಗ, ನಿಮ್ಹಾನ್ಸ್ ಸಹಯೋಗದಲ್ಲಿ ಆರಂಭಿಸಿರುವ ಕರ್ನಾಟಕ ಬ್ರೈನ್ ಹೆಲ್ತ್ ಇನೀಷಿಯೇಟಿವ್, ನರರೋಗ ಆರೈಕೆಯಲ್ಲಿ ತಜ್ಞರ ಸೇವೆಯನ್ನು ಜಿಲ್ಲಾಮಟ್ಟದಲ್ಲಿಯೂ ಲಭ್ಯವಾಗಿಸಿದೆ, ತೀವ್ರತರ ಪಾರ್ಶ್ವವಾಯು ಮತ್ತು ನರರೋಗ ಆಘಾತ ಆರೈಕೆಯಲ್ಲಿ ತರಬೇತಿ ಮತ್ತು ನಾವೀನ್ಯತಾ ಮಾದರಿಗಳನ್ನು ಈ ಯೋಜನೆ ಸಾಧ್ಯವಾಗಿಸಿದೆ ಎಂದು ಸಿದ್ಧರಾಮಯ್ಯ ವಿವರಿಸಿದರು.

ನಗರ ಮತ್ತು ಗ್ರಾಮೀಣ ಜನಸಂಖ್ಯೆಗೆ ಸೇವಾ ಲಭ್ಯತೆಯಲ್ಲಿ ಏಕರೂಪತೆ ತರಲು ರಾಜ್ಯ ಸರ್ಕಾರವು ಮಾನಸಿಕ ಆರೋಗ್ಯವನ್ನು ಪ್ರಾಥಮಿಕ ಆರೋಗ್ಯ ಸೇವಾ ವ್ಯವಸ್ಥೆಯಲ್ಲಿ ಸಂಯೋಜಿಸಿದೆ. ನಿಮ್ಹಾನ್ಸ್ ಸಂಸ್ಥೆಯ ಕಾರ್ಯನಿರ್ವಹಣೆಗಾಗಿ ಪ್ರತಿವರ್ಷ 137 ಕೋಟಿ ರೂ. ಗಳನ್ನು ಒದಗಿಸುವ ಮೂಲಕ ರಾಜ್ಯ ಸರ್ಕಾರ ತನ್ನ ಬದ್ಧತೆಯನ್ನು ನಿರೂಪಿಸಿದೆ, ಮಾನಸಿಕ ಆರೋಗ್ಯ ಕ್ಷೇತ್ರದಲ್ಲಿ ಈ ಸಾರ್ವಜನಿಕ □ ಖಾಸಗಿ ಸಹಭಾಗಿತ್ವ ಮೈಲಿಗಲ್ಲು ಸಾಧನೆಗಳನ್ನು ಮಾಡಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆಲದಮರ ಫೌಂಡೇಶನ್ ಸಹಯೋಗದೊಂದಿಗೆ ಬೆಂಗಳೂರಿನ ಸರ್ ಸಿ.ವಿ.ರಾಮನ್ ಆಸ್ಪತ್ರೆಯಲ್ಲಿ ಸ್ಥಾಪಿಸಲಾಗಿರುವ 25 ಹಾಸಿಗೆ ಸಾಮರ್ಥ್ಯದ ತುರ್ತು ಚಿಕಿತ್ಸೆ ಹಾಗೂ ರಿಕವರಿ ಕೇಂದ್ರವು ಮಾನಸಿಕ ಕಾಯಿಲೆಯಿಂದ ಬಳಲುವ ನಿರ್ಗತಿಕರಿಗೆ ಪುನರ್ವಸತಿಯನ್ನು ಕಲ್ಪಿಸಿದೆ. ಜಿಲ್ಲಾ ಉಪಕೇಂದ್ರ ಆಸ್ಪತ್ರೆಗಳಲ್ಲಿ ಮನೋಚೈತನ್ಯ ಮಾನಸಿಕ ಆರೋಗ್ಯ ಚಿಕಿತ್ಸಾ ಕಾರ್ಯಕ್ರಮಗಳ ಮೂಲಕ 146 ತಾಲ್ಲೂಕುಗಳ ಐದು ಲಕ್ಷ ಜನರಿಗೆ ಉಪಯೋಗವಾಗಿದೆ. ಅಲ್ಲದೇ, ಆರ್.ಸಿ.ಎಚ್, ಆರ್‌ಬಿಎಸ್‌ಕೆ ಮತ್ತು ಆರ್‌ಕೆಎಸ್‌ಕೆ ಸಹಭಾಗಿತ್ವದೊಂದಿಗೆ ತಾಯಿ, ಮಗು ಮತ್ತು ಕಿಶೋರ ಮಾನಸಿಕ ಆರೋಗ್ಯ ಸೇವೆಗಳ ಪೂರೈಸಲು ಕ್ರಮವಹಿಸಲಾಗುತ್ತಿದೆ.

ಮಾನಸಿಕ ಆರೋಗ್ಯದೆಡೆಗೆ ಕರ್ನಾಟಕದ ನಡೆಯು ಆರೋಗ್ಯ ಸೇವೆಯ ಲಭ್ಯತೆ, ನಾವಿನ್ಯತೆ ಮತ್ತು ಸಹಾನುಭೂತಿಯನ್ನೊಳಗೊಂಡ ಸಮಗ್ರ ದೃಷ್ಟಿಕೋನವನ್ನು ಪ್ರತಿಬಿಂಬಿಸುತ್ತದೆ. ಮಾನಸಿಕ ಆರೋಗ್ಯದ ಸವಾಲುಗಳನ್ನು ಸಮಗ್ರವಾಗಿ ಎದುರಿಸುವ ನಮ್ಮ ಪ್ರಯತ್ನದಲ್ಲಿ ನಮ್ಮನ್ನು ಮುಂಚೂಣಿಯಲ್ಲಿರಿಸಿದೆ. ಈ ಪ್ರಯತ್ನ ಒಳಗೊಳ್ಳುವ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಪೂರಕವಾಗಿದೆ, ಈ ಮೈಲಿಗಲ್ಲು ಸಾಧನೆಗೆ ಕಾರಣರಾಗಿರುವ ನಿಮ್ಹಾನ್ಸ ಅಧಿಕಾರಿಗಳು ಕಾರಣರಾಗಿದ್ದಾರೆ ಎಂದ ಅವರು ಅದಕ್ಕಾಗಿ ಅಭಿನಂದನೆ ಸಲ್ಲಿಸಿದ್ದಾರೆ.

## ಕೋರ್ಟ್ ಆದೇಶ

ಗುರಿ ಹೊಂದಿದೆ. ಅದಾನಿ ಮತ್ತು ಇತರರು ಸೋಲಾರ್ ಒಪ್ಪಂದಗಳಿಗೆ 265 ದಶಲಕ್ಷ ಲಂಚ ಪಾವತಿಸಿದ ಆರೋಪ ಇದಾಗಿದ್ದು ಅಮೇರಿಕಾ ನ್ಯಾಯಾಲಯ ತನಿಖೆಗೆ ಆದೇಶಿಸಿರುವ ಹಿನ್ನೆಲೆಯಲ್ಲಿ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಮೂರು ಪ್ರಕರಣಗಳ ಆರೋಪಗಳು ಮತ್ತು ಲಂಚ ಪ್ರಕರಣಕ್ಕೆ ಸಂಬಂಧಿಸಿದ ಹಿನ್ನೆಲೆಯಲ್ಲಿ ಎಲ್ಲವನ್ನೂ ಒಟ್ಟುಗೂಡಿಸಿ ತನಿಖೆಗೆ ಆದೇಶಿಸಲಾಗಿದೆ ಎಂದು ತಿಳಿಸಲಾಗಿದೆ.

ಮೂರು ಪ್ರಕರಣಗಳು ಗೌತಮ್ ಅದಾನಿ ವಿರುದ್ಧ ಕ್ರಿಮಿನಲ್ ಪ್ರಕರಣ, ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಕಮಿಷನ್ ವಿರುದ್ಧ ಅದಾನಿ ವಿರುದ್ಧ ಸಿವಿಲ್ ಕೇಸ್, ಮತ್ತು ಎಸ್‌ಇಸಿ ವಿರುದ್ಧ ಕ್ಯಾಬನ್ಸ್ ಇತರ ಆರೋಪಿಗಳ ವಿರುದ್ಧ ಸಿವಿಲ್ ಪ್ರಕಣಗಳು ಸೇರಿವೆ

ನ್ಯಾಯಾಂಗ ದಕ್ಷತೆ ಉತ್ತೇಜಿಸಲು ಮತ್ತು ಸಂಘರ್ಷದ ವೇಳಾಪಟ್ಟಿ ತಪ್ಪಿಸಲು ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ಎಂದು ನ್ಯಾಯಾಲಯ ಹೇಳಿದ್ದು ಎಲ್ಲಾ ಪ್ರಕರಣಗಳನ್ನು ಜಿಲ್ಲಾ ನ್ಯಾಯಾಧೀಶ ನಿಕೋಲಸ್ ಜಿ ಗರೌಫಿಸ್ ವಿಚಾರಣೆ ನಡೆಸಲಿದ್ದಾರೆ ಎಂದು ತಿಳಿಸಲಾಗಿದೆ.

ಉದ್ಯಮಿ ಗೌತಮ್ ಅದಾನಿ ವಿರುದ್ಧದ ಕ್ರಿಮಿನಲ್ ಮೊಕದ್ದಮೆಯ ಮೇಲುಸ್ತುವಾರಿಯನ್ನೂ ವಹಿಸುತ್ತಾರೆ. ಪ್ರಕರಣಗಳ ಮರು ನಿಯೋಜನೆ ಕೈಗೊಳ್ಳುವಂತೆ ನ್ಯಾಯಾಲಯದ ಸಿಬ್ಬಂದಿಗೆ ಸೂಚಿಸಲಾಗಿದೆ.

ರಾಜ್ಯ ವಿದ್ಯುತ್ ವಿತರಣಾ ಕಂಪನಿಗಳೊಂದಿಗೆ ಸೌರಶಕ್ತಿ ಒಪ್ಪಂದಗಳನ್ನು ಪಡೆಯಲು ಅದಾನಿ ಮತ್ತು ಇತರರು ಸುಮಾರು 2,029 ಕೋಟಿ ರೂ. ಲಂಚವನ್ನು ಪಾವತಿಸಿದ್ದಾರೆ ಎಂದು ಆರೋಪಿಸಲಾಗಿದೆ.ಅಮೇರಿಕಾ ಬ್ಯಾಂಕ್‌ಗಳು ಮತ್ತು ಸೌರಶಕ್ತಿ ಯೋಜನೆಗಳಿಗೆ ಅದಾನಿ ಗ್ರೂಪ್ ಹಣವನ್ನು ಸಂಗ್ರಹಿಸಿದ ಹೂಡಿಕೆದಾರರಿಂದ ಸತ್ಯವನ್ನು ಮರೆಮಾಡಲಾಗಿದೆ ಎಂದು ಅಮೇರಿಕಾದ ಪ್ರಾಸಿಕ್ಯೂಟ□□□ಗಳು ಆರೋಪಿಸಿದ್ದರು.

ಗೌತಮ್ ಅದಾನಿ ಸಮೂಹ ತಮ್ಮ ಸಂಸ್ಥೆಯ ಮೇಲೆ ಕೇಳಿ ಬಂದಿರುವ ಆರೋಪ "ಆಧಾರರಹಿತ" ಎಂದು ತಳ್ಳಿಹಾಕಿದೆ ಮತ್ತು ಕಾನೂನು ಪಾಲಿಸುವ ಸಂಸ್ಥೆಯಾಗಿದ್ದು, ಎಲ್ಲಾ ಕಾನೂನುಗಳಿಗೆ ಸಂಪೂರ್ಣವಾಗಿ ಬದ್ಧವಾಗಿದೆ" ಎಂದು ಹೇಳಿದೆ.

# ವಿಪ್ರ ಬಾಂದವರು ರಾಜ್ಯಮಟ್ಟದ ಸಮ್ಮೇಳನ ಯಶಸ್ವಿಗೊಳಿಸಬೇಕು

ಚಾಮರಾಜನಗರ: ಜನವರಿ 18 ಮತ್ತು 19ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ರಾಜ್ಯಮಟ್ಟದ ಬ್ರಾಹ್ಮಣ ಸಮ್ಮೇಳನಕ್ಕೆ ಚಾಮರಾಜನಗರ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯ ಬ್ರಾಹ್ಮಣರು ಆಗಮಿಸಬೇಕೆಂದು ಕರ್ನಾಟಕ ರಾಜ್ಯ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷರಾದ ಪ್ರಸಿದ್ದ ನ್ಯಾಯವಾದಿ ಅಶೋಕ ಹಾರನಹಳ್ಳಿ ತಿಳಿಸಿದ್ದಾರೆ.

ಜಿಲ್ಲಾ ಬ್ರಾಹ್ಮಣ ಸಂಘದ ಆಶ್ರಯದಲ್ಲಿ ಶಂಕರಪುರ ಶ್ರೀ ರಾಮಮಂದಿರದ ಸಭಾಂಗಣದಲ್ಲಿ ಜರುಗಿದ ಜಿಲ್ಲಾಮಟ್ಟದ ವಿಪ್ರ ಸಭೆಯ ಉದ್ಘಾಟನೆ ನೆರವೇರಿಸಿ ಮಾತನಾಡುತ್ತ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ನೇತೃತ್ವದಲ್ಲಿ ಸ್ವಾವಲಂಬನೆ, ಸಂಸ್ಕಾರ ,ಸಂಘಟನೆ ಸ್ವರೂಪದಲ್ಲಿ ಎರಡು ದಿನಗಳ ಬೃಹತ್ ಬ್ರಾಹ್ಮಣ ಸಮ್ಮೇಳನವನ್ನು ಆಯೋಜಿಸಿದ್ದು, ರಾ?್ಟ್ರವಲ್ಲದೆ ದೇಶವಿದೇಶಗಳ ಬ್ರಾಹ್ಮಣ ಮುಖಂಡರುಗಳು ಜ್ಞಾನಿಗಳು, ವಿದ್ವಾಂಸರು, ಚಿಂತಕರು ಶಿಕ್ಷಣ ತಜ್ಞರು, ಉದ್ಯಮಿಗಳು, ಯುವ ಸಮುದಾಯ ಮತ್ತು ಮಹಿಳಾ ಚಿಂತಕರು ಆಗಮಿಸುತ್ತಿದ್ದು ವಿಶೇ?ವಾಗಿ ಕೋಟಿ ಗಾಯತ್ರಿ ಜಪ ಯಜ್ಞ ಹಾಗೂ ವಿಪ್ರ ಆಹಾರೋತ್ಸವ ನಡೆಯಲಿದೆ, ಕರ್ನಾಟಕ ರಾಜ್ಯದ ಮೂಲೆ ಮೂಲೆಗಳಿಂದ ಬ್ರಾಹ್ಮಣ ಸಮುದಾಯ ಆಗಮಿಸಿ, ಅಭೂತಪೂರ್ವ ವಾಗಿ ಯಶಸ್ವಿಗೊಳಿಸಿ ಕೊಡಬೇಕೆಂದು ಹಾಗೂ ನಮ್ಮ ಸಂಘಟನೆಯ ಬಲವನ್ನು ತಿಳಿಯುವ ಮೂಲಕ ಹೊಸ ಶಕ್ತಿಯನ್ನು, ಚೈತನ್ಯವನ್ನು ಬಲಪಡಿಸಿಕೊಳ್ಳೋಣ ಎಂದರು.

ಬ್ರಾಹ್ಮಣ ಸಮುದಾಯ ಎಲ್ಲಾ ಕ್ಷೇತ್ರಗಳಲ್ಲೂ ಸ್ವಂತ ಕೌಶಲ್ಯ ಮತ್ತು ಬುದ್ಧಿವಂತಿಕೆಯಿಂದ ಎಲ್ಲಾ ಕ್ಷೇತ್ರಗಳಲ್ಲೂ ಅಭಿವೃದ್ಧಿಯ ಪತಾಕೆಯಲ್ಲಿ ಸಾಗುತ್ತಿದೆ, ಬ್ರಾಹ್ಮಣ ಸಮುದಾಯಕ್ಕೆ ಮತ್ತ?್ಟು ಗೌರವ ಮತ್ತು ಹೊಸ ಆವಿ?್ಕಾರಗಳ ಬಲವರ್ಧನೆ ಮತ್ತು ಚಿಂತನೆ ಸಂಸ್ಕಾರ, ಪೂಜಾ ವಿಧಿ ವಿಧಾನ, ಹಾಗೂ ಆಧ್ಯಾತ್ಮಿಕ ಶ್ರೇ?್ಠತ್ವವನ್ನು ಬೆಳೆಸಿಕೊಳ್ಳಲು ಬ್ರಾಹ್ಮಣ ಸಮ್ಮೇಳನ ಹೊಸ ಆಲೋಚನೆಯೊಂದಿಗೆ ಚಿಂತನೆ ನಡೆಸಲಿದೆ ಎಂದರು.

ಕೋಟಿ ಗಾಯತ್ರಿ ಮಹಾ ಯಜ್ಞದ ಪ್ರಧಾನರೂ ಮತ್ತು ರಾಜ್ಯ ಬ್ರಾಹ್ಮಣ ಮಹಾಸಭೆಯ ಉಪಾಧ್ಯಕ್ಷರಾದ ವೇದ ವಿದ್ವಾಂಸ ಡಾ. ರಾಘವೇಂದ್ರ ಭಟ್ ಮಾತನಾಡಿ ಕರ್ನಾಟಕದ ಸಮಸ್ತ ಬ್ರಾಹ್ಮಣರು ಬ್ರಾಹ್ಮಣ ಶಕ್ತಿಯ ಸ್ವರೂಪವಾದ ವೇದ ಮಾತೆ ಗಾಯಿತ್ರಿ ಜಪ ಮೂಲಕ 18ರ ಪ್ರಾತಃಕಾಲ ಶೃಂಗೇರಿ ಶಾರದಾ ಪೀಠದ ಸನ್ನಿಧಾನಂಗಳವರು ಮತ್ತು ಇತರ ಪೂಜ್ಯರು ಸಮರ್ಪಣೆ ಮಾಡಲಿದ್ದಾರೆ, ಚಾಮರಾಜನಗರ ಜಿಲ್ಲೆಯ ವಿಪ್ರ ಸಮುದಾಯ ಹೆಚ್ಚಿನ ಸಂಖ್ಯೆಯಲ್ಲಿ ಎರಡು ದಿನಗಳ ಸಮಾವೇಶದಲ್ಲಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಅಸಗೋಡು ಜಯಸಿಂಹ ಮಾತನಾಡಿ ವಿಪ್ರ ಸಮುದಾಯ ಹಲವಾರು ಸಂಕ?್ಟಗಳಿಗೆ ಸಿಲುಕಿದೆ, ಸರ್ಕಾರ ಬ್ರಾಹ್ಮಣರ ಸಮಸ್ಯೆಗಳನ್ನು ಪರಿಹರಿಸುವ ಹಾಗೂ ಅಭಿವೃದ್ಧಿಪಡಿಸುವ ಸಲುವಾಗಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಿದೆ, ವಿಶೇ?ವಾದ ಅನುದಾನ ನೀಡಿ ಬ್ರಾಹ್ಮಣ ಸಮುದಾಯಕ್ಕೆ ಹೊಸ ಹೊಸ ಯೋಜನೆಗಳನ್ನು ನೀಡುವ ಆಲೋಚನೆ ಇದೆ, ಸರ್ಕಾರ ಸಂಪೂರ್ಣ ಬೆಂಬಲ ನೀಡಬೇಕೆಂದು ತಿಳಿಸಿದರು.



ರಾಜ್ಯದ ಆಧ್ಯಾತ್ಮಿಕ ಗುರುಗಳಾದ ವೇದ ಬ್ರಹ್ಮ ಶ್ರೀ ಡಾ. ಭಾನುಪ್ರಕಾಶ್ ಶರ್ಮ ರವರು ಮಾತನಾಡಿ ಅಶೋಕ ಹಾರನಹಳ್ಳಿ ನೇತೃತ್ವದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ರಾಜ್ಯ ಸಮ್ಮೇಳನ ಎರಡು ದಿನಗಳ ಕಾಲ ನಡೆಯಲಿದೆ, ಬ್ರಾಹ್ಮಣ ಸಮುದಾಯದ ಸಂಘಟನೆ ಬಹಳ ಮುಖ್ಯವಾಗಿದ್ದು ಸಮುದಾಯದ ಸರ್ವರು ಸಮ್ಮೇಳನದಲ್ಲಿ ಭಾಗವಹಿಸಿ ಸಾಕ್ಷಿ ಆಗಬೇಕೆಂದರು.

ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಜಿ.ಎಂ. ಹೆಗಡೆ ವಹಿಸಿ ಮಾತನಾಡಿ ಚಾಮರಾಜನಗರ ಜಿಲ್ಲೆಯ ವಿಪ್ರ ಸಮುದಾಯದ ಸಂಪೂರ್ಣ ಬೆಂಬಲ ಹಾಗೂ ಸಹಕಾರ ರಾಜ್ಯ ಸಮ್ಮೇಳನಕ್ಕೆ ಇದೆ, ಜಿಲ್ಲೆಯ ವಿಪ್ರಸಮುದಾಯ ಸಾಕಸ್ಟು ಸಂಖ್ಯೆಯಲ್ಲಿ ರಾಜ್ಯ ಸಮ್ಮೇಳನಕ್ಕೆ ಪಾಲ್ಗೊಂಡು ಯಶಸ್ವಿಗೊಳಿಸ ಕೊಡಲಾಗುವುದು ಎಂದರು.

ವಿಪ್ರ ಸಭೆಯಲ್ಲಿ ಅರಣ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಾ ಮುಖ್ಯಮಂತ್ರಿ ಪದಕಕ್ಕೆ ಭಾಜನರಾದ ಸಂತೆಮರಳ್ಳಿ ಆನಂತರಾಮು, ಬಾಲಪ್ರತಿಭೆ ಪೃಥ್ವಿ ಪುನೀತ್ ರವರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ಕೋಶಾಧ್ಯಕ್ಷರಾದ ವೆಂಕಟೇಶ ನಾಯಕ್, ಯುವ ವಿಭಾಗದ ಸುನಿಲ್ ಶಾಸ್ತ್ರಿ, ಪ್ರಧಾನ ಕಾರ್ಯದರ್ಶಿ ಶ್ರೀಧರ್ ಮೂರ್ತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುರೇಶ್ ಎನ್ ಋಗ್ವೇದಿ, ಜಿಲ್ಲಾ ಖಜಾಂಚಿ ಬಾಲಸುಬ್ರಮಣ್ಯಂ, ತಾಲೂಕು ಅಧ್ಯಕ್ಷ ನಾಗರಾಜು, ಕೊಳ್ಳೇಗಾಲ ತಾಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಶೇಖರ್ ಶಾಸ್ತ್ರಿ, ಯಳಂದೂರು ಅಧ್ಯಕ್ಷರಾದ ರಂಗನಾಥ್, ಗುಂಡ್ಲುಪೇಟೆ ರಾಜಣ್ಣ, ಬೆಂಗಳೂರಿನ ಕೇಂದ್ರ ಸಮಿತಿಯ ರವಿಶಂಕರ್, ಶಂಕರ್ ಪ್ರಸಾದ್, ಪ್ರತಾಪ್, ರಾಧಾಕೃ?್ಣ, ಸುದರ್ಶನ್ ,ಸುರೇಶ್, ಕೇಶವಮೂರ್ತಿ, ಸತೀಶ್, ಬ್ರಾಹ್ಮಿ ಮಹಿಳಾ ಸಂಘದ ಅಧ್ಯಕ್ಷ, ಪದಾಧಿಕಾರಿಗಳು, ಚಾಮರಾಜನಗರ ಜಿಲ್ಲಾ ಬ್ರಾಹ್ಮಣ ಸಂಘಟನೆಯ ಸದಸ್ಯರು ಉಪಸ್ಥಿತರಿದ್ದರು.

# ಅಖಿಲ ಕರ್ನಾಟಕ ಜ್ಯೋತಿನಗರ ವೈಶ್ಯ ಗಾಣಿಗರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ

**ಮುಳಬಾಗಲು:** ಅಖಿಲ ಕರ್ನಾಟಕ ಜ್ಯೋತಿ ನಗರ ವೈಶ್ಯ ಗಾಣಿಗರ ಸಂಘ ಅಸ್ತಿತ್ವಕ್ಕೆ ಬಂದಿದ್ದು, ರಾಜ್ಯಾಧ್ಯಕ್ಷರಾಗಿ ಪೆರೇಸಂದ್ರ ಪಿ.ಜಿ. ವಿಜಯ್ ಕುಮಾರ್ ಗಾಣಿಗ ಆಯ್ಕೆಯಾಗಿದ್ದಾರೆ.

ಜೆ.ಎನ್. ರಮೇಶ್: ಉಪಾಧ್ಯಕ್ಷ, ಹೆಚ್. ಎಲ್ ಮೋಹಿತ್: ಪ್ರಧಾನ ಕಾರ್ಯದರ್ಶಿ, ರವಿ ಕುಮಾರ್ ಹೆಚ್.ಎನ್: ಸಂಘಟನಾ ಕಾರ್ಯದರ್ಶಿ, ಕೆ. ಪ್ರಕಾಶ್, ಎಸ್. ಆರ್. ರಾಘವೇಂದ್ರ: ಸಂಚಾಲಕರು, ನಾರಾಯಣಸ್ವಾಮಿ, ವಿ. ರಾಮಕೃ?್ಣ: ಜಂಟಿ ಕಾರ್ಯದರ್ಶಿ, ಜೆ.ವಿ. ವೆಂಕಟಾಚಲಪತಿ, ರಾಮು ಜಿ.ಕೆ.: ಸಹ ಕಾರ್ಯದರ್ಶಿ, ಕೃ?್ಣಮೂರ್ತಿ: ಖಜಾಂಚಿ, ಬಿ.ಕೆ. ಅಶ್ವಿನಿ, ಬಿ.ಎಲ್ ರಾಮಕೃ?್ಣಪ್ಪ, ವಿ.ಸಿ ಮೋಹನ್, ಜೆ.ಎಂ. ಶ್ರೀನಾಥ್, ಎಸ್.ಪಿ. ಶಿವರಾಮ್, ಪಿ.ವಿ. ಲೀಲಾವತಿ, ಬಿ. ಬಸವರಾಜ್: ಕಾರ್ಯಕಾರಿ ಸಮಿತಿ ಸದಸ್ಯರಾಗಿ ಆಯ್ಕೆಯಾಗಿದ್ದಾರೆ.




ನೂತನ ಅಧ್ಯಕ್ಷ ಪೆರೇಸಂದ್ರ ಪಿ.ಜಿ. ವಿಜಯ್ ಕುಮಾರ್ ಗಾಣಿಗ ಮಾತನಾಡಿ, ಜ್ಯೋತಿನಗರ ವೈಶ್ಯ ಸಮುದಾಯದ ಸರ್ವಾತೋಮುಖ ಅಭಿವೃದ್ದಿಗೆ ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಜತೆಗೆ ಸಮುದಾಯದ ಸಂಘಟನೆ, ಆರ್ಥಿಕ, ಶೈಕ್ಷಣಿಕ, ಸಾಂಸ್ಕೃತಿಕ, ಸಾಮಾಜಿಕ ಕ್ಷೇತ್ರಗಳಲ್ಲಿ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದು ತಿಳಿಸಿದರು. ಗ್ರಾಮ ಮಟ್ಟದಿಂದ ರಾಜ್ಯಮಟ್ಟದ ವರೆಗೆ ಸಮುದಾಯದವರನ್ನು ಸಂಘಟಿಸಿ ಸಂಘವನ್ನು ಬಲಿ?್ಠವಾಗಿ ಬಲಗೊಳಿಸಲಾಗುವುದು, ಗಾಣಿಗರ ಸಮಾಜ ಮತ್ತು ಇತರರಿಗೂ ಅನುಕೂಲವಾಗುವಂತೆ ಕುಲ ಕಸುಬು ಮತ್ತು ಬೇಸಾಯದಲ್ಲಿ ಆಧುನಿಕತೆಯ ಅಳವಡಿಸುವಿಕೆ, ಮಣ್ಣು ಪರಿವೀಕ್ಷಣೆ ಬೆಳೆಗಳ ಬಗ್ಗೆ ಮಾಹಿತಿ, ಮಾರುಕಟ್ಟೆ ಮಾಹಿತಿ ಕೃಪಿಡಿ ಮೊದಲಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು, ಸಮುದಾಯದ ಬಡ ಮಕ್ಕಳ ವಿದ್ಯಾಬ್ಯಾಸಕ್ಕೆ ಆರ್ಥಿಕ ಸಹಾಯ, ಪ್ರತಿಭಾ ಜತೆಗೆ ಸಮುದಾಯದವರಿಗೆ ಕ್ಷೇಮಾಭಿವೃದ್ಧಿ ಕಾರ್ಯಕ್ರಮಗಳನ್ನು ಹಂತ ಹಂತವಾಗಿ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು. ಸಂಘದ ವತಿಯಿಂದ ಎಲ್ಲಾ ಸಮುದಾಯದವರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ, ರಕ್ತದಾನ ಶಿಬಿರ, ಬಡಮಕ್ಕಳಿಗೆ ಉಚಿತ ನೋಟ್ ಪುಸ್ತಕ ವಿತರಣೆ ಸೇರಿದಂತೆ ಇತರೆ ಸಾಮಾಜಿಕ ಕಳಕಳಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು. ಸಮುದಾಯದವರಿಗೆ ಅನುಕೂಲವಾಗುವಂತೆ ವಧು ವರರ ಮಾಹಿತಿ ಕೇಂದ್ರ, ಉದ್ಯೋಗದ ಬಗ್ಗೆ ಮಾಹಿತಿ ನೀಡುವ ಕೇಂದ್ರಗಳನ್ನು ಪ್ರಾರಂಭಿಸುವುದರ ಜತೆಗೆ ವೃತ್ತಿಪರ ಶಿಕ್ಷಣವನ್ನು ನೀಡಲಾಗುವುದು ಎಂದು ಹೇಳಿದರು.

ಗಾಣಿಗರ ಸಮಾಜದವರು ತಮ್ಮ ವೃತ್ತಿಯಲ್ಲಿ ದಕ್ಷತೆಯನ್ನು ಹೆಚ್ಚಿಸುವ ಸಲುವಾಗಿ ಅವರಿಗೆ ತಜ್ಞರಿಂದ ಸಲಹೆ, ಮಾರ್ಗದರ್ಶನ ಹಾಗೂ ತರಬೇತಿಯನ್ನು ಕೊಡಿಸಲಾಗುವುದು ಉಚಿತ ಸಾಮೂಹಿಕ ವಿವಾಹಗಳನ್ನು ಏರ್ಪಡಿಸುವುದರ ಜತೆಗೆ ಗಾಣಿಗ ಸಮಾಜದಲ್ಲಿನ ವಿಶೇ? ಚೇತನರು, ಅನಾಥರಿಗೆ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಅವರು ತಿಳಿಸಿದರು.

ಗಾಣಿಗರ ಸಮಾಜದ ಮನೋರಂಜನಾ ಚಟುವಟಿಕೆಗಳನ್ನು ಬೆಳೆಸುವುದಕ್ಕಾಗಿ ನಾಟಕ, ಸಂಗೀತ, ಸೋಮನಕುಣಿತ, ಡೊಳ್ಳುವಾದ್ಯಗಳು ಮೇಳಗಳನ್ನು ಏರ್ಪಡಿಸಿ ನಾಡಿನ ಮೂಲೆ ಮೂಲೆಗಳಿಂದ ಕಲಾವಿದರನ್ನು ಕಲಾ ತಂಡಗಳನ್ನು ಅಹ್ವಾನಿಸಿ ಅವರನ್ನು ಗೌರವಿಸಲಾಗುವುದು, ಸಮುದಾಯದ ವಿದ್ಯಾರ್ಥಿಗಳಲ್ಲಿ ಪ್ರತಿಬೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿ ಆಕ?್ಕಕ ಬಹುಮಾನಗಳನ್ನು ನೀಡಲಾಗುವುದು ಎಂದ ಅವರು. ಬೆಂಗಳೂರಿನ ಕೋಟೆಯಲ್ಲಿರುವ ಎಸ್ಎಲ್ಎನ್ ಧರ್ಮ ಸಂಸ್ಥೆಯ ಸಂಸ್ಥಾಪಕರಾದ ಜನೋಪಕಾರಿ ಶ್ರೀ ದೊಡ್ಡಣ್ಣಶೆಟ್ಟಿ ರವರ ಸಮಾಧಿಗೆ ಪೂಜೆ ಸಲ್ಲಿಸಿದ ನಂತರ ಸಂಘದ ಕಾರ್ಯಚಟುವಟಿಕೆಗಳನ್ನು ಪ್ರಾರಂಬಿಸಲಾಗುವುದೆಂದು ಎಂದರು.

# ನಾಗಮಂಗಲದಿಂದ ಕೊಪ್ಪಕ್ಕೆ ನೂತನ ಬಸ್

ನಾಗಮಂಗಲ: ತಾಲೂಕು ಕೇಂದ್ರದಿಂದ ಸ್ಥಾನದಿಂದ ಕೊಪ್ಪಕ್ಕೆ ನೂತನ ಬಸ್ ಚಾಲನೆ ನೀಡಲಾಯಿತು. ಗುರುವಾರ ದೇವಲಾಪುರ ವಾಹನ ನಿಲ್ದಾಣದಲ್ಲಿ ನೂತನ ಮಾರ್ಗಕ್ಕೆ ವಾಹನಕ್ಕೆ ಪೂಜೆ ಸಲ್ಲಿಸಿ ಅಧಿಕೃತವಾಗಿ ಚಾಲನೆ ನೀಡಲಾಯಿತು.

ನಾಗಮಂಗಲದಿಂದ ಸಂಜೆ 7:00ಕ್ಕೆ ನಾಗಮಂಗಲ ಬಿಟ್ಟು ದೇವಲಾಪುರ ಮಾರ್ಗ ಭೀಮನಹಳ್ಳಿ. ಕಸಲಗೆರೆ ಮದ್ದನಹಟ್ಟಿ.ಬೊಮ್ಮನಹಳ್ಳಿ. ಮಾವಿನಕೆರೆ. ಹೊಸಗಾವಿ ಮಾರ್ಗ ಕೊಪ್ಪದಲ್ಲಿ ನಿಲುಗಡೆಯಾಗುವುದು.

ನೂತನ ಬಸ್ ಚಾಲನೆಗೆ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಹುಚ್ಚೇಗೌಡ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರಾಜೇಶ್ ಸಾರಿಗೆ ವ್ಯವಸ್ಥಾಪಕರಾದ ಮಹೇಶ್ ನಂದಿ ರಮೇಶ್.ಮಾವಿನಕೆರೆ ಸುರೇಶ್. ಕಿರಣ್. ಕೃ?್ಣೇಗೌಡರು.ಸುರೇಶ್ ಸತ್ಯ ಗ್ರಾಮಸ್ಥರು ಮುಖಂಡರು ಹಾಜರಿದ್ದರು.



ಶಿಡ್ಲಘಟ್ಟ

ಹೊಸಪೇಟೆ ಗ್ರಾ.ಪಂ. ಆಧ್ಯಕ್ಷರ ಅವಿರೋಧ ಆಯ್ಕೆ

ಶಿಡ್ಲಘಟ್ಟ: ತಾಲ್ಲೂಕಿನ ಜಂಗಮಕೋಟೆ ಹೋಬಳಿಯ ಹೊಸಪೇಟೆ ಗ್ರಾಮ ಪಂಚಾಯಿತಿ ಪ್ರಾರಂಭವಾದಾಗಿನಿಂದಲೂ ಕಾಂಗ್ರೆಸ್ ಪಕ್ಷದ ಬೆಂಬಲಿತ ಸದಸ್ಯರು ಅಧಿಕಾರ ನಡೆಸಿಕೊಂಡು ಬರುತ್ತಿದ್ದು. ಹೊಸಪೇಟೆ ಗ್ರಾಮ ಪಂಚಾಯಿತಿ ತನ್ನದೇ ಆದ ಛಾಪು ಮೂಡಿಸುತ್ತ ಬಂದಿದ್ದು, ಇತ್ತೀಚಿಗೆ ಗ್ರಾಮ ಪಂಚಾಯಿತಿ ಚುನಾವಣೆ ನಡೆದಿದ್ದು ಶಾಸಕರಾದ ಬಿ.ಎನ್. ರವಿಕುಮಾರ್ ಅವರ ಹೋಬಳಿ ಕೇಂದ್ರವಾಗಿದ್ದರಿಂದ ತಾಲ್ಲೂಕಿನ ಚಿತ್ತ ಈ ನಾಲ್ಕು ಚುನಾವಣೆಗಳ ಮೇಲೆ ಇತ್ತು. ನಾಲ್ಕು ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಜನ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳನ್ನು ಜಯಶೀಲಾರನ್ನಾಗಿ ಮಾಡುವುದರ ಮೂಲಕ ಜನಾದೇಶ ನೀಡಿದ್ದರು, ಅದರಂತೆ ಅಧ್ಯಕ್ಷ ಸ್ಥಾನ ಪರಿಶಿ?್ಟ ಜಾತಿ ಮಹಿಳೆ ಮತ್ತು ಉಪಾಧ್ಯಕ್ಷ ಸ್ಥಾನ ಬಿಸಿಎಂ 'ಎ' ಮಹಿಳೆಗೆ ಮೀಸಲಾತಿ ನಿಗದಿಯಾಗಿದ್ದು ಗುರುವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ದ್ಯಾವಮ್ಮಕೆಂಪಣ್ಣ ಮತ್ತು ಉಪಾಧ್ಯಕ್ಷರಾಗಿ ಶ್ವೇತಹರೀಶ್ ಅವಿರೋದವಾಗಿ ಆಯ್ಕೆಯಾಗಿದ್ದಾರೆ.

ಜೆಡಿಎಸ್ ಪಕ್ಷದ ಕಾರ್ಯಕರ್ತರ ಸತತ ಪರಿಶ್ರಮದಿಂದ ಹೊಸಪೇಟೆ ಗ್ರಾಮ ಪಂಚಾಯಿತಿ ಒಟ್ಟು 17 ಸ್ಥಾನ ಹೊಂದಿದ್ದು, 17 ಗ್ರಾಮ ಪಂಚಾಯಿತಿ ಸದಸ್ಯರ ಪೈಕಿ 11 ಜೆಡಿಎಸ್ ಬೆಂಬಲಿತ ಗ್ರಾಮ ಪಂಚಾಯಿತಿ ಸದಸ್ಯರು ಆಯ್ಕೆಯಾಗುವ ಮೂಲಕ ಪ್ರಥಮ ಬಾರಿಗೆ ಜೆಡಿಎಸ್ ಪಕ್ಷವು ಅಧಿಕಾರವನ್ನು ತನ್ನ ಮುಡಿಗೇರಿಸಿಕೊಂಡಿದೆ. ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಮುಖಂಡರು ಕಾರ್ಯಕರ್ತರು ಹಾಜರಿದ್ದು ನೂತನವಾಗಿ ಆಯ್ಕೆಯಾದ ಅಧ್ಯಕ್ಷರು ಹಾಗು ಉಪಾಧ್ಯಕ್ಷರಿಗೆ ಶುಭಾಶಯಗಳು ಕೋರಿದರು.

# ಕೃಷಿಕ ಸಮಾಜದ ಅಧ್ಯಕ್ಷರಾಗಿ ನಾಟನಹಳ್ಳಿ ಎನ್.ಎಸ್.ಗಂಗಾಧರ್ ಆಯ್ಕೆ



**ಕೆ.ಆರ್.ಪೇಟೆ.:** ತಾಲ್ಲೂಕು ಕೃಷಿಕ ಸಮಾಜದ ನೂತನ ಅಧ್ಯಕ್ಷರಾಗಿ ನಾಟನಹಳ್ಳಿ ಎನ್. ಎಸ್. ಗಂಗಾಧರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಪಟ್ಟಣದ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಉಪಾಧ್ಯಕ್ಷರಾಗಿ ಪ್ರಭಾಕರ್, ಪ್ರಧಾನ ಕಾರ್ಯದರ್ಶಿಯಾಗಿ ಆರ್.ಕೆ.ಜಗದೀಶ್, ಖಜಾಂಚಿಯಾಗಿ ಬಿ.ಸಿ.ಸ್ವಾಮೀಗೌಡ, ಜಿಲ್ಲಾ ಪ್ರತಿನಿಧಿಯಾಗಿ ಹೆಚ್. ಜೆ. ನಾರಾಯಣಗೌಡ ಅವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಹೆಚ್.ಜೆ.ಸಂತೋ? ಕುಮಾರ್ ಪ್ರಕಟಿಸಿದ್ದಾರೆ.

ನೂತನ ಅಧ್ಯಕ್ಷರಾಗಿ ಆಯ್ಕೆಯಾದ ನಾಟನಹಳ್ಳಿ ಗಂಗಾಧರ್ ಮಾತನಾಡಿ ತಾಲ್ಲೂಕು ರೈತರ ಜೀವನಾಡಿಯಾದ ಕೃಷಿ ಇಲಾಖೆ ಮತ್ತು ರೈತರ ನಡುವೆ ಕೊಂಡಿಯಾಗಿ ಕೃಷಿಕ ಸಮಾಜದ ಅಧ್ಯಕ್ಷನಾಗಿ ಪ್ರಾಮಾಣಿಕವಾಗಿ ಕೆಲಸ ಮಾಡಲು ಅವಕಾಶ ಮಾಡಿಕೊಟ್ಟ ಎಲ್ಲಾ ಕಾರ್ಯಕಾರಿ ಸಮಿತಿ ನಿರ್ದೇಶಕರಿಗೂ, ಸದಸ್ಯರಿಗೂ ಆಭಾರಿಯಾಗಿರುತ್ತೇನೆ ಎಂದರು.

ಈ ಸಂದರ್ಭದಲ್ಲಿ ನಿರ್ದೇಶಕರಾದ ಕೆ.ಬಿ. ಈಶ್ವರಪ್ರಸಾದ್, ಎನ್. ಮರಿಸ್ವಾಮೀಗೌಡ, ರಾಮಸ್ವಾಮಿ, ಮುಖಂಡರಾದ ಕೆ.ಎಸ್. ಬಸವೇಗೌಡ, ಎನ್.ಕೆ. ವಿಜಯಕುಮಾರ್, ಎನ್.ಜೆ. ಹೇಮಂತ್ ಕುಮಾರ್(ತಮ್ಮಣ್ಣ), ಬೋರೇಗೌಡ, ಜಿಲ್ಲಾ ಕರವೇ ಅಧ್ಯಕ್ಷಡಿ.ಎಸ್. ವೇಣು, ತಾಲ್ಲೂಕು ಕರವೇ ಅಧ್ಯಕ್ಷಟೆಂಪೋ ಶ್ರೀನಿವಾಸಗೌಡ, ಪುರಸಭಾಸದಸ್ಯಪ್ರಮೋದ್, ಅಗ್ರಹಾರಬಾಚಹಳ್ಳಿ ಸ್ವಾಮಿ, ಅಮ್ಮು ಶ್ರೀಧರ್, ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ಸದಸ್ಯರಾದ ಎ.ಎನ್. ಜಾನಕೀರಾಂ, ಬಿ.ಎಲ್. ತೇಜಸ್ವಿಕಿರಣ್, ಎಸ್.ಆರ್.ನವೀನ್ ಕುಮಾರ್, ಎ.ಆರ್.ರಘು, ಎ.ಎಸ್.ರಮೇಶ್, ಸಿ.ಎಸ್.ರಾಮಕೃ?್ಣೇಗೌಡ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದು ಅಭಿನಂದಿಸಿದರು.

# ಎಸ್ಎಸ್ಎಲ್‌ಸಿಯಲ್ಲಿ ಉತ್ತಮ ಫಲಿತಾಂಶ: ಅಭಿನಂದನೆ



ಶಿಡ್ಲಘಟ್ಟ : ಕಳೆದ ವ?್ಷ ತಾಲ್ಲೂಕಿಗೆ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸ್ಥಾನ ಲಭಿಸಿದ್ದು ಈ ಬಾರಿಯೂ ಉತ್ತಮ ಫಲಿತಾಂಶ ನಿರೀಕ್ಷಿಸಲಾಗಿದೆ ಕಳೆದ ಸಾಲಿನಲ್ಲಿ ಪರೀಕ್ಷೆ ವೇಳೆ ಸೀಸಿ ಕ್ಯಾಮರಾ ಕಣ್ಗಾವಲಿನಲ್ಲಿ ಶಿಸ್ತುಬದ್ಧವಾಗಿ ಪರೀಕ್ಷೆ ನಡೆಸಿದ ಹಿನ್ನೆಲೆಯಲ್ಲಿ ಈ ಬಾರಿ ಈಗಾಗಲೇ ವಿದ್ಯಾರ್ಥಿಗಳಲ್ಲಿ ಕಲಿಯುವ, ಓದುವ ಬಗ್ಗೆ ಆಸಕ್ತಿ ಮೂಡಿದೆ ಎಂದು ಕ್ಷೇತ್ರಶಿಕ್ಷಣಾಧಿಕಾರಿ ಸಿ.ಎ. ನರೇಂದ್ರಕುಮಾರ್ ತಿಳಿಸಿದರು.

ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ತಾಲ್ಲೂಕು ಪ್ರೌಢಶಾಲಾ ಸಹಶಿಕ್ಷಕರ ಸಂಘವು ಹಮ್ಮಿಕೊಂಡಿದ್ದ ಶಿಕ್ಷಕರ ಸಭೆ, ಅಭಿನಂದನಾ ಕಾರ್ಯಕ್ರಮ, ದಿನದರ್ಶಿಕೆ ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ತಾಲ್ಲೂಕಿನಾದ್ಯಂತ ಮುಂಬರುವ ಎಸ್ಎಸ್ಎಲ್‌ಸಿ ಫಲಿತಾಂಶವನ್ನು ಉತ್ತಮಪಡಿಸಲು ಜನವರಿ ಮೊದಲ ವಾರದಿಂದಲೇ ಎಲ್ಲಾ ಪ್ರೌಢಶಾಲೆಗಳಲ್ಲಿ ಸರಣಿಪರೀಕ್ಷೆ, ಪರಿಹಾರ ಬೋಧನೆ ಕೈಗೊಳ್ಳಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಬಹುತೇಕ ಎಲ್ಲಾ ಶಾಲೆಗಳಲ್ಲಿ ಎಸ್ಎಸ್ಎಲ್‌ಸಿ ಪಠ್ಯಕ್ರಮ ಬೋಧನೆಯನ್ನು ಪೂರ್ಣಗೊಳಿಸಲಾಗಿದ್ದು ಮುಂದಿನ ವಾರದಿಂದಲೇ ಘಟಕವಾರು ನೀಲನಕ್ಷೆ ಆಧರಿಸಿ ಘಟಕಪರೀಕ್ಷೆ, ಸರಣಿ ಪರೀಕ್ಷೆಗಳನ್ನು ನಡೆಸಿ ಸಿದ್ಧತೆ ಮಾಡಿಕೊಳ್ಳಲಾಗುವುದು ಕಲಿಕಾ ಹಿಂದುಳಿದ ವಿದ್ಯಾರ್ಥಿಗಳಿಗೆ ನುರಿತ ಸಂಪನ್ಮೂಲವ್ಯಕ್ತಿಗಳಿಂದ ಪಾಸಿಂಗ್ ಪ್ಯಾಕೇಜ್ ರಚಿಸಿ ವಿತರಿಸಲಾಗುವುದು ಎಂದರು.

ಪ್ರೌಢಶಾಲಾ ಸಹಶಿಕ್ಷಕರ ಸಂಘದ ಅದ್ಯಕ್ಷ ಎಲ್.ವಿ.ವೆಂಕಟರೆಡ್ಡಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಎಸ್ಎಸ್ಎಲ್‌ಸಿ ವಿದ್ಯಾರ್ಥಿಗಳ ಫಲಿತಾಂಶ ಉತ್ತಮಪಡಿಸಲು ಅನುಕೂಲವಾಗುವಂತೆ ಇದೇ ವಾರದಲ್ಲಿಯೇ ಮುಖ್ಯಶಿಕ್ಷಕರ ಸಭೆ ನಡೆಸಿ, ಯೋಜನೆ ತಯಾರಿಸಿಕೊಂಡು ಅನುಷ್ಠಾನಗೊಳಿಸಲಾಗುವುದು, ತಾಲ್ಲೂಕಿನಲ್ಲಿ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆಗಳ ಶಿಕ್ಷಕರ ಎಲ್ಲಾ ಸಮಸ್ಯೆಗಳನ್ನು ಸರಿಯಾದ ಸಮಯಕ್ಕೆ ಆಲಿಸಿ ಪರಿಹಾರ ಕಂಡುಕೊಳ್ಳಲಾಗಿದೆ ಎಂದರು.

ಪ್ರೌಢಶಾಲಾ ಸಹಶಿಕ್ಷಕರ ಸಂಘದ ಪ್ರಧಾನಕಾರ್ಯದರ್ಶಿ ಎಚ್.ಎಸ್. ರುದ್ರೇಶಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಿ, ಎಸ್ಎಸ್ಎಲ್‌ಸಿ ಉತ್ತಮ ಫಲಿತಾಂಶ ಗಳಿಕೆ, ಬುನಾದಿಸಾಮರ್ಥ್ಯ ಮತ್ತು ಸಂಖ್ಯಾಜ್ಞಾನವನ್ನು ಮಕ್ಕಳಲ್ಲಿ ಬೇರೂರುವಂತೆ ಮಾಡುವಲ್ಲಿ ಶಿಕ್ಷಕರಿಗೆ ಅಗತ್ಯ ಮಾರ್ಗದರ್ಶನ, ಯೋಜನೆಗಳನ್ನು ರೂಪಿಸಿ ಅನು?್ಠಾನಮಾಡಲು ಶ್ರಮಿಸಲಾಗುತ್ತಿದೆ ,ಸಹಶಿಕ್ಷಕರ ಸಂಘವು ಹಮ್ಮಿಕೊಳ್ಳಲಾಗುತ್ತಿರುವ ಕ್ರಿಯಾತ್ಮಕವಾದ ವಿಶೇ? ಚಟುವಟಿಕೆಗಳು, ಸಮಾಲೋಚನಾ ಸಭೆಗಳು, ತರಬೇತಿ, ಎಸ್ಎಸ್ಎಲ್‌ಸಿ ಪರೀಕ್ಷಾ ಸಂಪನ್ಮೂಲಗಳು ಶಿಕ್ಷಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಪೂರಕವಾಗಿದ್ದು ಜಿಲ್ಲೆಯಲ್ಲಿಯೇ ಮಾದರಿಯಾಗಿವೆ, ಶೈಕ್ಷಣಿಕ ಮತ್ತು ಆಡಳಿತಾತ್ಮಕವಾಗಿ ಶಿಕ್ಷಕರು, ಇಲಾಖೆಯೊಂದಿಗೆ ಸೇತುವಾಗಿ ಕೆಲಸಮಾಡಲಾಗುತ್ತಿದೆ ಎಂದು ನುಡಿದರು.

ಇದೇ ವೇಳೆ ಅಕ್ಷರದಾಸೋಹ ಸಹಾಯಕ ನಿರ್ದೇಶಕ ಆಂಜನೇಯ, ಶಿಕ್ಷಣ ಸಂಯೋಜಕ ಯು.ವೈ.ಮಂಜುನಾಥ್, ಜಂಗಮಕೋಟೆ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕ ಕೆ.ಎಚ್.ಪ್ರಸನ್ನಕುಮಾರ್ ಮಾತನಾಡಿದರು.

ಸಂಘದ 2025 ರ ಶೈಕ್ಷಣಿಕ ಕ್ಯಾಲೆಂಡರ್‌ನ್ನು ಬಿಡುಗಡೆ ಮಾಡಲಾಯಿತು.

ಸರ್ಕಾರಿ ನೌಕರರ ಸಂಘಕ್ಕೆ ಪ್ರೌಢಶಾಲಾ ಶಿಕ್ಷಣ ವಿಭಾಗದಿಂದ ಅವಿರೋಧವಾಗಿ ಆಯ್ಕೆಯಾದ ವಿ. ಬೈರಾರೆಡ್ಡಿ, ಸಿ.ಕೆ .ಹರೀಶ್‌ಕುಮಾರ್ ಮತ್ತು ಕ್ಷೇತ್ರಶಿಕ್ಷಣಾಧಿಕಾರಿ ಸಿ.ಎ. ನರೇಂದ್ರಕುಮಾರ್ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಅಕ್ಷರ ದಾಸೋಹದ ಆಂಜನೇಯ, ಎಲ್.ವಿ.ವೆಂಕಟರೆಡ್ಡಿ, ಮಂಜುನಾಥ್,ಮೇಲೂರು ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕ ಭಾಸ್ಕರ್, ಸಂಘದ ಉಪಾಧ್ಯಕ್ಷ ಎಂ.ಕೆ.ಸಿದ್ಧರಾಜು, ಖಜಾಂಚಿ ಹೇಮಾವತಿ, ಸಹಕಾರ್ಯದರ್ಶಿ ಎಂ.ಶಿವಕುಮಾರ್,ನಿರ್ದೇಶಕಿ ಸೈಯದಾ ಇ?್ರತ್, ವಿವಿಧ ಶಾಲೆಗಳ ಶಿಕ್ಷಕರು ಹಾಜರಿದ್ದರು.

# ಮ.ಬೆಟ್ಟ ನಾಗಮಲೆ ಭವನದ ದುರಸ್ತಿ ಕಾಮಗಾರಿಯಲ್ಲಿ ಭ್ರಷ್ಟಾಚಾರ

**ಹನೂರು:** ನಾಡಿನ ಪ್ರಸಿದ್ದ ಪುಣ್ಯಕ್ಷೇತ್ರ ಮಲೆಮಹದೇಶ್ವರ ಬೆಟ್ಟದಲ್ಲಿನ ಪ್ರಾಧಿಕಾರಕ್ಕೆ ಸೇರಿದ ನಾಗಮಲೆ ಭವನದ ದುರಸ್ತಿ ಕಾಮಗಾರಿಯಲ್ಲಿ ವ್ಯಾಪಕ ಭ್ರ?್ಟಾಚಾರ ನಡೆದಿದ್ದು ಅನಾವಶ್ಯಕ ಹಾಗೂ ಅವೈಜ್ಞಾನಿಕ ಕಾಮಗಾರಿ ನಡೆಸಿ ಕಾಮಗಾರಿಯ ನೆಪದಲ್ಲಿ ಯಥೇಚ್ಛ ಹಣ ಲೂಟಿಗೆ ಮುಂದಾಗಿರುವುದಾಗಿ ಸ್ಥಳೀಯರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುಮಾರು 13 ವ?್ಷಗಳ ಹಿಂದ?್ಟೆ ನಿರ್ಮಾಣವಾಗಿರುವ ಈ ಕಟ್ಟಡದಲ್ಲಿ 76 ಸುಸಜ್ಜಿತ ರೂಮುಗಳಿದ್ದು ಕಿಟಕಿ ಗ್ಲಾಸುಗಳು, ಕೆಲ ಶೌಚಾಲಯದ ಕಮೋಡ್ ಗಳು, ಮೇಲ್ಛಾವಣಿ ಚುರುಕಿ, ಹಾಸಿಗೆ ದಿಂಬು ಹೊದಿಕೆಗಳ ಬದಲಾವಣೆ ಸೇರಿದಂತೆ ಕೇವಲ 20 ರೂಮುಗಳಲ್ಲಿ ಸಣ್ಣಪುಟ್ಟ ಕಾಮಗಾರಿ ಕೈಗೊಂಡರೆ ಸಾಕಿತ್ತು. ಆದರೆ ಹೊರಗುತ್ತಿಗೆಯ ಎಇ ಹಾಗೂ ಪ್ರಾಧಿಕಾರದ ಅಧಿಕಾರಿಗಳು ಶಾಮೀಲಾಗಿ ಇದೇ ನೆಪದಲ್ಲಿ ಹಣ ಲೂಟಿ ಮಾಡಲು ಹುನ್ನಾರ ನಡೆಸಿ ದುಂದು ವೆಚ್ಚದ ಹೆಚ್ಚಿನ ಕಾಮಗಾರಿಗೆ ಅಂದಾಜು ಪಟ್ಟಿ ತಯಾರಿಸಿ ಸುಸ್ಥಿತಿಯಲ್ಲಿರುವ ಉತ್ತಮ ಗುಣಮಟ್ಟದ ನೆಲಹಾಸು ಟೈಲ್ಸ್ ಹಾಗೂ ಎಲ್ಲಾ ತೆರನಾದ ಟೈಲ್ಸ್ ಗಳನ್ನು ಧ್ವಂಸಗೊಳಿಸಿ ಹಾಗೂ ಹಾಲಿ ಇರುವ 50 ವೆಸ್ಟನ್ ಕಮೋಡ್ ಗಳು ಹಾಗೂ 26 ಇಂಡಿಯನ್ ಕಮೋಡ್ ಗಳಲ್ಲಿ ಕೇವಲ 10_15 ಕಮೋಡ್ ಗಳು ಮಾತ್ರ ಹಾನಿಗೀಡಾಗಿದ್ದರೂ ಶೌಚಾಲಯದ ನಲ್ಲಿ ಮತ್ತಿತರೆ ಪರಿಕರಗಳು ಸೇರಿದಂತೆ ಎಲ್ಲವನ್ನೂ ನಾಶಗೊಳಿಸಿ ಸಾಮೂಹಿಕವಾಗಿ ಹೊಸ ಕಮೋಡ್ ಅಳವಡಿಕೆಗೆ ಮುಂದಾಗಿರುವುದರ ಹಿಂದೆ ಹಣ ಲೂಟಿಯ ಸಂಚು ನಡೆದಿರುವುದು ಎದ್ದು ಕಾಣುತ್ತಿರುವುದಾಗಿ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೆಲವೇ ಲಕ್ಷಗಳಲ್ಲಿ ಮುಗಿಯಲಿದ್ದ ಕಾಮಗಾರಿಗೆ 1 ಕೋಟಿ 30 ಲಕ್ಷ ಅಂದಾಜು ಎಂದು ಆಕ್ರೋಶ ವ್ಯಕ್ತಪಟಿಸಿದರು.

# ಜ.4ರಂದು ಕೊಳ್ಳೇಗಾಲದಲ್ಲಿ ಬಂಜಾರ ವಿಚಾರ ಗೋಷ್ಠಿ ಮತ್ತು ಕವಿಗೋಷ್ಠಿ

**ಚಾಮರಾಜನಗರ:** ಬೆಂಗಳೂರಿನ ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಹಾಗೂ ಚಾಮರಾಜನಗರ ಜಿಲ್ಲಾ ಲಂಬಾಣಿ ನೌಕರರ ಸಂಘ, ಕೊಳ್ಳೇಗಾಲ ಇವರ ಸಂಯುಕ್ತಾಶ್ರಯದಲ್ಲಿ ಬಂಜಾರ ಮದುವೆ ಶಾಸ್ತ್ರಗಳ ವಿಚಾರಗೋಷ್ಠಿ ಮತ್ತು ಕವಿಗೋಷ್ಠಿಯನ್ನು ಜನವರಿ 4ರಂದು ಬೆಳಿಗ್ಗೆ 9.30 ಗಂಟೆಗೆ ಕೊಳ್ಳೇಗಾಲ ಪಟ್ಟಣದ ಪರಮಹಂಸ ರಸ್ತೆಯಲ್ಲಿರುವ ವಾಸವಿ ಮಹಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಬಂಜಾರ ಸಂಸ್ಕೃತಿ ಮತ್ತು ಭಾ?ಾ ಅಕಾಡೆಮಿ ಅಧ್ಯಕ್ಷರಾದ ಡಾ. ಎ.ಆರ್. ಗೋವಿಂದಸ್ವಾಮಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎನ್. ಜಯದೇವನಾಯ್ಕ ಅವರು ಘನ ಉಪಸ್ಥಿತಿ ವಹಿಸುವರು.

ಚಾಮರಾಜನಗರ ವೃತ್ತ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಟಿ. ಹೀರಾಲಾಲ್ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪು?್ಪಾರ್ಚನೆ ನೆರವೇರಿಸುವರು. ಉದ್ಭವ ಸಂಸ್ಥೆ ಸಂಸ್ಥಾಪಕ ಅಧ್ಯಕ್ಷರು ಮತ್ತು ಸಮಾಜ ಸೇವಕರಾದ ಚಂದ್ರಕಲಾ ಬಾಯಿ ಅವರು ಸಂತ ಸೇವಾಲಾಲ್ ಅವರ ಭಾವಚಿತ್ರಕ್ಕೆ ಪು?್ಪಾರ್ಚನೆ ಮಾಡುವರು. ಬಂಜಾರ ಸಂಸ್ಕೃತಿ ಮತ್ತು ಭಾ?ಾ ಅಕಾಡೆಮಿ ಸದಸ್ಯ ಸಂಚಾಲಕರಾದ ಜಿ. ಪಳನಿಸ್ವಾಮಿಜಾಗೇರಿ ಅವರು ಪ್ರಾಸ್ತಾವಿಕ ನುಡಿಗಳನ್ನಾಡುವರು.

ಸಾಹಿತಿ ಹಾಗೂ ಮೈಸೂರು ಜಿಲ್ಲೆ ಗ್ರಾಮಾಂತರ ಅಬಕಾರಿ ಉಪ ಆಯುಕ್ತರಾದ ಡಾ. ಮಹಾದೇವಿ ಬಾಯಿ, ಚಾಮರಾಜನಗರ ಜಿಲ್ಲೆ ಲಂಬಾಣಿ ನೌಕರರ ಸಂಘದ ಗೌರವ ಅಧ್ಯಕ್ಷರಾದ ಎಂ. ಶಾಂತರಾಜು, ಮೈಸೂರು ಜಿಲ್ಲಾ ಬಂಜಾರ ಸೇವಾ ಸಂಘದ ಅಧ್ಯಕ್ಷರಾದ ಎಂ. ಸುಂದರ್, ಮೈಸೂರಿನ ಉದ್ಯಮಿ ಕೆ. ಶಾಂತಕುಮಾರ್, ಬೆಂಗಳೂರು ಮೆ. ಸಿಟಿ ಫ.ಎ.ಐ.ಬಿ.ಎಸ್.ಎಸ್ ಅಧ್ಯಕ್ಷರಾದ ರಾಜನಾಯಕ್, ಚಾಮರಾಜನಗರ ಜಿಲ್ಲಾ ಲಂಬಾಣಿ ನೌಕರರ ಸಂಘದ ಕಾರ್ಯದರ್ಶಿ ಬಾಲುನಾಯಕ್, ಮಹಾಮತ ಸೋರಗೊಂಡನ ಕೊಪ್ಪದ, ಜಂಟಿ ಕಾರ್ಯದರ್ಶಿಗಳು ಹಾಗೂ ಚಾಮರಾಜನಗರ ಜಿಲ್ಲಾ ಬಂಜಾರ ಸೇವಾ ಸಂಘದ ಅಧ್ಯಕ್ಷರಾದ ಎಂ. ಕೃ?್ಣನಾಯಕ್, ಜಿಲ್ಲಾ ದಲಿತ ಸಾಹಿತ್ಯ ಪರಿ?ತ್ ಅಧ್ಯಕ್ಷರಾದ ಸಿ.ಎಂ. ನರಸಿಂಹಮೂರ್ತಿ, ಚಾಮರಾಜನಗರ ಜಿಲ್ಲಾ ಬಂಜಾರ ಸೇವಾ ಸಂಘದ ಕಾರ್ಯದರ್ಶಿ ಅಪ್ಪು ಮಹದೇವನಾಯಕ್, ಮಳವಳ್ಳಿ ಸಂಘ ಸಂಸ್ಥೆ ಪ್ರತಿನಿಧಿ ಮಹೇಶ್ ನಾಯಕ್, ಚಾಮರಾಜನಗರ ಸಂಘ ಸಂಸ್ಥೆ ಪ್ರತಿನಿಧಿ ಜಗದೀಶ್ ನಾಯಕ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ದಿನ್ನಳ್ಳಿ ಗ್ರಾಮಪಂಚಾಯಿತಿ ಅಧ್ಯಕ್ಷರಾದ ಪಾರ್ವತಿ ಬಾಯಿ, ಅಜ್ಜಿಪುರ ಗ್ರಾಮಪಂಚಾಯಿತಿ ಅಧ್ಯಕ್ಷರಾದ ರುದ್ರಾನಾಯಕ್, ಪುಣಜನೂರು ಗ್ರಾಮಪಂಚಾಯಿತಿ ಅಧ್ಯಕ್ಷರಾದ ಶಿವಿಭಾಯಿ ಗಣೇಶ್ ನಾಯಕ್, ಹಾಲಿ ದರ್ಕಾಸ್ ಕಮಿಟಿ ಸದಸ್ಯರು ಹಾಗೂ ತಾಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಮಣಿನಾಯಕ್, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಕುಮಾರ್‌ನಾಯಕ್, ದಿನ್ನಳ್ಳಿ ಗ್ರಾಮಪಂಚಾಯಿತಿ ಮಾಜಿ ಅಧ್ಯಕ್ಷರಾದ ವಾಲುನಾಯಕ್, ಮುರುಗ, ಗೋಪಿನಾಥಂ ಗ್ರಾಮಪಂಚಾಯಿತಿ ಮಾಜಿ ಅಧ್ಯಕ್ಷರಾದ ದೇವರಾಜ್ ನಾಯಕ್, ಪುಣಜನೂರು ಗ್ರಾಮಪಂಚಾಯಿತಿ ಮಾಜಿ ಅಧ್ಯಕ್ಷರಾದ ಮಣಿನಾಯಕ್ ಅವರು ಗೌರವ ಉಪಸ್ಥಿತಿ ವಹಿಸುವರು.

ನಾಡಿನ ಹೆಸರಾಂತ ಸಾಹಿತಿಗಳು ಮತ್ತು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಡಾ. ಬಿ.ಟಿ. ಲಲಿತಾನಾಯಕ್ ಅವರು ಬಂಜಾರ ಮದುವೆ ಶಾಸ್ತ್ರಗಳ ವಿಚಾರಗೋಷ್ಠಿ ಮತ್ತು ಕವಿಗೋಷ್ಠಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಬೆಳಿಗ್ಗೆ 10.30 ರಿಂದ 11 ಗಂಟೆಯವರೆಗೆ ಬಂಜಾರ ಸಂಸ್ಕೃತಿಯ ಅನನ್ಯತೆಯಲ್ಲಿ ಮದುವೆ ಶಾಸ್ತ್ರಗಳು ಕುರಿತು ಪುಣೆ ಪ್ರಾಂತ್ಯದ ನವೋದಯ ವಿದ್ಯಾಲಯ ನಿವೃತ್ತ ಉಪ ಆಯುಕ್ತರಾದ ಪಿ. ರವಿನಾಯಕ್ ಚೌವ್ಹಾಣ್ ಅವರು ವಿಚಾರ ಮಂಡಿಸುವರು. ಬೆಳಿಗ್ಗೆ 11 ರಿಂದ 11.30 ಗಂಟೆಯವರೆಗೆ ಮದುವೆಯ ಅನುಭವಿಕ ನೆನಪು ಮತ್ತು ಶಾಸ್ತ್ರಗಳ ಜೋಡಣೆ ಕುರಿತು ಮೈಸೂರಿನ ಮರಿಮಲ್ಲಪ್ಪ ಕಾಲೇಜಿನ ವಿಶ್ರಾಂತ ಪ್ರಾಧ್ಯಾಪಕರಾದ ಪ್ರೊ. ಚಂದ್ರಶೇಖರ್ ಅವರು ವಿಚಾರ ಮಂಡನೆ ಮಾಡುವರು. ಸಿನಿಮಾ ಮತ್ತು ನಾಟಕ ನಿರ್ದೇಕರು ಹಾಗೂ ಕವಿಗಳಾದ ಸಧೀಶಾ ಗಟ್ಟಿ ಮಂದೇಲಾ ಅವರು ಪ್ರಾತ್ಯಕ್ಷಿಕತೆ ನೀಡುವರು.

ಬೆಳಿಗ್ಗೆ 11.45 ರಿಂದ 12.15 ಗಂಟೆಯವರೆಗೆ ಮದುವೆ ಶಾಸ್ತ್ರಗಳ ಕುರಿತು ಹಿರಿಯರಿಂದ ಸಂವಾದ ನಡೆಯಲಿದ್ದು, ಜಾಗೇರಿಯ ರಾಜ ನಾಯಕ್, ಹನೂರಿನ ಕೋಳಿ ಮಹದೇವನಾಯಕ್, ಗುಂಡಾಪುರದ ಗುರುಸ್ವಾಮಿ ನಾಯಕ್, ಹೊಸೂರು ದೊಡ್ಡಿಯ ಕುಪ್ಪು ನಾಯಕ್, ದೊಮ್ಮನ ಗದ್ದೆಯ ನಾಗರಾಜು, ಕೊಳ್ಳೇಗಾಲದ ಗೌರಿ ಬಾಯಿ, ಮಾರ್ಟಳ್ಳಿಯ ರಾಜಮ್ಮ ಬಾಯಿ, ಗೋಪಿನಾಥಂನ ಮುನಿಸ್ವಾಮಿ ನಾಯಕ್, ಪಿ.ಜಿ.ಪಾಳ್ಯದ ಸಿದ್ದು ನಾಯಕ್, ದೊಮ್ಮನಗದ್ದೆ ಗೋವಿಂದ ನಾಯಕ್, ಗೊಲ್ಲರ ದಿಂಬದ ನಾಗು ನಾಯಕ್, ಬೂದಿಬಡಗದ ರುಕ್ಕಣಿ ಬಾಯಿ, ಈರಯ್ಯನಪುರದ ಶಿವು ನಾಯಕ್, ಬೆಜ್ಜಲಪಾಳ್ಯದ ನಾಗ ನಾಯಕ್, ಮೂಕನಪಾಳ್ಯದ ಶಂಕರ ನಾಯಕ್, ರುಕ್ಕಿಣಿ ಬಾಯಿ ಅವರು ಸಂವಾದದಲ್ಲಿ ಭಾಗವಹಿಸುವರು. ದೊಡ್ಡಮೂಡಹಳ್ಳಿಯ ಮೇಘ್ಯಾ ನಾಯಕ್ ಅವರು ಸಂವಾದ ನಿರ್ವಹಣೆ ಮಾಡುವರು.

ಬಂಜಾರ ಭಾ?ೆಯಲ್ಲಿ ಕವಿಗೋಷ್ಠಿಯಲ್ಲಿ ನಡೆಯಲಿದ್ದು, ಸೇವಾಲಾಲ್ ನಗರದ ಕೃ?್ಣನಾಯಕ್, ಕೋಟೆ ಕೃ?್ಣ ನಾಯಕ್, ಸೇವಾಲಾಲ್ ನಗರದ ಲಚ್ಚು ನಾಯಕ್, ಮೈಸೂರಿನ ಚಂದ್ರಪ್ರಕಾಶ್, ಜಾಗೇರಿಯ ಬಲರಾಮ್, ದೊಮ್ಮನ ಗದ್ದೆಯ ರಾಜೇಂದ್ರ, ಕೋಳಿಪಾಳ್ಯದ ಎಂ.ಪಿ. ಭಗವಾನ್ ಅವರು ಭಾಗವಹಿಸುವರು. ಮಾರ್ಟಳ್ಳಿಯ ಬಾಲು ನಾಯಕ್ ಅವರು ಕವಿಗೋಷ್ಠಿ ನಿರ್ವಹಣೆ ಮಾಡುವರು.

ಮಧ್ಯಾಹ್ನ 2.30 ಗಂಟೆಗೆ ಸಮಾರೋಪ ಮತ್ತು ಜಿಲ್ಲಾ ಲಂಬಾಣಿ ನೌಕರರ ಸಂಘದಿಂದ ಗೌರವ ಸಮರ್ಪಣೆ ಸಮಾರಂಭ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

# ವಿದ್ಯುತ್ ಶಾರ್ಟ್ ಸರ್ಕೀಟ್ ಚನ್ನಿಪುರಮೋಳೆಗೆ ಸಿ.ಪುಟ್ಟರಂಗಶೆಟ್ಟಿ ಭೇಟಿ



**ಚಾಮರಾಜನಗರ:** ನಗರಸಭೆ ವ್ಯಾಪ್ತಿಯ 24 ನೇ ವಾರ್ಡಿನ ಚನ್ನಿಪುರಮೋಳೆಯಲ್ಲಿ ಬುಧವಾರ ಸಂಜೆವಿದ್ಯುತ್ ಶಾರ್ಟ್ ಸರ್ಕೀಟ್‌ನಿಂದಾಗಿ ನಿವಾಸಿಯೊಬ್ಬರ ಮನೆಯೊಂದು ಸುಟ್ಟ ಹಿನ್ನೆಲೆ ಎಂಎಸ್‌ಐಎಲ್‌ಅಧ್ಯಕ್ಷರೂ ಆದ ಶಾಸಕ ಸಿ. ಪುಟ್ಟರಂಗಶೆಟ್ಟಿ ಗುರುವಾರ ಬೆಳಗ್ಗೆ ಸ್ಥಳಕ್ಕೆ ಭೇಟಿನೀಡಿ, ಬೆಂಕಿಯ ಅವಘಡದಿಂದ ನಡೆದ ಹಾನಿಯ ಪರಿಶೀಲನೆ ನಡೆಸಿದರು.

ವಾರ್ಡಿನ ನಿವಾಸಿ ಭಾಗ್ಯ ಹೂವಿನ ವ್ಯಾಪಾರಿಯಾಗಿದ್ದು, ಹೂ ಖರೀದಿಸಲು ಹೊರಗಡೆ ಬಂದಿದ್ದರು. ಅವರು ಮನೆಗೆ ಬರುವಷ್ಟರಲ್ಲಿ ಮನೆಯ ಒಳಗೆ ಬೆಂಕಿ ವ್ಯಾಪಿಸಿತ್ತು. ಬೆಂಕಿಯ ಅವಘಡಕೆ ್ಕಮನೆಯಲ್ಲಿದ್ದ ಟಿವಿ, ಮಗಳ ಮದುವೆಗೆ ಸಂಗ್ರಹಿಸಿಟ್ಟಿದ್ದ ಸುಮಾರು ಒಂದೂವರೆ ಲಕ ್ಷರೂ. ಹಣ, ಮನೆ ಆಸ್ತಿಪತ್ರ, ದಿನಸಿ ಸಾಮಾಗ್ರಿಗಳು, ಬಟ್ಟೆಗಳು ಸುಟ್ಟುಹೋಗಿವೆ. ಇದೇ ವೇಳೆ ನಿವಾಸಿ ಭಾಗ್ಯ: ನಾವು ಕಡುಬಡವರು, ವಾಸಮಾಡಲು ತೊಂದರೆಯಾಗಿದೆ, ಮಗಳ ಮದುವೆಗೆ ಕೂಡಿಟ್ಟಿದ್ದ ಹಣವುಬೆಂಕಿಗೆ ಸುಟ್ಟುಹೋಗಿದೆ, ಜತೆಗೆ ಮನೆಪತ್ರ, ಟಿವಿ, ಬಟ್ಟೆ ನಾಶವಾಗಿವೆ, ತಮಗೆ ವಾಸ ಮಾಡಲು ಮನೆಕೊಡಿಸಿಕೊಡಬೇಕು, ಬೆಂಕಿ ಅವಘಡಕ್ಕೆ ಪರಿಹಾರಕೊಡಿಸಬೇಕು ಎಂದು ಶಾಸಕರಿಗೆ ಮನವಿ ಮಾಡಿದರು. ಶಾಸಕ ಸಿ.ಪುಟ್ಟರಂಗಶೆಟ್ಟಿ ಪ್ರತಿಕ್ರಿಯಿಸಿ: ಈಚೆಗೆ ಸರ್ಕಾರ ಮನೆಗಳಿಗೆ ಬೆಂಕಿಬಿದ್ದ ಸಂಬಂಧ ಪರಿಹಾರ ನೀಡುತ್ತಿಲ್ಲ. ನಾನು ಈಗಾಗಲೇ ವೈಯಕ್ತಿಕ ಪರಿಹಾರ ನೀಡಿದ್ದೇನೆ. ನಗರದ ಸೋಮವಾರಪೇಟೆ ಸಮೀಪ ಘನತ್ಯಾಜ್ಯ ವಿಲೇವಾರಿಘಟಕದ ಬಳಿ 1ಸಾವಿರಮನೆ ನಿರ್ಮಿಸಿಕೊಡುವಷ್ಟು 30 ಎಕರೆಜಮೀನಿದೆ. ಸಿಎಂ ಜತೆ ಚರ್ಚಿಸಿ, ನಿವೇಶನರಹಿತರಿಗೆ ಹಕ್ಕುಪತ್ರ ವಿತರಿಸಿ ಮನೆ ನಿರ್ಮಿಸಿಕೊಡಲು ಕ್ರಮವಹಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕರ ಬಳಿ ವಾರ್ಡಿನ ನಿವಾಸಿಗಳು ರಸ್ತೆ ಹಾಗೂ ಚರಂಡಿ ನಿರ್ಮಿಸಿಕೊಡಬೇಕು ಎಂದು ಮನವಿ ಮಾಡಿದರು.

ಮಾಜಿ ಸದಸ್ಯರಾದ ಮಲ್ಲು, ಕೆಂಪರಾಜು, ವಾರ್ಡಿನ ನಿವಾಸಿಗಳಾದ ಶೇಷ, ಮಂಜು, ನಗರಸಭೆ ಆಯುಕ ್ತಎಸ್.ವಿ. ರಾಮದಾಸ್, ಎಇಇ ಶಿವಶಂಕರ ಆರಾಧ್ಯ, ಸೆಸ್ಕ್ ಎಇಇ ಮಹೇಶ್, ಜೆಇ ಮಂಜು ಹಾಜರಿದ್ದರು.

# ಭೀಮ ಕೋರೆಂಗಾವ್ ವಿಜಯೋತ್ಸವ ಆಚರಣೆ

**ಹನೂರು:** ಭೀಮ ಕೋರೆಂಗಾವ್ ವಿಜಯೋತ್ಸವವನ್ನು ಆಚರಣೆ ಮಾಡುತ್ತಿರುವುದು ತುಂಬಾ ಸಂತೋ? ವಾಗಿದೆ. ವಿಜಯೋತ್ಸವ ಹಿಂದೆ ಸಾಕ?್ಟು ವಿಚಾರಗಳಿವೆ. ಭೀಮ ಕೋರೆಂಗಾವ್ ಆಚರಣೆಯ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಬೇಕು ಎಂದು ಚರ್ಚ್ ಫಾದರ್ ಟೆನ್ನಿಕುರಿಯನ್ ಅವರು ತಿಳಿಸಿದ್ದಾರೆ.

ತಾಲೂಕಿನ ಮಾರ್ಟಳ್ಳಿ ಗ್ರಾಮದ ಸೆಂಟ್ ತೇರೆಸ್ಸಾ ಚರ್ಚ್ ಅವರಣದ ಸಮುದಾಯ ಭವನದಲ್ಲಿ ಮೈಸೂರು ವಿಭಾಗ ಚಾ ನಗರ ಜಿಲ್ಲೆ ಕರ್ನಾಟಕ ದಲಿತ ಸಂಘ?ರ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ 207ನೇ ಭೀಮ ಕೋರೆಂಗಾವ್ ವಿಜಯೋತ್ಸವ ಕಾರ್ಯಕ್ರಮವನ್ನು ದೀಪ ಬೆಳಗಿಸಿ ಉದ್ಘಾಟಿಸಿದರು. ನಂತರ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪು?್ಪಾರ್ಚನೆ ಸಲ್ಲಿಸಿ ಗೌರವ ಸಲ್ಲಿಸಿದರು ನಂತರ ಮಾತನಾಡಿದರು.

ಬಾಬಾ ಸಾಹೇಬ್ ಡಾಕ್ಟರ್ ಬಿಆರ್ ಅಂಬೇಡ್ಕರ್ ಅವರು ಭಾರತಕ್ಕೆ ಸಂವಿಧಾನವನ್ನು ಕೊಡುಗೆಯಾಗಿ ನಿದ್ದಿದ್ದಾರೆ, ಭಾರತದಲ್ಲಿ ಜೀವಿಸುವ ಎಲ್ಲರಿಗೂ ಜನರು ಸಮಾಜದಲ್ಲಿ ಸರಿ ಸಮಾನ ಸ್ಥಾನ ಮಾನ ಸಿಗಬೇಕು ಎನ್ನುವ ನಿಟ್ಟಿನಲ್ಲಿ ಎಲ್ಲರ ವರ್ಗದ ಜನರಿಗೆ ಜಾತಿ ಜನಾಂಗಕ್ಕೆ ಸೇರಿದ ಸಂವಿಧಾನ ನೀಡಿದ್ದಾರೆ. ಅದನ್ನು ಅರ್ಥ ಮಾಡಿಕೊಳ್ಳಬೇಕು ಎನ್ನುವ ಸಂದೇಶವನ್ನು ನೀಡಿದ್ದಾರೆ. ಸಮಾಜ ಮುಂದೆ ಬರಬೇಕಾದರೆ ವಿದ್ಯಾವಂತರಾಗಬೇಕು ಎಂದು ಸಲಹೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಅತಿ ಹೆಚ್ಚು ಜನರು ಮೋಬೈಲ್ ಗೆ ಗುಲಾಮರಗುತ್ತಿದ್ದೇವೆ, ಸಂಬಂಧಗಳನ್ನು ನಾಶ ಮಾಡಿಕ್ಕೊಳುತ್ತಿದ್ದೇವೆ, ಕೆಟ್ಟದ್ದಕ್ಕೆ ಉಪಯೋಗವಾಗುತ್ತಿದೆ ಆದ್ದರಿಂದ ಕೆಟ್ಟ ಕಲಸಗಳಿಗೆ ಭಾಗಿಯಾಗುವವರು ಗುಲಾಮ ಗರುತ್ತಾರೆ, ಅಂಬೇಡ್ಕರ್ ಅವರ ವ್ಯಕ್ತಿತ್ವಗಳನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ನಂತರ ಕೊಳ್ಳೇಗಾಲ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆ ನಿರ್ಮಾತೃ ಹಾಗೂ ಪ್ರಥಮ ದರ್ಜೆ ಗುತ್ತಿಗೆದಾರ ಓಲೆ ಮಾದೇವ ಅವರು ಮಾತನಾಡಿ ಭೀಮ ಕೋರಂಗಾವ್ ವಿಜಯೋತ್ಸವ ಆಚರಣೆಯ ವಿಚಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವರಾದ ಮಹದೇವಪ್ಪ ಅವರ ಗಮನಕ್ಕೆ ತಂದು ಜನವರಿ ಒಂದರ ಭೀಮ ಕೊರಂಗಾವ್ ಆಚರಣೆಯಂದು ರಜ ದಿನವನ್ನಾಗಿ ಘೋ?ಣೆಯನ್ನಾಗಿ ಮಾಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಗ್ರಾ.ಪಂ. ಮಾಜಿ ಉಪಾಧ್ಯಕ್ಷ ಹಾಲಿ ಸದಸ್ಯ ರಾಮಲಿಂಗಂ ಅವರು ಮಾತನಾಡಿ ಸಮಾಜದಲ್ಲಿ ಶೋಷಿತರ ತುಳಿತಕ್ಕೆ ಒಳಗಾಗಿದ್ದವರು. ದಲಿತರನ್ನು ಆಸ್ಪೃಶ್ಯತೆಯಿಂದ ನೋಡುತ್ತಿದ್ದರು. ದಲಿತರು ಸಮಾಜದಲ್ಲಿ ಶೈಕ್ಷಣಿಕವಾಗಿ ಹಿಂದುಳಿದ್ದರು. ಅಂಬೇಡ್ಕರ್ ಅವರ ಸಂವಿಧಾನದ ಕೊಡುಗೆಯಿಂದ ಇವತ್ತು ಸಮಾಜದಲ್ಲಿ ಸಮಾನತೆ ಸ್ವಾತಂತ್ರ್ಯ ಬಂದಿದೆ.

ನಮ್ಮ ದೇಶಕ್ಕೆ ಅಮೂಲ್ಯವಾದ ಸಂವಿಧಾನವನ್ನು ಕೊಡುಗೆಯಾಗಿ ನೀಡಿದ ಮಹಾನ್ ನಾಯಕರು ಡಾಕ್ಟರ್ ಬಿಆರ್ ಅಂಬೇಡ್ಕರ್ ಅವರ ತತ್ವ ಆದರ್ಶಗಳ ಬಗ್ಗೆ ತಿಳಿದುಕೊಂಡು. ಶಿಕ್ಷಣ ಕೊಡಿಸುವ ನಿಟ್ಟಿನಲ್ಲಿ ಸಮಾಜದಲ್ಲಿ ಬೆಳೆಯುವಂತಾಗಬೇಕು.

206 ವ?ರ್ಗಳ ಹಿಂದೆ ಪೇಶ್ವೆಯ 25 ಸಾವಿರ ಸೈನಿಕರ ವಿರುದ್ಧ ಐನೂರು ಮಂದಿ ದಲಿತ ಮಹಾರ್ ಸೈನಿಕರು ಹೋರಾಡಿದ ಜನವರಿ ಒಂದನ್ನು ದಲಿತರು ನಾವು ಅನುಭವಿಸಿದ ಅಸ್ಪೃಶ್ಯತೆಯ ನೋವು ಸಂಕಟಗಳ ಪ್ರತಿರೋಧ ದಿನವನ್ನಾಗಿ ದೇಶ್ಯಾದ್ಯಂತ ಆಚರಿಸಲಾಗುತ್ತದೆ. ಸಂವಿಧಾನದ ಅಡಿಯಲ್ಲಿ ನಮ್ಮ ಹಕ್ಕುಗಳನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಫಾದರ್ ಟೆನ್ನಿ ಕುರಿಯನ್ ಅವರು ಭೀಮ ಕೊರಂಗಾವ್ ಪುಸ್ತಕವನ್ನು ಬಿಡುಗಡೆ ಮಾಡಿದರು. ಚಾಮರಾಜನಗರ ಜಿಲ್ಲಾ ಎಸ್.ಸಿ ಎಸ್.ಟಿ ಗುತ್ತಿಗೆದಾರ ಸಂಘದ ಅಧ್ಯಕ್ಷ ಎಂಎಸ್ ಮಾದಯ್ಯ, ಹಾಗೂ ಡೆಲ್ಲಿ ಡಾ.ಬಿಆರ್ ಅಂಬೇಡ್ಕರ್ ನ್ಯಾ?ನಲ್ ಫಿಲೋಸಫಿ ಪ್ರಶಸ್ತಿ ಪುರಸ್ಕೃತರು ರಾಮಲಿಂಗಂ ಅವರಿಗೆ ನಿಂಪುವಾರ್ತೆ ಪತ್ರಿಕೆ ಸಂಪಾದಕ ರಾಜೇಶ್ ಅವರು ಸನ್ಮಾನಿಸಿದರು.

ಕಾರ್ಯಕ್ರಮಕ್ಕೆ ಮೊದಲು ಮಾರ್ಟಳ್ಳಿ ಗ್ರಾಮದಲ್ಲಿ ನಡೆದ ಭೀಮ ಕೋರಂಗಾವ್ ವಿಜಯೋತ್ಸವ ಆಚರಣೆಯ ವಿಶೇ?ವಾಗಿ ಗ್ರಾಮದ ಮುಖ್ಯ ರಸ್ತೆಯಲ್ಲಿ ಜೈ ಭೀಮ್ ಬಾವುಟ ಹಿಡಿದು ಘೋ?ಣೆ ಕೂಗುತ್ತ ಮೆರವಣಿಗೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾರ್ಟಳ್ಳಿ ಗ್ರಾಮ ಪಂ. ಅಧ್ಯಕ್ಷ ಇನ್ನಾಸಿಮುತ್ತು, ಗುಡ್ ಶೆಫರ್ಡ್ ಸಂಸ್ಥೆ ಸಿಸ್ಟರ್ ಕ್ರಿಷ್ಟಿ,

ರಾಜ್ಯ ಸಂಘಟನಾ ಸಂಚಾಲಕರು ಮೈಸೂರು ವಿಭಾಗಿಯ ಸಂಚಾಲಕವಾಡಿ ಸಿದ್ದರಾಜು, ನಿಂಪು ವಾರ್ತೆ ಪತ್ರಿಕೆ ಸಂಪಾದಕ ರಾಜೇಶ್, ದಲಿತ ಮುಖಂಡರಾದ ಮುಳ್ಳೂರು ಶಿವಮಲ್ಲು, ನಾಗರಾಜು, ಬಾಲಯ್ಯ, ಗುತ್ತಿಗೆದಾರ ಪುಟ್ಟಸ್ವಾಮಿ, ಪೆದ್ದನಪಾಳ್ಯ ಮಣಿ, ಪ್ರಜಾ ವಿಮೋಚನ ಚಳುವಳಿ ಅಧ್ಯಕ್ಷ ಮಾಲಿಂಗಯ್ಯ, ಎಂ.ಜಿ ದೊಡ್ಡಿ ಮುರುಗೇಶ್, ಮಾದೇಶ, ವೇಲನ್ ಸೇರಿದಂತೆ ಇನ್ನಿತರರು ಹಾಜರಿದ್ದರು.

# ಶ್ರೀಧರಗಡ್ಡೆ ಗ್ರಾಮ ಪಂಚಾಯ್ತಿಯಲ್ಲಿ ಆಟಕ್ಕುಂಟು ಲೆಕ್ಕಕ್ಕಿಲ್ಲ ಸ್ವಚ್ಛತೆಗೆ ಆದ್ಯತೆ ಇಲ್ಲ



**ಬಳ್ಳಾರಿ:** ತಾಲ್ಲೂಕಿನ ಶ್ರೀಧರಗಡ್ಡೆ ಗ್ರಾಮದಲ್ಲಿ ಬರುವ 3ನೆ ವಾರ್ಡಿನ ಮಾಳಗಡ್ಡೆ ಭಾಗದ ನೀರಿನ ಟ್ಯಾಂಕ್ ಪಕ್ಕದ ಕಪ್ಪಗಲ್ಲು ರಸ್ತೆಯ ಪಕ್ಕದಲ್ಲಿ ಮತ್ತು ವಿವಿಧ ಭಾಗಗಳಲ್ಲಿ ಸ್ವಚ್ಛತೆ ಇಲ್ಲದೆ ಕಸದ ರಾಶಿ ಮತ್ತು ಚರಂಡಿಗಳ ತುಂಬಾ ಊಳು ತುಂಬಾ ಗಬ್ಬು ನಾರುತ್ತಿವೆ, ಸಾರ್ವಜನಿಕರು ಓಡಾಡುವ ಸಮಯದಲ್ಲಿ ತುಂಬಾ ವಾಸನೆ ಬರುತ್ತಿದ್ದು, ಇದರ ಬಗ್ಗೆ ಗ್ರಾಮ ಪಂಚಾಯತಿ ಬೇಜವಾಬ್ದಾರಿ ತೋರುತ್ತಿರುವುದು ಎದ್ದು ಕಾಣುತ್ತಿದೆ, ಚರಂಡಿಗಳಲ್ಲಿ ಊಳು ತುಂಬಿ ವಾಸನೆಯ ಮನೆಯಾಗಿದೆ, ಅಲ್ಲದೆ ಸೊಳ್ಳೆಗಳು ಉತ್ಪತ್ತಿಯಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂದು ಇಲ್ಲಿನ ಸಾರ್ವಜನಿಕರು ಮತ್ತು ಈ ಭಾಗದ ವಾರ್ಡಿನ ಸದಸ್ಯರಿಗೆ ಹಲವು ಬಾರಿ ತಿಳಿಸಿದ್ದಾರೆ.



ಆದರೆ ಗ್ರಾಮ ಪಂಚಾಯತಿ ಅಧ್ಯಕ್ಷರು/ಪಂಚಾಯ್ತಿ ಅಧಿಕಾರಿಗಳು ಪಿಡಿಒ ಇಲ್ಲ ಅದಕ್ಕೆ ಬರಲಿ ಎಂದು ನೇವ ಹೇಳಿಕೊಂಡು ಕಾಲ ಕಳೆಯುತ್ತಿದ್ದರು, ಈಗ ಪಿಡಿಒ ಬಂದಿದ್ದಾರೆ, ಪಿಡಿಒ ಅವರು ಬಂದರು ಸಹ ಬರೀ ಭರವಸೆಯಲ್ಲಿ ದಿನಗಳು ಕಳೆದಿವೆ, ಇದರ ಬಗ್ಗೆ ಕ್ರಮ ಕೈಗೊಳ್ಳದಿರುವುದು ಸಾರ್ವಜನಿಕರು ಆಕ್ರೋಶಕ್ಕೆ ಕಾರಣವಾಗಿದೆ.

ಕಳೆದ ಎರಡು ತಿಂಗಳ ಹಿಂದೆ ಇದೇ ಭಾಗಕ್ಕೆ ಕಂಪ್ಲಿ ಕ್ಷೇತ್ರದ ಶಾಸಕ ಗಣೇಶ್ ಅವರು ಭೂಮಿ ಪೂಜೆಗೆಂದು ಬಂದ ಸಂದರ್ಭದಲ್ಲಿ ವಾರ್ಡಿನ ಸಾರ್ವಜನಿಕರು ಶಾಸಕರ ಗಮನಕ್ಕೆ ತಂದ ತಕ್ಷಣ ಪಂಚಾಯತಿಯ ಅಧಿಕಾರಿಗಳಿಗೆ ತಿಳಿಸಿದರು, ಸಹ ಲೆಕ್ಕಕ್ಕಿಲ್ಲ ತೆಗೆದುಕೊಳ್ಳದೆ ಇರುವುದು ಕಣ್ಣಿಗೆ ಕಾಣುತ್ತಿದೆ. ಆದರೆ ಇದರ ಬಗ್ಗೆ ಆದ್ಯತೆ ನೀಡದೆ ಆಟಕ್ಕುಂಟು ಲೆಕ್ಕಕ್ಕಿಲ್ಲ ಎಂಬಂತೆ ಗ್ರಾಮ ಪಂಚಾಯತಿ ವಾರ್ಡಿನ ಸದಸ್ಯರಿಗೆ ಕೆಲಸ ಕೊಡದೆ, ಸ್ವಚತೆಗೆ ಆದ್ಯತೆ ನೀಡದೆ ಬರೀ ಪಿಡಿಒಗಳ ಹೆಸರಿನ ಮೇಲೆ ಹೇಳುತ್ತಾ ಕಾಲ ಕಳೆಯುತ್ತಿರುವುದು ನಾಚಿಕೆ ಗೇಡಿನ ಸಂಗತಿ ಎಂದರು. ಆದಷ್ಟು ಬೇಗ ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಅಥವಾ ಉಪ ಅಧಿಕಾರಿಗಳು ಗ್ರಾಮದ ಕಡೆ ತಿರುಗಿ ನೋಡಲು ಸಾರ್ವಜನಿಕರ ಮನವಿಯಾಗಿದೆ.

ಆದಷ್ಟು ಬೇಗ ಸ್ವಚತೆಯ ಬಗ್ಗೆ ಮತ್ತು ವಿವಿಧ ಕಾಗಾರಿಗಳ ಬಗ್ಗೆ ಕ್ರಮಕೈಗೊಳ್ಳಬೇಕು ಎಂದು ಸಾರ್ವಜನಿಕರು ಪತ್ರಿಕೆ ಮಾಧ್ಯಮದ ಮೂಲಕ ಆಕ್ರೋಶವನ್ನು ಹೊರಹಾಕಿ ಎಚ್ಚರಿಕೆಯನ್ನು ನೀಡಿದ್ದಾರೆ. ಇಲ್ಲವಾದಲ್ಲಿ ಗ್ರಾಮ ಪಂಚಾಯತಿಗೆ ಬೀಗವನ್ನು ಹಾಕಿ ಗಬ್ಬು ನಾರುತ್ತಿರುವ ಕಸವನ್ನು ಪಂಚಾಯಿತಿ ಮುಂದೆ ಹಕಿಬರುವ ಎಚ್ಚರಿಯನ್ನು ಸಾರ್ವಜನಿಕರು ನೀಡಿದ್ದಾರೆ.

# ಜಿಲ್ಲಾ ಸರ್ಕಾರಿ ವಾಹನ ಚಾಲಕರ ಸಂಘದ ಕ್ಯಾಲೆಂಡರ್ ಬಿಡುಗಡೆ

**ಚಾಮರಾಜನಗರ:** ರಾಜ್ಯ ಸರ್ಕಾರದ ಜಿಲ್ಲಾ ವಾಹನ ಚಾಲಕರ ಸಂಘದ ಕ್ಯಾಲೆಂಡರ್ ಅನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಗುರುವಾರ ಬಿಡುಗಡೆ ಮಾಡಿದ್ದಾರೆ.

ನಗರದ ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕ್ಯಾಲೆಂಡರ್ ಬಿಡುಗಡೆ ಮಾಡಿ ಹೊಸವರ್ಷದ ಶುಭಾಶಯಗಳನ್ನು ಕೋರಿದರು. ಈ ಸಂದರ್ಭದಲ್ಲಿ ಜಿಲ್ಲಾ ವಾಹನ ಚಾಲಕರ ಜಿಲ್ಲಾಧ್ಯಕ್ಷರಾದ ಆರ್. ಶ್ರೀನಿವಾಸ್, ಗೌರವ ಅಧ್ಯಕ್ಷರಾದ ಬಿ.ಪಿ. ಪ್ರಕಾಶ್, ಉಪಾಧ್ಯಕ್ಷರಾದ ಎಸ್. ಶಶಿಕುಮಾರ್, ಕಾರ್ಯದರ್ಶಿಗಳಾದ ಎಂ.ಎಸ್. ಪ್ರಭುಸ್ವಾಮಿ ಹಾಗೂ ಸಂಘದ ಪದಾಧಿಕಾರಿಗಳು, ಜಿಲ್ಲಾ ವಾಹನ ಚಾಲಕರು ಉಪಸ್ಥಿತರಿದ್ದರು.




# ‘ರಾಜಕಾರಣ ಮಾಡಬೇಕಾದರೆ ಹಣಬಲ, ಜಾತಿಬಲ, ತೋಳ್ಬಲ ಇರಲೇಬೇಕು’

**ಕೆ.ಆರ್.ಪೇಟೆ:** ಇಂದು ರಾಜಕಾರಣ ಮಾಡಬೇಕಾದರೆ ಹಣಬಲ, ಜಾತಿಬಲ, ತೋಳ್ಬಲ ಇರಬೇಕಾದ ಅನಿವಾರ್ಯತೆ ಉಂಟಾಗಿದೆ ಎಂದು ಮಿತ್ರ ಫೌಂಡೇಷನ್ ಅಧ್ಯಕ್ಷ ವಿಜಯ್ ರಾಮೇಗೌಡ ತಿಳಿಸಿದ್ದಾರೆ. ಅವರು ಪಟ್ಟಣದ ಸುಲೋಚನಮ್ಮ ಪಾರ್ಟಿಹಾಲ್‌ನಲ್ಲಿ 2025ನೇ ಸಾಲಿನ ದಿನದರ್ಶಿಕೆಯನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ನಿಸ್ವಾರ್ಥವಾಗಿ ಸೇವೆ ಮಾಡುವ ಉದ್ದೇಶದಿಂದ ಮಿತ್ರ ಫೌಂಡೇಷನ್ ಸ್ಥಾಪಿಸಿದ್ದು ತಾಲ್ಲೂಕಿನ ಜನತೆಗೆ ನನ್ನ ಕೈಲಾದಷ್ಟು ಸೇವೆ ಮಾಡುತ್ತಿದ್ದೇನೆ. ನಾನು ಅನಿವಾರ್ಯವಾಗಿ ರಾಜಕಾರಣಕ್ಕೆ ಬಂದವನು. ನನ್ನನ್ನು ಪ್ರೀತಿಯಿಂದ ಕಂಡ ನನ್ನ ತಾಲ್ಲೂಕಿನ ಜನರಿಗೋಸ್ಕರ ಸೇವೆ, ಸಹಾಯ ಹಾಗೂ ರಾಜಕಾರಣ ಮಾಡಬೇಕಿದೆ. ಜನಗಳ ಶಕ್ತಿ ಇದ್ದರೆ ಮಾತ್ರ ರಾಜಕಾರಣದಲ್ಲಿ ಗೆಲ್ಲಬಹುದು. ರಾಜಕಾರಣ, ಚುನಾವಣೆಗಳು ಬರುತ್ತವೆ ಹೋಗುತ್ತವೆ ಆದರೆ ಜನರ ಮನಸ್ಸಿನಲ್ಲಿ ಉಳಿಯಬೇಕಾದುದು ನಾಯಕರಾದವರ ಕರ್ತವ್ಯ. ನಾನು ನನ್ನ ದುಡಿಮೆಯ ಅರ್ಧದಷ್ಟು ಭಾಗವನ್ನು ಮಿತ್ರ ಫೌಂಡೇಷನ್ ವತಿಯಿಂದ ಸಮಾಜಸೇವಾ ಕಾರ್ಯಗಳಿಗೆ ಬಳಸುತ್ತಿದ್ದೇನೆ. ಇದು ನನ್ನ ತಂದೆತಾಯಿಯರ ಆಸೆಯಾಗಿತ್ತು. ಹೀಗಾಗಿ ಹಲವಾರು ವರ್ಷಗಳಿಂದ ಜನರ ಸೇವೆಯನ್ನು ಮಾಡುತ್ತಾ ಬಂದಿದ್ದು ಮುಂದೆಯೂ ತಾಲ್ಲೂಕಿನ ಜನರ ಸೇವೆಗೆ ಸಿದ್ದನಿರುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಟಿಎಪಿಸಿಎಂಎಸ್ ಅಧ್ಯಕ್ಷ ಬಿ.ಎಲ್.ದೇವರಾಜು, ಪ್ರಗತಿಪರ ಕೃಷಿಕ ವಿಠಲಾಪುರ ಸುಬ್ಬೇಗೌಡ, ಮತ್ತಿಘಟ್ಟಕೃಷ್ಣಮೂರ್ತಿ, ರಾಮಸ್ವಾಮಿ, ಪ್ರೇಮ್ ಕುಮಾರ್, ಬಸವೇಗೌಡ, ಕೃಷ್ಣೇಗೌಡ ಜಯರಾಮ್ ವಿಜಯ್ ರಾಮೇಗೌಡರ ಆಪ್ತ ಸಹಾಯಕ ಬಸವರಾಜು ಸೇರಿದಂತೆ ನೂರಾರು ವಿಜಯ್ ರಾಮೇಗೌಡರ ಅಭಿಮಾನಿಗಳಿದ್ದರು.

# ಸೇತುವೆ ನಿರ್ಮಾಣ ಕಾಮಗಾರಿಗೆ ಸಿ.ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ



**ಚಾಮರಾಜನಗರ:** ಚಾಮರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹರದನಹಳ್ಳಿ, ತಾವರಕಟ್ಟೆಮೋಳೆ ಸಂಪರ್ಕಿಸುವ 75 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾಗುವ ಸೇತುವೆ ನಿರ್ಮಾಣ ಕಾಮಗಾರಿಗೆ ಎಂಎಸ್‌ಐಎಲ್ ಅಧ್ಯಕ್ಷರೂ ಆದ ಶಾಸಕ ಸಿ. ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ ನೆರವೇರಿಸಿದರು.

ನಂತರ ಅವರು ಮಾತನಾಡಿ, ಹರದನಹಳ್ಳಿ, ತಾವರಕಟ್ಟೆಮೋಳೆ ಸಂಪರ್ಕಿಸುವ ಹಳೇಸೇತುವೆತಳಮಟ್ಟದಲ್ಲಿದ್ದು,ಮಳೆಬಂದರೆ ಸೇತುವೆಯಲ್ಲಿ ನೀರು ನಿಲ್ಲುತ್ತದೆ, ಶಾಲಾ ವಿದ್ಯಾರ್ಥಿಗಳು, ರೈತರು, ವಾಹನಸವಾರರಿಗೆ ಸಂಚರಿಸಲು ಸಮಸ್ಯೆಯಾಗುತ್ತಿದೆ, ಈ ಸಂಬಂಧ ಗ್ರಾಮಸ್ಥರು ಹೊಸದಾಗಿ ಸೇತುವೆ ನಿರ್ಮಿಸಿಕೊಡುವಂತೆ ಮನವಿ ಮಾಡಿದ್ದರು, ಗ್ರಾಮಸ್ಥರ ಬೇಡಿಕೆಯತೆ ಸಣ್ಣನೀರಾವರಿ ಇಲಾಖೆ ವತಿಯಿಂದ 75ಲಕ್ಷ ರೂ.ವೆಚ್ಚದಲ್ಲಿ ಸೇತುವೆ ನಿರ್ಮಿಸಲು ಗುದ್ದಲಿಪೂಜೆ ನೆರವೇರಿಸಲಾಗಿದೆ, ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಗೆ ಹೆಚ್ಚು ಒತ್ತು ನೀಡಿ, ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ, ಸಾರ್ವಜನಿಕರ ಮುಕ್ತ ಸಂಚಾರಕ್ಕೆ ಅವಕಾಶ ಮಾಡಿಕೊಡಬೇಕುಎಂದು ಸಣ್ಣನೀರಾವರಿ ಇಲಾಖೆ ಎಂಜಿನಿಯರ್‌ಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಹರದನಹಳ್ಳಿ ಗ್ರಾ.ಪಂ. ಅಧ್ಯಕ್ಷ ಮಂಜು, ಸದಸ್ಯ ಮಹೇಶ್, ಡೇರಿ ಅಧ್ಯಕ್ಷ ಬಸವರಾಜು, ತಾ.ಪಂ. ಮಾಜಿ ಸದಸ್ಯ ಎಚ್.ಎಂ. ಮಹದೇವಶೆಟ್ಟಿ, ಸಣ್ಣನೀರಾವರಿ ಇಲಾಖೆ ಚಾಮರಾಜನಗರ ವಿಭಾಗದ ಇಇ ಮಂಜುಳಾ, ಎಇಇ ಅಭಿಲಾಷ್, ಗುತ್ತಿಗೆದಾರ ಹನುಮಂತು, ಶಶಿಶೆಟ್ಟಿ, ವರ್ಕ್‌ಇನ್ಸ್‌ಪೆಕ್ಟರ್ ಬಸವಣ್ಣ, ಗ್ರಾ.ಪಂ. ಪಿಡಿಒ ಶ್ರೀಕಂಠನಾಯ್ಕ, ಗ್ರಾಮಸ್ಥರು ಹಾಜರಿದ್ದರು.

# ಗುಂಬಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರ ಚುನಾವಣೆ ಮುಂದೂಡಿಕೆ

**ಚಾಮರಾಜನಗರ:** ಯಳಂದೂರು ತಾಲೂಕಿನ ಗುಂಬಳ್ಳಿ ಗ್ರಾ.ಪಂ. ಅಧ್ಯಕ್ಷರ ಹುದ್ದೆಗೆ ಜನವರಿ 2ರಂದು ನಿಗದಿಯಾಗಿದ್ದ ಚುನಾವಣೆಯನ್ನು ಮುಂದೂಡಲಾಗಿದೆ. ಗುಂಬಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರ ಹುದ್ದೆಗೆ ಚುನಾವಣೆ ನಡೆಸಲು ಜಿಲ್ಲಾಧಿಕಾರಿಗಳ ಕಚೇರಿಯಿಂದ ಡಿ.12ರಂದು ಗೊತ್ತುಪಡಿಸಿದ ಅಧಿಕಾರಿಯನ್ನು ನೇಮಕ ಮಾಡಲಾಗಿತ್ತು. ಸದರಿ ಅಧಿಕಾರಿಯವರು ಗ್ರಾಮಪಂಚಾಯಿತಿ ಅಧ್ಯಕ್ಷರ ಹುದ್ದೆಗೆ ಚುನಾವಣೆ ನಡೆಸಲು ಜನವರಿ 2ರಂದು ಸಭೆ ನಿಗದಿ ಮಾಡಿದ್ದರು. ಆದರೆ ಸದರಿ ಗಾ.ಪಂ.ಅಧ್ಯಕ್ಷರ ಚುನಾವಣೆ ಸಂಬಂಧ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ =ಪಿಟಿಶನ್ ಸಂಖ್ಯೆ 31105/2024ರಂತೆ ಪ್ರಕರಣ ದಾಖಲಾಗಿರುವುದರಿಂದ ಕರ್ನಾಟಕ ಉಚ್ಚ ನ್ಯಾಯಾಲಯದ ಅಡ್ವಕೇಟ್ ಜನರಲ್ ರವರಿಗೆ ನಿರ್ದೇಶನ ಕೋರಿ ಪತ್ರ ಬರೆಯಲಾಗಿದೆ. ಈ ಹಿನ್ನೆಲೆಯಲ್ಲಿ ಗಾ.ಪಂ.ಅಧ್ಯಕ್ಷರ ಚುನಾವಣೆಯನ್ನು ಮುಂದೂಡಲಾಗಿದ್ದು ಅಡ್ವಕೇಟ್ ಜನರಲ್ ಅವರ ನಿರ್ದೇಶನದ ಅನುಸಾರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದೆಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ತಿಳಿಸಿದ್ದಾರೆ.

# ಉತ್ತರ ಭಾರತದಾದ್ಯಂತ ದಟ್ಟ ಮಂಜು ವಿಮಾನಯಾನ, ರೈಲು ಸಂಚಾರಕ್ಕೆ ತೊಂದರೆ

**ನವದೆಹಲಿ:** ದೇಶದಾದ್ಯಂತ ಚಳಿಗಾಲ ಉತ್ತುಂಗದಲ್ಲಿದೆ. ದೆಹಲಿ, ಜಾರ್ಖಂಡ್ ಮತ್ತು ಉತ್ತರ ಪ್ರದೇಶ ರಾಜ್ಯಗಳಲ್ಲಿ ತೀವ್ರ ಚಳಿ ಜನಜೀವನದ ಮೇಲೆ ಪರಿಣಾಮ ಬೀರಿದೆ. ಪ್ರಸ್ತುತ ನಗರ ಚಳಿಗಾಲದ ಜೊತೆಗೆ ದಟ್ಟವಾದ ಮಂಜಿನ ಹೊದಿಕೆಯಲ್ಲಿ ಮರೆಯಾಗಿವೆ. ಪ್ರತಿ ವರ್ಷ ಚಳಿಗಾಲದಲ್ಲಿ ಮಂಜು ಸಾಮಾನ್ಯವಾಗಿದ್ದರೂ ಈ ಬಾರಿ ಜನವರಿ ಆರಂಭದಲ್ಲಿ ಮಂಜು ಹೆಚ್ಚಾಗಿದೆ. ದಟ್ಟವಾದ ಮಂಜಿನಿಂದಾಗಿ ಗೋಚರತೆ ಗಮನಾರ್ಹವಾಗಿ ಕಡಿಮೆಯಾಗಿದೆ. ಶೀತಗಾಳಿ ಮತ್ತು ತಾಪಮಾನ ಕುಸಿತದಿಂದ ಜನರ ಸಮಸ್ಯೆಗಳು ಹೆಚ್ಚಿವೆ. ದಟ್ಟವಾದ ಮಂಜು ವಾಹನ, ವಿಮಾನ ಹಾಗೂ ರೈಲುಗಳ ಸಂಚಾರಕ್ಕೆ ತೊಂದರೆಯನ್ನುಂಟು ಮಾಡಿದೆ.

ಜನವರಿ 8ರವರೆಗೆ ದೆಹಲಿಯಲ್ಲಿ ಇದೇ ವಾತಾವರಣ ಮುಂದುವರೆಯುವ ಸಾಧ್ಯತೆ ಇದ್ದು, ಜನವರಿ 6ರಂದು ಮಳೆಯಾಗುವ ಸಾಧ್ಯತೆ ಇದೆ. ಶುಕ್ರವಾರ ಬೆಳಗಿನ ತನಕ ದೆಹಲಿಯ ತಾಪಮಾನ 9.6 ಡಿಗ್ರಿ ಸೆಲ್ಸಿಯಸ್ ಇತ್ತು, ರಾಷ್ಟ್ರ ರಾಜಧಾನಿಯಲ್ಲಿ ಸತತ ಐದನೇ ದಿನವೂ ಇದೇ ತಾಪಮಾನ ಮುಂದುವರೆದಿದೆ. ತೀವ್ರ ಚಳಿಯ ನಡುವೆ ಶುಕ್ರವಾರ ದಟ್ಟವಾದ ಮಂಜು ಕವಿದಿದ್ದು ವಾಹನ ಸಂಚಾರಕ್ಕೆ ಅಡ್ಡಿಯನ್ನುಂಟು ಮಾಡಿದೆ. ಉತ್ತರ ಭಾರತದ ಹಲವು ಭಾಗಗಳಲ್ಲಿ ದಟ್ಟವಾದ ಮಂಜು ಕಾಣಿಸಿಕೊಂಡಿದೆ. ಇದರಿಂದ ಗೋಚರತೆ ಕ್ಷೀಣಿಸಿ ರೈಲು ಮತ್ತು ವಿಮಾನ ಕಾರ್ಯಾಚರಣೆಗೆ ತೊಂದರೆಯಾಗಿದೆ. ಕಳೆದ 24 ಗಂಟೆಗಳಲ್ಲಿ ದೆಹಲಿಯಲ್ಲಿ ಗರಿಷ್ಠ ತಾಪಮಾನ 16 ಡಿಗ್ರಿ ಸೆಲ್ಸಿಯಸ್ ದಾಖಲಾಗಿತ್ತು ಇದು ಸಾಮಾನ್ಯಕ್ಕಿಂತ ಮೂರು ಡಿಗ್ರಿ ಕಡಿಮೆಯಾಗಿದೆ. ಅದೇ ರೀತಿ ಕನಿಷ್ಠ ತಾಪಮಾನ 7.6 ಡಿಗ್ರಿ ಸೆಲ್ಸಿಯಸ್ ಇತ್ತು.



ದಟ್ಟವಾದ ಮಂಜಿನಿಂದಾಗಿ ದೆಹಲಿ ವಿಮಾನ ನಿಲ್ದಾಣಕ್ಕೆ ಆಗಮಿಸುವ ವಿಮಾನಗಳಿಗೆ ಸರಾಸರಿ ಐದು ನಿಮಿಷಗಳು ಮತ್ತು ನಿರ್ಗಮಿಸುವ ವಿಮಾನಗಳಿಗೆ 11 ನಿಮಿಷಗಳ ವಿಳಂಬವಾಗುತ್ತಿದೆ.

ರಾಜಸ್ಥಾನದ ಕೋಟಾ, ಬುಂದಿ, ಸಿಕರ್, ಜುಂಜುನು, ಚುರು, ಶ್ರೀಗಂಗಾನಗರ ಮತ್ತು ಟೋಂಕ್, ಪಂಜಾಬ್ನ ಅಮೃತಸರ, ಗುರುದಾಸ್ಪುರ, ತರ್ನ್ ತರಣ್ ಮತ್ತು ಕಪುರ್ತಲಾ ಮತ್ತು ಹರಿಯಾಣದ ಕುರುಕ್ಷೇತ್ರ, ಅಂಬಾಲಾ ಮತ್ತು ಅಂಬಾಲಾದಲ್ಲಿ ದಟ್ಟವಾದ ಮಂಜು ಇರುತ್ತದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಎಚ್ಚರಿಸಿದೆ. ಯಮುನಾನಗರದಲ್ಲಿ ಹೆಚ್ಚು ಮಂಜು ಕವಿಯುವ ಎಚ್ಚರಿಕೆ ನೀಡಲಾಗಿದೆ.

ಹಿಮಾಚಲ ಪ್ರದೇಶ ಮತ್ತು ಲಡಾಖ್ನ ಕೆಲವು ಭಾಗಗಳಲ್ಲಿ ಲಘು ಮಳೆ ಮತ್ತು ಹಿಮಪಾತವಾಗುವ ಸಾಧ್ಯತೆಯಿದೆ. ಶೀತಗಾಳಿಯ ಹಿನ್ನೆಲೆಯಲ್ಲಿ ಗೌತಮ ಬುದ್ಧನಗರದ ಆಡಳಿತ ಮಂಡಳಿಯು ಮುಂದಿನ ಆದೇಶದವರೆಗೆ ಜಿಲ್ಲೆಯ ಎಲ್ಲ ಶಾಲೆಗಳಲ್ಲಿ 8ನೇ ತರಗತಿಯವರೆಗಿನ ತರಗತಿಗಳನ್ನು ಮುಂದೂಡಲು ಆದೇಶಿಸಿದೆ. ಉತ್ತರ ರೈಲ್ವೆಯಿಂದ ಬಂದಿರುವ ಮಾಹಿತಿ ಪ್ರಕಾರ ಚಳಿ ಮತ್ತು ಮಂಜಿನಿಂದಾಗಿ ಗೋಚರತೆ ಕಡಿಮೆಯಾದ ಬೆನ್ನಲ್ಲೆ ಸುಮಾರು 43 ರೈಲುಗಳು ದೆಹಲಿಗೆ ಬಂದು ಹೋಗುವುದು ತಡವಾಗಿದೆ. ಇಲ್ಲಿಯವರೆಗೆ ಮೂರು ರೈಲುಗಳ ಸಮಯವನ್ನು ಬದಲಾಯಿಸಲಾಗಿದೆ. ರೈಲಿನ ಓಡಾಟದ ಸ್ಥಿತಿಯನ್ನು ಪರಿಶೀಲಿಸಿದ ನಂತರವೇ ಪ್ರಯಾಣಿಕರು ಮನೆಯಿಂದ ಹೊರಹೋಗುವಂತೆ ರೈಲ್ವವಿಲಾಖೆ ಮನವಿ ಮಾಡಿದೆ.

# ದೆಹಲಿ ಗೆಲುವಿಗೆ ಬಿಜೆಪಿಯ ಮಹಾರಾಷ್ಟ್ರ ಪ್ಲಾನ್

**ನವದೆಹಲಿ:** ರಾಜ್ಯದ ವಿಧಾನಸಭಾ ಚುನಾವಣೆಗೆ ಇನ್ನು ಕೆಲವೇ ದಿನಗಳು ಬಾಕಿ ಉಳಿದಿದೆ. ಈ ಚುನಾವಣೆಯಲ್ಲಿ ಗೆಲುವು ಸಾಧಿಸುವುದಕ್ಕೆ ಬಿಜೆಪಿ ಮಹಾರಾಷ್ಟ್ರದಲ್ಲಿ ವರ್ಕ್ಔಟ್ ಆಗಿದ್ದ ಪ್ಲಾನ್ ಅನ್ನೇ ಇಲ್ಲಿಯೂ ಅನುಷ್ಠಾನಿಸಲು ಮುಂದಾಗಿದೆ.

ರಾಜ್ಯದಲ್ಲಿ ಆಮ್ ಆದ್ಮಿ ಪಾರ್ಟಿ ಕಳೆದ ಎರಡು ಅವಧಿಯಿಂದ ಅಧಿಕಾರದಲ್ಲಿ ಇದೆ. ಆದರೆ, ಈ ಬಾರಿ ಅಧಿಕಾರಕ್ಕೆ ಬರುವುದು ಎಎಪಿಗೆ ಸವಾಲಾಗಿದೆ. ಇದರ ನಡುವೆಯೇ ಎಎಪಿ ಹಾಗೂ ಕಾಂಗ್ರೆಸ್ ಪಕ್ಷಗಳಿಗೆ ಶಾಕ್ ಕೊಡುವುದಕ್ಕೆ ಆರ್ಎಸ್ಎಸ್ ಹಾಗೂ ಬಿಜೆಪಿ ನಿರ್ಧರಿಸಿವೆ. ಕಳೆದ ವರ್ಷ ನಡೆದ ವಿವಿಧ ರಾಜ್ಯಗಳ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯು ಭರ್ಜರಿ ಗೆಲುವು ದಾಖಲಿಸಿತ್ತು. ಮಹಾರಾಷ್ಟ್ರ ಹಾಗೂ ಹರಿಯಾಣದಲ್ಲಿ ಗೆಲುವು ಸಾಧಿಸುವ ಮೂಲಕ ಅಧಿಕಾರಕ್ಕೆ ಬರುವಲ್ಲಿ ಬಿಜೆಪಿ ಯಶಸ್ವಿಯಾಗಿತ್ತು. ಇದೀಗ ಇದೇ ಸೂತ್ರವನ್ನು ಇಲ್ಲೂ ಅಳವಡಿಸಿಕೊಳ್ಳಲು ಬಿಜೆಪಿ ಮುಂದಾಗಿದೆ. ಈ ಬಾರಿ ಎಎಪಿಗೆ ತೀವ್ರ ರಾಜಕೀಯ ಸಂಕಷ್ಟ ಇದನ್ನೇ



ಲಾಭವಾಗಿಸಿಕೊಳ್ಳಲು ಬಿಜೆಪಿ ಮಾಸ್ಟರ್ ಪ್ಲಾನ್ ಮಾಡಿಕೊಳ್ಳುತ್ತಿದೆ.

ಮಹಾರಾಷ್ಟ್ರದಲ್ಲಿ ಹಲವು ಗೊಂದಲ ಹಾಗೂ ಆಡಳಿತ ವಿರೋಧಿ ಅಲೆಗಳ ನಡುವೆಯೂ ಬಿಜೆಪಿಯ ಮಹಾಯುತಿ ಅಧಿಕಾರಕ್ಕೆ ಬರುವುದರಲ್ಲಿ ಯಶಸ್ವಿಯಾಗಿತ್ತು. ಮಹಾರಾಷ್ಟ್ರದಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಸರ್ಕಾರ ಅಧಿಕಾರಕ್ಕೆ ಬರುವಲ್ಲಿ ಆರ್ಎಸ್ಎಸ್ ಪಾತ್ರ ಪ್ರಮುಖವಾಗಿತ್ತು. ಸಣ್ಣ ಸಣ್ಣ ಸಭೆಗಳನ್ನು ನಡೆಸುವ ಮೂಲಕ ಬಿಜೆಪಿ ಪರ ಮತದಾರರಲ್ಲಿ ಒಲವು ಮೂಡುವಂತೆ ಮಾಡುವಲ್ಲಿ ಆರ್ಎಸ್ಎಸ್ ಯಶಸ್ವಿಯಾಗಿತ್ತು. ಇದೀಗ ಇದೇ ಸೂತ್ರವನ್ನು ಇಲ್ಲೂ ಅನುಸರಿಸಲಾಗುತ್ತಿದೆ.

ಈ ಬಾರಿಯ ಚುನಾವಣೆಯಲ್ಲಿ ಹಲವು ವಿಷಯಗಳು ಚರ್ಚೆಯಾಗುತ್ತಿವೆ. ಅವುಗಳಲ್ಲಿ ಮದ್ಯ ನೀತಿ ಹಗರಣ, ಸಿ.ಎಂ. ಸರ್ಕಾರಿ ನಿವಾಸ: ಶೀಶ್ ಮಹಲ್, ನೀರು ಪೂರೈಕೆ ಹಾಗೂ ಸ್ವಚ್ಛತೆ ಸಮಸ್ಯೆಗಳು, ಕೊಳೆಗೇರಿ ಪ್ರದೇಶಗಳ ಅವ್ಯವಸ್ಥೆ, ಅಕ್ರಮ ಬಾಂಗ್ಲಾದೇಶಿ ವಲಸಿಗರು ರಾಜ್ಯದಲ್ಲಿ ವಾಸವಿರುವುದು ಪ್ರಮುಖ ವಿಷಯಗಳಾಗಿವೆ.

ರಾಜ್ಯದಲ್ಲಿ ಒಟ್ಟು 70 ವಿಧಾನಸಭಾ ಕ್ಷೇತ್ರಗಳಿದ್ದು, 13,000 ಕ್ಕೂ ಹೆಚ್ಚು ಬೂತ್ಗಳಿವೆ. ಹೀಗಾಗಿ ಸಣ್ಣ ಸಣ್ಣ ಸಭೆಗಳನ್ನು ನಡೆಸಿ ಬಿಜೆಪಿಪರ ಮತದಾರರನ್ನು ಸೆಳೆಯುವ ತಂತ್ರವನ್ನು ಮಾಡಲಾಗಿದೆ. ಚುನಾವಣೆಗೂ ಮುಂಚೆ 50,000 ಕ್ಕೂ ಹೆಚ್ಚು ಸಣ್ಣ ಸಭೆಗಳನ್ನು ಆರ್ಎಸ್ಎಸ್ ಹಾಗೂ ಬಿಜೆಪಿ ಜಂಟಿಯಾಗಿ ನಡೆಸಲಿವೆ ಎಂದು ಹೇಳಲಾಗಿದೆ.

# ಭಾರತದಲ್ಲಿ ದಿನಾ 60 ಕೋ.ರೂ. ಸೈಬರ್ ವಂಚನೆ: ಫೀಲ್ಡ್‌ಗಿಳಿದ ಇಡಿ

**ನವದೆಹಲಿ:** ದೇಶದಾದ್ಯಂತ ಪ್ರತಿದಿನ ಸೈಬರ್ ಫ್ರಾಡ್ ನಡೆಯುತ್ತಿದೆ. ಈ ರೀತಿ ನಡೆಯುವ ಸೈಬರ್ ಫ್ರಾಡ್ನಲ್ಲಿ ಒಂದಲ್ಲ ಎರಡಲ್ಲ ಬರೋಬ್ಬರಿ 60 ಕೋಟಿ ರೂಪಾಯಿ ವಂಚನೆ ನಡೆಯುತ್ತಿದೆ. ಈ ರೀತಿಯ ಸೈಬರ್ ವಂಚನೆ ಕೇವಲ ವಾಟ್ಸಪ್, ಇನ್ಸಟಾಗ್ರಾಮ್ ಹಾಗೂ ಟೆಲಿಗ್ರಾಮ್ ಸೇರಿದಂತೆ ಸೋಷಿಯಲ್ ಮೀಡಿಯಾಗಳ ಮೂಲಕವೇ ನಡೆಯುತ್ತಿದೆ ಎಂದು ಕೇಂದ್ರ ಗೃಹ ಸಚಿವಾಲಯದ ಮೂಲಗಳು ಹೇಳಿವೆ. ಇದೀಗ ವಂಚನೆ ಪ್ರಕರಣಗಳ ತನಿಖೆಗೆ ಜಾರಿ ನಿರ್ದೇಶನಾಲಯವೇ ಮುಂದಾಗಿದೆ.

ದಕ್ಷಿಣ ಭಾರತದಲ್ಲಿ ಇತ್ತೀಚಿನ ದಿನಗಳಲ್ಲಿ ಸೈಬರ್ ಫ್ರಾಡ್ ಹೆಚ್ಚಾಗುತ್ತಿದೆ. ದಕ್ಷಿಣ ಭಾರತದಲ್ಲಿ ಸೈಬರ್ ಫ್ರಾಡ್ ಹೆಚ್ಚಾಗುವುದಕ್ಕೆ ಉತ್ತರ ಭಾರತದ ಕೆಲವು ಸೈಬರ್ ಫ್ರಾಡ್ಗಳು. ತಮಿಳುನಾಡಿನಲ್ಲಿ ಅತ್ಯಂತ ಹೆಚ್ಚು ಸೈಬರ್ ವಂಚನೆ ಪ್ರಕರಣಗಳು ದಾಖಲಾಗುತ್ತಿವೆ. ರಾಜ್ಯದಲ್ಲಿ ಬರೋಬ್ಬರಿ 1,000 ಸಾವಿರ ಕೋಟಿಗೂ ಹೆಚ್ಚು ಮೊತ್ತದ ಸೈಬರ್ ವಂಚನೆ ಪ್ರಕರಣಗಳು ನಡೆದಿದ್ದು, ಜಾರಿ ನಿರ್ದೇಶನಾಲಯವೇ ಇದರ ತನಿಖೆಯನ್ನು ನಡೆಸಲಿದೆ. ತಮಿಳುನಾಡಿನ ಸೈಬರ್ ವಂಚನೆಗೆ ಸಂಬಂಧಿಸಿದಂತೆ ಇಡಿ ಅಧಿಕಾರಿಗಳು ಪಶ್ಚಿಮ ಬಂಗಾಳದಲ್ಲಿ ಒಬ್ಬ ವ್ಯಕ್ತಿಯನ್ನು ಬಂಧಿಸಿದ್ದಾರೆ ಎಂದು ವರದಿಯಾಗಿದೆ.

ಇಡಿ ಅಧಿಕಾರಿಗಳು ಗುರುವಾರ ಪಶ್ಚಿಮ ಬಂಗಾಳದ ಪ್ರಮುಖ ಎಂಟು ಸ್ಥಳಗಳಲ್ಲಿ ಕಾರ್ಯಾಚರಣೆ ನಡೆಸಿದ್ದು, ಇದು ಭಾರೀ ಕುತೂಹಲಕ್ಕೆ ಕಾರಣವಾಗಿದೆ. ಕೋಲ್ಕತ್ತಾದ ಪಾರ್ಕ್ ಸ್ಟ್ರೀಟ್, ಸಾಲ್ಟ್ ಲೇಕ್ ಮತ್ತು ಬಾಗುವಿಹಾಟಿ ಸೇರಿದಂತೆ ಐದು ಸ್ಥಳಗಳಲ್ಲಿ ಕಾರ್ಯಾಚರಣೆ ನಡೆದಿದೆ. ಅಲ್ಲದೆ ಕೋಲ್ಕತ್ತಾದ ವಿವಿಧ ಜಿಲ್ಲೆಗಳಲ್ಲೂ ಏಕಕಾಲಕ್ಕೆ ದಾಳಿ ನಡೆಸಲಾಗಿದೆ. ದೇಶದ ಈಶಾನ್ಯ ಭಾಗದ ಕೆಲವು ಭಾಗಗಳಲ್ಲಿ ಸೈಬರ್ ವಂಚಕರು ನೆಲೆಸಿರುವ ಬಗ್ಗೆ ಮಾಹಿತಿ ಇದೆ ಎಂದು ಮೂಲಗಳು ತಿಳಿಸಿವೆ.

# ಇದೀಗ ದೇಶ ಆಳುವವರನ್ನೂ ಮಹಿಳೆಯರೇ ನಿರ್ಧರಿಸುತ್ತಿದ್ದಾರೆ!

**ನವದೆಹಲಿ:** ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರು ಯಾವುದರಲ್ಲೂ ಪುರುಷರಿಗೆ ಕಡಿಮೆ ಇಲ್ಲ ಎನ್ನುವಂತೆ ಸಾಧನೆ ಮಾಡುತ್ತಿದ್ದಾರೆ. ಇದೀಗ ಮತಚಲಾವಣೆಯಲ್ಲೂ ಮಹಿಳೆಯರ ಕೈ ಮೇಲಾಗುತ್ತಿದೆ, 2024ರ ಲೋಕಸಭಾ ಚುನಾವಣೆಯಲ್ಲೂ ದೇಶ ಆಳುವ ಸರ್ಕಾರ ಯಾವುದು ಎನ್ನುವುದನ್ನೂ ಕೂಡ ಮಹಿಳೆಯರೇ ನಿರ್ಧರಿಸಿದ್ದಾರೆ! ಚುನಾವಣಾ ಆಯೋಗ ಬಿಡುಗಡೆ ಮಾಡಿರುವ ಅಂಕಿ ಅಂಶಗಳು ಚುನಾವಣೆಯಲ್ಲಿ ಮಹಿಳಾ ಮತದಾರರ ಮತಗಳೇ ನಿರ್ಣಾಯಕವಾಗಿದ್ದವು ಎನ್ನುವ ಅಂಶ ಬಹಿರಂಗಪಡಿಸಿವೆ.

2019ರ ಲೋಕಸಭಾ ಚುನಾವಣೆಗಳಲ್ಲೂ ಪುರುಷರಿಗಿಂತ ಮಹಿಳಾ ಮತದಾರರ ಸಂಖ್ಯೆಯೇ ಹೆಚ್ಚಾಗಿತ್ತು. ಚುನಾವಣಾ ಆಯೋಗ ಇದೀಗ 2024ರ ಲೋಕಸಭಾ ಚುನಾವಣೆಯ ಅಂಕಿಅಂಶಗಳನ್ನು ಬಿಡುಗಡೆ ಮಾಡಿದೆ. ಈ ಚುನಾವಣೆಗಳಲ್ಲೂ ಹೆಚ್ಚು ಮತದಾನ ಮಹಿಳೆಯರಿಂದಲೇ ಆಗಿದೆ. ಇಪ್ಪತ್ತೆಂಟು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಪೈಕಿ 15ರಲ್ಲಿ ಪುರುಷರಿಗಿಂತ ಮಹಿಳಾ ಮತದಾನದ ಪ್ರಮಾಣ ಹೆಚ್ಚಾಗಿವೆ.

ಆದರೆ ಉಳಿದ ಕಡೆ ಪುರುಷ ಮತದಾರರು ಹೆಚ್ಚಾಗಿದ್ದಾರೆ. ಉಳಿದ ಕಡೆಗಳಲ್ಲಿ ಮಹಿಳಾ ಮತ್ತು ಪುರಷ ಮತದಾರರ ಸಂಖ್ಯೆಯಲ್ಲಿ ಹೆಚ್ಚಿನ ವ್ಯತ್ಯಾಸವಿಲ್ಲದೇ ಇದ್ದರೂ ಬಿಹಾರದಲ್ಲಿ ಮಾತ್ರ ಲಿಂಗ ವ್ಯತ್ಯಾಸದ ಪ್ರಮಾಣ ಹೆಚ್ಚಾಗಿದೆ. ಬಿಹಾರ ಹೊರತುಪಡಿಸಿ ಜಾರ್ಖಂಡ್ ಮತ್ತು ಉತ್ತರಾಖಂಡ್ ರಾಜ್ಯಗಳಲ್ಲಿ ಪುರುಷರಿಗಿಂತ ಮಹಿಳಾ ಮತದಾರರ ಸಂಖ್ಯೆ ಹೆಚ್ಚಾಗಿದೆ.

ಹೆಚ್ಚು ಮತದಾನವಾಗಿರುವ ರಾಜ್ಯಗಳಲ್ಲಿ ಅರುಣಾಚಲ ಪ್ರದೇಶ, ಮೇಘಾಲಯ, ಮಣಿಪುರ ಮತ್ತು ಪಶ್ಚಿಮ ಬಂಗಾಳದಲ್ಲಿ ಪುರುಷರಿಗಿಂತ ಮಹಿಳಾ ಮತದಾನದ ಪ್ರಮಾಣ ಹೆಚ್ಚಾಗಿದೆ. ಒಡಿಶಾ, ಕೇರಳ ಮತ್ತು ಹಿಮಾಚಲ ಪ್ರದೇಶದಲ್ಲಿ ಪುರುಷ ಮತ್ತು ಮಹಿಳಾ ಮತದಾರರ ಪ್ರಮಾಣದಲ್ಲಿ ಹೆಚ್ಚಿನ ವ್ಯತ್ಯಾಸವಾಗಿಲ್ಲ.

ಗುಜರಾತ್, ಮಹಾರಾಷ್ಟ್ರ, ಜಮ್ಮು ಮತ್ತು ಕಾಶ್ಮೀರ ಮತ್ತು ರಾಜಸ್ಥಾನಗಳಲ್ಲಿ ಪುರುಷರ ಮತದಾನ ಮಹಿಳೆಯರಿಗಿಂತ ಹೆಚ್ಚಾಗಿದೆ. ಹರಿಯಾಣ, ಮಧ್ಯಪ್ರದೇಶ, ತೆಲಂಗಾಣ, ಛತ್ತೀಸ್ಗಢ ಮತ್ತು ಕರ್ನಾಟಕದಲ್ಲಿ ಕೂಡ ಪುರುಷರ ಮತದಾನ ಪ್ರಮಾಣ ಹೆಚ್ಚಾಗಿದ್ದರೂ ಮಹಿಳಾ ಮತದಾರರ ಸಂಖ್ಯೆಗಿಂತ ದೊಡ್ಡ ಪ್ರಮಾಣದಲ್ಲೇನೂ ಹೆಚ್ಚಾಗಿಲ್ಲ.

ಬಿಹಾರದಲ್ಲಿ ಮಹಿಳೆಯರಿಗಿಂತ ಪುರುಷ ಮತದಾರರ ಸಂಖ್ಯೆ ಹೆಚ್ಚಾಗಿದ್ದರೂ, ಮತ ಚಲಾಯಿಸಿದವರಲ್ಲಿ ಪುರುಷರಿಗಿಂತ ಮಹಿಳೆಯರೇ ಹೆಚ್ಚಾಗಿದ್ದಾರೆ. ಜಾರ್ಖಂಡ್ ಮತ್ತು ಹಿಮಾಚಲ ಪ್ರದೇಶಗಳಲ್ಲಿ ಕೂಡ ಇದೇ ಪರಿಸ್ಥಿತಿ ಇದೆ. ತಮಿಳುನಾಡು, ಕೇರಳ ಮತ್ತು ಆಂಧ್ರಪ್ರದೇಶದಂತಹ ರಾಜ್ಯಗಳಲ್ಲಿ ಪುರುಷರಿಗಿಂತ ಮಹಿಳೆಯರೇ ಹೆಚ್ಚಿನ ಪ್ರಮಾಣದಲ್ಲಿ ಮತ ಚಲಾಯಿಸುವ ಅರ್ಹತೆ ಹೊಂದಿದ್ದಾರೆ ಮತ್ತು ಹೆಚ್ಚಾಗಿ ಮತ ಚಲಾಯಿಸಿದ್ದಾರೆ. ಆದರೆ ಗುಜರಾತ್ ಮತ್ತು ಮಧ್ಯಪ್ರದೇಶದಲ್ಲಿ ಮಹಿಳಾ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿದ್ದರೂ ಮತ ಚಲಾವಣೆಯಲ್ಲಿ ಮಹಿಳೆಯರಿಗಿಂತ ಪುರುಷರು ಮುಂದಿದ್ದಾರೆ.

# 'ಕವಚ 4.0': ಇದೀಗ ರೈಲುಪ್ರಯಾಣ ಹೆಚ್ಚು ಸುರಕ್ಷಿತ

**ನವದೆಹಲಿ:** ಜಗತ್ತಿನ ಅತ್ಯಂತ ವಿಶಾಲ ರೈಲು ಜಾಲಗಳಲ್ಲಿ ಒಂದಾಗಿರುವ ಭಾರತೀಯ ರೈಲ್ವೆ ಸುರಕ್ಷಿತ ಕಾರ್ಯಾಚರಣೆಗಾಗಿ ಸಂರಕ್ಷಣಾ ವ್ಯವಸ್ಥೆಯಾದ 'ಕವಚ' ವನ್ನು 2020ರಲ್ಲಿ ಅಳವಡಿಸಿತು. ಇದೀಗ ಹೊಸ ವರ್ಷದಲ್ಲಿ ಇಲಾಖೆಯು 'ಕವಚ 4.0' ಹೊಸ ಮಾದರಿ ಪರಿಚಯಿಸಲಿದೆ; ಹಳೆಯ ಕವಚ ಮಾದರಿ ಅಪ್ಗ್ರೇಡ್ ಆಗಲಿದೆ.

ಸುರಕ್ಷಿತ ರೈಲು ಕಾರ್ಯಾಚರಣೆಗೆ ಈ ಅತ್ಯಾಧುನಿಕ ಕವಚ ವ್ಯವಸ್ಥೆ ಅಗತ್ಯವಾಗಿದೆ. ಈ ವ್ಯವಸ್ಥೆಯನ್ನು ರೈಲು ಇಂಜಿನ್‌ನಲ್ಲಿ ಅಳವಡಿಸಲಾಗುತ್ತದೆ. 'ಕವಚ 4.0' ಸ್ವಯಂಚಾಲಿತ ರೈಲು ಸಂರಕ್ಷಣಾ ವ್ಯವಸ್ಥೆಯನ್ನು ದೇಶದ ಕೆಲವು ಪ್ರಮುಖ ಮಾರ್ಗಗಳಲ್ಲಿ ಓಡಾಡುವ ರೈಲುಗಳಿಗೆ ಅಳವಡಿಸಲು ನಿರ್ಧರಿಸಿದೆ. ಇದರಿಂದ ರೈಲುಗಳ ಕಾರ್ಯಾಚರಣೆ, ದಕ್ಷತೆ ಹೆಚ್ಚಲಿದೆ ಎಂಬ ರೈಲ್ವೆ ಇಲಾಖೆ ತಿಳಿಸಿದೆ.

ಸುಧಾರಿತ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯಾಗಿರುವ ಈ ಕವಚ ಅಪಘಾತ ತಡೆಗೆ, ಕಾರ್ಯಾಚರಣೆ ವೇಳೆ ಲೋಕೋ ಪೈಲಟ್ – ಮಾನವ ದೋಷ – ದೋಷವನ್ನು ತಡೆಯಲು ಸಹಾಯ ಮಾಡುತ್ತದೆ. ಸುರಕ್ಷಿತ ರೈಲು ಡೆರಹಿತ ರೈಲು ಕಾರ್ಯಾಚರಣೆಗಳನ್ನು ಖಚಿತಪಡಿಸಿಕೊಳ್ಳಲು ಗುರಿಯನ್ನು ಹೊಂದಿದೆ. ಅಧಿಕಾರಿಗಳ ಪ್ರಕಾರ, ಕವಚ್ನ ಹಿಂದಿನ ಆವೃತ್ತಿಗಳನ್ನು ಹೊಂದಿರುವ ಎಲ್ಲಾ ಇಂಜಿನ್ಗಳನ್ನು ಕವಚ 4.0 ಗೆ ಅಪ್ಗ್ರೇಡ್ ಮಾಡಲಾಗುತ್ತದೆ.

ಈ ಹೊಸ ಕವಚ 4.0 ವ್ಯವಸ್ಥೆ ಅಳವಡಿಕೆಗೆ ಮಾಲ್ಡಾ ಟೌನ್ನಿಂದ ದಿಬ್ರುಗಢದವರೆಗೆ ಸುಮಾರು 1,966 ಕಿಲೋ ಮೀಟರ್ ಮಾರ್ಗದಲ್ಲಿ ಚಲಿಸುವ ರೈಲುಗಳಿಗೆ ಅಳವಡಿಸಲು ತೀರ್ಮಾನಿಸಲಾಗಿದೆ. ರೈಲ್ವೆ ಕಾರ್ಯಾಚರಣೆ ಸುಧಾರಣೆಗೊಳ್ಳಲಿದೆ. ಸುರಕ್ಷತೆಯಲ್ಲಿ ಮತ್ತಷ್ಟು ನಿಖರತೆ ಕಂಡುಕೊಂಡಂತಾಗಲಿದೆ. ಈ ಕುರಿತು ರೈಲ್ವೆ ಇಲಾಖೆ ಅಧಿಕಾರಿಗಳು ಅತೀವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ರೈಲ್ವೆ ಇಲಾಖೆ ಕವೇಲ ಕವಚ 4.0 ಮಾತ್ರವಲ್ಲದೇ ವಿವಿಧ ಸುಧಾರಿತ ವ್ಯವಸ್ಥೆಗಳನ್ನು ಪರಿಚಯಿಸುತ್ತಿದೆ. ಎಂಜಿನ್ನಲ್ಲಿ ಅತ್ಯಾಧುನಿಕ ವ್ಯವಸ್ಥೆ ಅಳವಡಿಕೆಯಿಂದ ಲೊಕೊಮೋಟಿವ್ ಡೇಟಾವನ್ನು ಸಿಗ್ನಲಿಂಗ್ ಸಿಸ್ಟಮ್ಗಳೊಂದಿಗೆ ಸಿಂಕ್ರೊನೈಸ್ ಮಾಡಲಿದೆ. ರೈಲುಗಳು ಸದ್ಯ ಎಲ್ಲಿವೆ, ರೈಲು ಸಂಚಾರದ ದಿಕ್ಕು, ಮೇಲ್ವಿಚಾರಣೆ ಮಾಡುತ್ತದೆ. ನಿಖರ ಮಾಹಿತಿ ನಿಲ್ದಾಣಗಳಿಗೆ ಒದಗಿಸುತ್ತದೆ.

ಒಟ್ಟಾರೆಯಾಗಿ ಭಾರತೀಯ ರೈಲ್ವೆಯಲ್ಲಿ ಕವಚ ಸಮಗ್ರ ಸುರಕ್ಷತೆ ಒದಗಿಸಲಿದೆ. ಪ್ರಯಾಣಿಕರಿಗೆ ಮತ್ತಷ್ಟು ಉತ್ತಮ ಸೇವೆ, ದಕ್ಷ ಕಾರ್ಯಾಚರಣೆ ನೀಡಲಿದೆ. ಭವಿಷ್ಯದಲ್ಲಿ ದೇಶದ ಎಲ್ಲ ರೈಲುಗಳಿಗೂ ಈ ಅತ್ಯಾಧುನಿಕ ವ್ಯವಸ್ಥೆ ಅಳವಡಿಕೆ ಆಗಬಹುದು ಎನ್ನಲಾಗಿದೆ.

# ಕಾಸಗಂಜ್ ಕೋಮು ಗಲಭೆ, ಕೊಲೆ ಪ್ರಕರಣ: 28 ಮಂದಿ ದೋಷಿ

ಲಕ್ನೋ(ಉ. ಪ್ರ.): ಕಾಸಗಂಜ್ನಲ್ಲಿ 2018ರಲ್ಲಿ ತಿರಂಗಾ ಯಾತ್ರೆ ವೇಳೆ ನಡೆದ ಕೋಮು ಘರ್ಷಣೆ ಹಾಗೂ ಚಂದನ್ ಗುಪ್ತಾ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್ಐಎ) ವಿಶೇಷ ನ್ಯಾಯಾಲಯ 28 ಮಂದಿಯನ್ನು ದೋಷಿಗಳೆಂದು ಘೋಷಿಸಿದೆ. ತಿರಂಗಾ ಯಾತ್ರೆ ವೇಳೆ ಚಂದನ್ ಗುಪ್ತಾ ಅವರನ್ನು ಗುಂಡಿಕ್ಕಿ ಹತ್ಯೆಗೈಯಲಾಗಿತ್ತು.

ಕೊಲೆ, ಕೊಲೆ ಯತ್ನ, ಗಲಭೆ ಮತ್ತು ರಾಷ್ಟ್ರಧ್ವಜಕ್ಕೆ ಅವಮಾನ ಮಾಡಿದ ಆರೋಪದಲ್ಲಿ ಶಿಕ್ಷೆ ವಿಧಿಸಲಾಗಿದೆ. ಅಪರಾಧಿಗಳಿಗೆ ಶಿಕ್ಷೆಯ ಪ್ರಮಾಣವನ್ನು ನಂತರ ಪ್ರಕಟಿಸಲಾಗುವುದು ಎಂದು ವಿಶೇಷ ನ್ಯಾಯಾಧೀಶ ವಿವೇಕಾನಂದ ಶರಣ್ ತ್ರಿಪಾಠಿ ತಿಳಿಸಿದ್ದಾರೆ. ಚಂದನ್ ಗುಪ್ತಾ ಅವರ ಸಾವಿನ ನಂತರ ಈ ಪ್ರದೇಶದಲ್ಲಿ ಕೋಮು ಗಲಭೆ ಭುಗಿಲೆದ್ದಿತ್ತು.

ಸಾಕ್ಷ್ಯಾಧಾರಗಳ ಕೊರತೆಯ ಹಿನ್ನೆಲೆಯಲ್ಲಿ ಇನ್ನಿಬ್ಬರು ಆರೋಪಿಗಳಾದ ನಾಸಿರುದ್ದೀನ್ ಮತ್ತು ಅಸಿಮ್ ಖುರೇಷಿ ಅವರನ್ನು ನಿರ್ದೋಷಿಗಳೆಂದು ಎನ್ಐಎ ನ್ಯಾಯಾಲಯ ತೀರ್ಪು ನೀಡಿದೆ.

ಜನವರಿ 26, 2018ರ ಬೆಳಿಗ್ಗೆ ನಡೆದ ತಿರಂಗಾ ಯಾತ್ರೆಯಲ್ಲಿ ಚಂದನ್ ಗುಪ್ತಾ ಮತ್ತು ಅವರ ಸಹೋದರ ವಿವೇಕ್ ಗುಪ್ತಾ ಭಾಗವಹಿಸಿದ್ದರು. ಮೆರವಣಿಗೆಯು ತಹಸಿಲ್ ರಸ್ತೆಯ ಸರ್ಕಾರಿ ಬಾಲಕಿಯರ ಇಂಟರ್ ಕಾಲೇಜು ಗೇಟ್ ಬಳಿ ತಲುಪಿದಾಗ ಸಲೀಂ, ವಾಸಿಮ್ ಮತ್ತು ನಸೀಮ್ ಸೇರಿದಂತೆ ಗಲಭೆಕೋರರ ಗುಂಪು ಮೆರವಣಿಗೆಯನ್ನು ತಡೆದಿತ್ತು ಎಂದು ಸರ್ಕಾರಿ ವಕೀಲರು ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

ಇದಕ್ಕೆ ಚಂದನ್ ಆಕ್ಷೇಪ ವ್ಯಕ್ತಪಡಿಸಿದಾಗ ಪರಿಸ್ಥಿತಿ ಉಲ್ಬಣಗೊಂಡು ಆರೋಪಿಗಳ ಕಡೆಯಿಂದ ಕಲ್ಲು ತೂರಾಟ ಆರಂಭವಾಯಿತು ಎಂದು ವಕೀಲರು ಹೇಳಿದ್ದಾರೆ. ಪ್ರಮುಖ ಆರೋಪಿಗಳಲ್ಲಿ ಒಬ್ಬನಾದ ಸಲೀಂ ಚಂದನ್ಗೆ ಗುಂಡು ಹಾರಿಸಿದ್ದು, ಆತ ಗಂಭೀರವಾಗಿ ಗಾಯಗೊಂಡಿದ್ದ. ನಂತರ ವಿವೇಕ್ ಮತ್ತು ಸಹಚರರು ಚಂದನ್ ಅವರನ್ನು ಕಾಸಗಂಜ್ ಪೊಲೀಸ್ ಠಾಣೆಗೆ ಸಾಗಿಸಿದ್ದರು. ಅಲ್ಲಿಂದ ಅವರನ್ನು ತಕ್ಷಣ ಜಿಲ್ಲಾ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು. ಆದರೆ ಆಸ್ಪತ್ರೆಗೆ ತಲುಪುವಷ್ಟರಲ್ಲಿ ಚಂದನ್ ನಿಧನರಾಗಿದ್ದರು.

ಚಂದನ್ ಅವರ ಹತ್ಯೆಯ ನಂತರ ಕಾಸಗಂಜ್ನಲ್ಲಿ ಮೂರು ದಿನಗಳ ಕಾಲ ವ್ಯಾಪಕ ಗಲಭೆ ನಡೆದಿದ್ದವು. ನಂತರ ಚಂದನ್ ತಂದೆ ಸುಶೀಲ್ ಗುಪ್ತಾ ಕೊಲೆ ದೂರು ದಾಖಲಿಸಿದ್ದರು. ಸೆಪ್ಟೆಂಬರ್ 2019ರಲ್ಲಿ, ಕಾಸಗಂಜ್ ಸೆಷನ್ಸ್ ನ್ಯಾಯಾಲಯವು 23 ವ್ಯಕ್ತಿಗಳ ವಿರುದ್ಧ ಆರೋಪಗಳನ್ನು ಹೊರಿಸಿತು. ನಂತರ, ನವೆಂಬರ್ 2019ರಲ್ಲಿ ಮತ್ತೆ ಏಳು ಜನರ ವಿರುದ್ಧ ಆರೋಪಗಳನ್ನು ಹೊರಿಸಲಾಗಿತ್ತು.

# 'ಬಂಡೀಪುರ–ವಯನಾಡ್ ನಡುವೆ ಸಂಚಾರಕ್ಕೆ ಯಾವುದೇ ತೊಡಕಿಲ್ಲ'



**ಬೆಂಗಳೂರು:** ಬಂಡೀಪುರ–ವಯನಾಡ್ ನಡುವೆ ಸಂಚಾರಕ್ಕೆ ಯಾವುದೇ ತೊಡಕಿಲ್ಲ ಎಂದು ಸಚಿವ ಈಶ್ವರ್ ಖಂಡ್ರೆ ಸ್ಪಷ್ಟಪಡಿಸಿದ್ದಾರೆ. ವಿಕಾಸಸೌಧದಲ್ಲಿ ಕರ್ನಾಟಕ ಮತ್ತು ಕೇರಳ ರಾಜ್ಯಗಳನ್ನು ಸಂಪರ್ಕಿಸುವ ಬಂಡೀಪುರ ಮತ್ತು ವಯನಾಡ್ ರಸ್ತೆಗಳ ನಡುವೆ ರಾತ್ರಿ ಸಂಚಾರದ ಕುರಿತ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ, "ಪ್ರಸ್ತುತ ರಾತ್ರಿ 9ರವರೆಗೆ ಸಂಚಾರಕ್ಕೆ ಅವಕಾಶ ನೀಡಲಾಗಿದೆ. ಇದರ ಹೊರತಾಗಿಯೂ ಎರಡೂ ಕಡೆಯಿಂದ 2 ಬಸ್ಗಳ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ. ವೈದ್ಯಕೀಯ ತುರ್ತು ಸಂದರ್ಭದಲ್ಲಿ ವಾಹನಗಳನ್ನು ಪರಿಶೀಲಿಸಿ ಬಿಡಲಾಗುತ್ತಿದೆ" ಎಂದಿದ್ದಾರೆ.

"ಅರಣ್ಯದೊಳಗೆ ಅಳವಡಿಸಲಾಗಿರುವ ವಿದ್ಯುತ್ ತಂತಿಗಳು ಕೆಲವೆಡೆ ಜೋತು ಬಿದ್ದಿದ್ದು, ಆನೆಗಳು ಸಾವಿಗೀಡಾಗುತ್ತಿವೆ. ವಿದ್ಯುತ್ ತಂತಿ ತೂಗಾಡದಂತೆ ಕ್ರಮ ವಹಿಸಲು ಮತ್ತು ಅಂತರ್ಗತ ಕೇಬಲ್ ಅಳವಡಿಸಿಲು ವಿದ್ಯುತ್ ಕಂಪನಿಗಳಿಗೆ ತಿಳಿಸಲಾಗಿದೆ" ಎಂದು ಹೇಳಿದರು. "ಆನೆಗಳಿಂದ ಬೆಳೆಹಾನಿ ಮತ್ತು ಜೀವಹಾನಿ ಆಗುತ್ತಿದ್ದು, ಇದನ್ನು ತಪ್ಪಿಸಲು ಭದ್ರಾ ಅಭಯಾರಣ್ಯದಲ್ಲಿ ಆನೆಗಳ ವಿಹಾರಧಾಮ (ಎಲಿಫೆಂಟ್ ಸಾಫ್ಟ್ ರಿಲೀಸ್ ಸೆಂಟರ್) ನಿರ್ಮಿಸಲು ಯೋಜನೆ ರೂಪಿಸಲಾಗತ್ತಿದೆ.

ಇದಕ್ಕೆ 100 ಕೋಟಿ ರೂ. ಅಗತ್ಯವಿದ್ದು, ಬಜೆಟ್ನಲ್ಲಿ ಅನುದಾನ ನೀಡುವಂತೆ ಹಣಕಾಸು ಸಚಿವರೂ ಆದ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗುವುದು" ಎಂದು ತಿಳಿಸಿದರು.

"ರಾಜ್ಯದ ರಾಷ್ಟ್ರೀಯ ಉದ್ಯಾನ, ವನ್ಯಜೀವಿ ಅಭಯಾರಣ್ಯ, ಮೀಸಲು ಅರಣ್ಯ, ಹುಲಿ ಸಂರಕ್ಷಿತ ಅರಣ್ಯ ಸೇರಿದಂತೆ ವಿವಿಧ ಅರಣ್ಯಗಳಲ್ಲಿ ಹಲವಾರು ವರ್ಷಗಳಿಂದ ಅರಣ್ಯವಾಸಿಗಳು ಜೀವಿಸುತ್ತಿದ್ದು, ಗಂಡ, ಹೆಂಡತಿ ಒಳಗೊಂಡು ಪ್ರತೀ ಕುಟುಂಬಕ್ಕೆ 15 ಲಕ್ಷ ರೂ. ಪರಿಹಾರ ನೀಡಿ ಹಂತ ಹಂತವಾಗಿ ಸ್ಥಳಾಂತರಿಸಲಾಗುವುದು" ಎಂದು ಭರವಸೆ ನೀಡಿದರು.

"ಪರಿಹಾರಾತ್ಮಕ ಅರಣ್ಯೀಕರಣ ನಿಧಿ ನಿರ್ವಹಣೆ ಮತ್ತು ಯೋಜನಾ ಪ್ರಾಧಿಕಾರ (ಕ್ಯಾಂಪಾ) ರಾಜ್ಯಗಳಿಂದ ಸಂಗ್ರಹವಾದ ಹಣವನ್ನು ಬಿಡುಗಡೆ ಮಾಡಲು ಮೀನಮೇಷ ಎಣಿಸುತ್ತಿದ್ದು, ದಕ್ಷಿಣ ರಾಜ್ಯಗಳ ಅರಣ್ಯ ಸಚಿವರ ನಿಯೋಗವನ್ನು ಕೇಂದ್ರಕ್ಕೆ ತೆಗೆದುಕೊಂಡು ಹೋಗುತ್ತೇವೆ" ಎಂದು ತಿಳಿಸಿದರು.

"ವನ್ಯಜೀವಿಗಳು ಕಾಡಿನಿಂದ ಹೊರಬರುತ್ತಿದ್ದು, ಅವು ವಿದ್ಯುತ್ ಸ್ಪರ್ಶದಿಂದ ಸಾವಿಗೀಡಾಗುತ್ತಿವೆ, ಮಾನವ –ವನ್ಯಜೀವಿ ಸಂಘರ್ಷ ಹೆಚ್ಚಾಗುತ್ತಿದೆ. ರೈಲ್ವೆ ಬ್ಯಾರಿಕೇಡ್ ಅಳವಡಿಸಲು, ಕಾರಿಡಾರ್ ನಿರ್ಮಿಸಲು ಕ್ಯಾಂಪಾದಲ್ಲಿರುವ ರಾಜ್ಯದ 1,400 ಕೋಟಿ ರೂ. ಹಣವನ್ನೇ ಬಿಡುಗಡೆ ಮಾಡುತ್ತಿಲ್ಲ. ಹೀಗಾಗಿ ಕೇಂದ್ರ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವರ ಬಳಿಗೆ ದಕ್ಷಿಣ ರಾಜ್ಯಗಳ ಅರಣ್ಯ ಸಚಿವರ ನಿಯೋಗ ತೆಗೆದುಕೊಂಡು ಹೋಗಲು ಇಂದಿನ ಸಭೆಯಲ್ಲಿ ಚರ್ಚಿಸಿದ್ದು, ಶೀಘ್ರವೇ ಎಲ್ಲ ಸಚಿವರಿಗೂ ಪತ್ರ ಬರೆಯಲಾಗುವುದು" ಎಂದರು.

"ಆಗಸ್ಟ್ 12ರಂದು ಬೆಂಗಳೂರಿನಲ್ಲಿ ನಡೆದ ಮಾನವ–ಆನೆ ಸಂಘರ್ಷ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನದ ಸಂದರ್ಭದಲ್ಲಿ ತಮಿಳುನಾಡು, ಆಂಧ್ರ ಪ್ರದೇಶ, ತೆಲಂಗಾಣ, ಕೇರಳ, ಜಾರ್ಖಂಡ್ ರಾಜ್ಯದ ಸಚಿವರು ಕೂಡ ಕೇಂದ್ರಕ್ಕೆ ನಿಯೋಗದಲ್ಲಿ ಆಗಮಿಸಲು ಸಮ್ಮತಿಸಿದ್ದರು" ಎಂದು ತಿಳಿಸಿದರು.

# ಅಜ್ಮೀರ್ ದರ್ಗಾಕ್ಕೆ ಚಾದರ್ ಕಳುಹಿಸಿದ ಮೋದಿ

**ನವದೆಹಲಿ:** ಅಜ್ಮೀರ್ ದರ್ಗಾದ ಖ್ವಾಜಾ ಮೊಯಿನುದ್ದೀನ್ ಚಿಸ್ತಿ ಅವರ ಉರುಸ್ ನಡೆಯುತ್ತಿರುವ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಶುಭಾಶಯ ತಿಳಿಸಿ, ಚಾದರ್ ಕಳುಹಿಸಿದ್ದಾರೆ. ಪ್ರಧಾನಿ ಪರವಾಗಿ ಕೇಂದ್ರ ಅಲ್ಪಸಂಖ್ಯಾತ ಖಾತೆ ಸಚಿವ ಕಿರಣ್ ರಿಜಿಜು ಅವರು ಚಾದರ್ ಅನ್ನು ಅಜ್ಮೀರದ ಶರೀಫ್ ದರ್ಗಾಕ್ಕೆ ಸಮರ್ಪಿಸಲಿದ್ದಾರೆ. ಅಜ್ಮೀರದ ಪ್ರಸಿದ್ಧ ಸೂಫಿ ಸಂತನಿಗೆ ಪ್ರಧಾನಿ ಮೋದಿ ಪ್ರತೀ ವರ್ಷ ಚಾದರ್ ಸಮರ್ಪಿಸುತ್ತಿದ್ದಾರೆ.

"ಖ್ವಾಜಾ ಮೊಯಿನುದ್ದೀನ್ ಚಿಸ್ತಿ ಅವರ ಉರುಸ್ ಶುಭಾಶಯಗಳು. ಈ ವಿಶೇಷ ಸಂದರ್ಭ ಪ್ರತಿಯೊಬ್ಬರ ಬಾಳಿನಲ್ಲಿ ಸಂತೋಷ ಮತ್ತು ನೆಮ್ಮದಿ ತರಲಿ" ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಹಾರೈಸಿದ್ದಾರೆ. ಪ್ರಧಾನಿ ಮೋದಿ ಅವರು ಚಾದರ್ ಅನ್ನು ಸಚಿವ ರಿಜಿಜು ಅವರಿಗೆ ನೀಡುತ್ತಿರುವ ಫೋಟೊವನ್ನು ಸಚಿವರು ತಮ್ಮ ಎಕ್ಸ್ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

"ಭಾರತದ ಶ್ರೀಮಂತ ಆಧ್ಯಾತ್ಮಿಕ ಪರಂಪರೆ ಮತ್ತು ಸಾಮರಸ್ಯ ಮತ್ತು ಸಹಾನುಭೂತಿಯ ಸಂದೇಶ ಹಾಗೂ ಗೌರವವನ್ನು ಈ ನಡವಳಿಕೆ ಪ್ರತಿಬಿಂಬಿಸುತ್ತದೆ" ಎಂದು ಬರೆದುಕೊಂಡಿದ್ದಾರೆ.

ಸೂಫಿ ಸಂತರು ನಿಧನ ಹೊಂದಿದ ದಿನ ಪ್ರತೀ ವರ್ಷ ಉರುಸ್ ಆಚರಿಸಲಾಗುತ್ತದೆ. ಇತ್ತೀಚೆಗೆ ಸೂಫಿ ಸಂತರ ಈ ದರ್ಗಾದಲ್ಲಿ ಮೊದಲು ದೇಗುಲವಿತ್ತು. ಅದರ ಮೇಲೆ ದರ್ಗಾ ನಿರ್ಮಾಣ ಮಾಡಲಾಗಿದೆ ಎಂದು ಆರೋಪಿಸಿ ಹಿಂದೂ ಸಂಘಟನೆಯೊಂದು ಕೋರ್ಟ್ ಮೊರೆ ಹೋಗಿತ್ತು. ಈ ರೀತಿ ಅನೇಕ ಅರ್ಜಿಗಳು ದೇಶದ ವಿವಿಧೆಡೆಯಿಂದ ಸಲ್ಲಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಇದಕ್ಕೆ ಸುಪ್ರೀಂ ಕೋರ್ಟ್ ತಡೆ ನೀಡಿದೆ.

# ಬೆಂಗಳೂರು–ಮೈಸೂರು ಇನ್ಫ್ರಾ ಪ್ರೊಜೆಕ್ಟ್: ಮಹತ್ವದ ಸುಪ್ರೀಂ ತೀರ್ಪು

**ನವದೆಹಲಿ:** ಕಲ್ಯಾಣ ರಾಜ್ಯದಲ್ಲಿ ಅಭಿವೃದ್ಧಿಗಾಗಿ ವಶಪಡಿಸಿಕೊಳ್ಳುವ ಭೂಮಿಗೆ ಸೂಕ್ತ ಪರಿಹಾರ ನೀಡದೆ, ವ್ಯಕ್ತಿಯೊಬ್ಬನ ಆಸ್ತಿಯನ್ನು ಯಾರೂ ವಶಪಡಿಸಿಕೊಳ್ಳುವಂತಿಲ್ಲ' ಎಂದು ಸುಪ್ರೀಂಕೋರ್ಟ್ ಗುರುವಾರ ಹೇಳಿದೆ. ಬೆಂಗಳೂರು ಮತ್ತು ಮೈಸೂರು ನೈಸ್ ಕಾರಿಡಾರ್ಗೆ ಸಂಬಂಧಿಸಿದಂತೆ ಅಭಿವೃದ್ಧಿ ಕಾಮಗಾರಿಗಳಿಗೆ ವಶಪಡಿಸಿಕೊಂಡ ಭೂಮಿಗೆ ಕಳೆದ 22 ವರ್ಷಗಳಿಂದ ಸೂಕ್ತ ಪರಿಹಾರ ನೀಡಿಲ್ಲ ಎಂದು ಸಂತ್ರಸ್ತರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಬಿ.ಆರ್. ಗವಾಯಿ ಮತ್ತು ಕೆ.ವಿ. ವಿಶ್ವನಾಥನ್ ಅವರ ಪೀಠವು ಈ ತೀರ್ಪು ನೀಡಿದೆ.

ಭೂಮಾಲೀಕರಾದ ಬರ್ನಾರ್ಡ್ ಫ್ರಾನ್ಸಿಸ್ ಜೋಸೆಫ್ ವಾಜ್ ಮತ್ತು ಇತರರಿಗೆ 22 ವರ್ಷ ಅಲೆದಾಡುವಂತೆ ಮಾಡಿದ ಅಧಿಕಾರಿಗಳ ಉದಾಸೀನತೆ ಮತ್ತು ಗಾಢ ನಿದ್ರೆ ಬಗ್ಗೆ ಸುಪ್ರೀಂಕೋರ್ಟ್ ಕಿಡಿಕಾರಿದ್ದು, ಕಾನೂನಿನ ಪ್ರಕಾರ ಸೂಕ್ತ ಪರಿಹಾರ ನೀಡದೇ ಯಾವುದೇ ವ್ಯಕ್ತಿಯ ಆಸ್ತಿಯನ್ನು ಕಸಿದುಕೊಳ್ಳುವಂತಿಲ್ಲ ಎಂದಿದೆ.

ಆಸ್ತಿಯು ಮೂಲಭೂತ ಹಕ್ಕು ಅಲ್ಲದಿದ್ದರೂ, ಸಂವಿಧಾನದ ವಿಧಿ 300–ಎ ಅಡಿಯಲ್ಲಿ ಆಸ್ತಿ ಹೊಂದುವ ಅವಕಾಶವಿದೆ. ಇದರ ಪ್ರಕಾರ, ಯಾವುದೇ ವ್ಯಕ್ತಿ ತನ್ನ ಆಸ್ತಿಯಿಂದ ವಂಚಿತರಾಗದಂತೆ ನೋಡಿಕೊಳ್ಳುತ್ತದೆ. ಇದು ಸಾಂವಿಧಾನಿಕ ಹಕ್ಕಾಗಿದೆ. ಹೀಗಾಗಿ ಒಬ್ಬ ವ್ಯಕ್ತಿಗೆ ಸೂಕ್ತ ಪರಿಹಾರವನ್ನು ನೀಡದೇ ಆತನ ಆಸ್ತಿಯನ್ನು ಪಡೆಯಲು ಸಾಧ್ಯವಿಲ್ಲ ಎಂದು ಪೀಠವು ತನ್ನ 57 ಪುಟಗಳ ತೀರ್ಪಿನಲ್ಲಿ ಹೇಳಿದೆ.

ಪ್ರಕರಣದಲ್ಲಿ, ಅರ್ಜಿದಾರರಿಗೆ ಪರಿಹಾರವನ್ನು ನೀಡದಿರಲು ಯಾವುದೇ ಕಾರಣಗಳಿಲ್ಲ. ಆದರೆ ರಾಜ್ಯ/ಕೆಐಎಡಿಬಿ ಅಧಿಕಾರಿಗಳ ನಿರಾಸಕ್ತಿ ಧೋರಣೆಯು ಭೂಮಿ ಕಳೆದುಕೊಂಡವರಿಗೆ ಅನ್ಯಾಯ ಮಾಡಿದಂತಾಗಿದೆ ಎಂದಿದೆ.

ಬೆಂಗಳೂರು–ಮೈಸೂರು ಸಂಪರ್ಕಿಸುವ ಮೂಲಸೌಕರ್ಯ ಕಾರಿಡಾರ್ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡ ಭೂಮಿ ಕುರಿತಂತೆ ಎರಡು ತಿಂಗಳ ಅವಧಿಯೊಳಗೆ ಹೊಸ ತೀರ್ಪು ನೀಡುವಂತೆ ವಿಶೇಷ ಭೂಸ್ವಾಧೀನ ಅಧಿಕಾರಿಗೆ ಸುಪ್ರೀಂ ಕೋರ್ಟ್ ಇದೇ ವೇಳೆ ಸೂಚಿಸಿದೆ.

2019 ರ ಏಪ್ರಿಲ್ 22ಕ್ಕೆ ಅನ್ವಯವಾಗುವಂತೆ ವಿವಾದಿತ ಭೂಮಿಯ ಮಾರುಕಟ್ಟೆ ಮೌಲ್ಯ ನಿರ್ಧರಿಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿತು. ಎರಡು ತಿಂಗಳಲ್ಲಿ ಪರಿಹಾರ ಮೊತ್ತವನ್ನು ಪಾವತಿ ಮಾಡುವಂತೆಯೂ ಹೇಳಿದೆ. ಜೊತೆಗೆ, ಕರ್ನಾಟಕ ಹೈಕೋರ್ಟ್ ವಿಭಾಗೀಯ ಪೀಠವು 2022 ರ ನವೆಂಬರ್ 22 ರಂದು ನೀಡಿದ್ದ ತೀರ್ಪನ್ನು ರದ್ದುಗೊಳಿಸಿತು.

## ಬಾಲಿವುಡ್‌ಗೆ ವಿದಾಯ!

ಪ್ರಸಿದ್ಧ ಚಿತ್ರ ನಿರ್ಮಾಪಕ ಅನುರಾಗ್ ಕಶ್ಯಪ್ ಇತ್ತೀಚಿನ ಸಂದರ್ಶನವೊಂದರಲ್ಲಿ ಬಾಲಿವುಡ್‌ನ ಬಗ್ಗೆ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ ಮತ್ತು ಅಲ್ಲಿನ ಜನರ ಮೇಲೆ ಹಲವು ಆರೋಪಗಳನ್ನು ಮಾಡಿದ್ದಾರೆ. ಇದರೊಂದಿಗೆ ಅವರು ಶೀಘ್ರದಲ್ಲೇ ಮುಂಬೈ ತೊರೆಯುವುದಾಗಿ ಬಹಿರಂಗಪಡಿಸಿದ್ದಾರೆ.


'ನಾನು ಅವರನ್ನು (ದಕ್ಷಿಣ ಚಿತ್ರ ನಿರ್ಮಾಪಕರು) ಅಸೂಯೆ ಪಡುತ್ತೇನೆ. ಈಗ ನನಗೆ ಹೊರಗೆ ಹೋಗಿ ಪ್ರಯೋಗ ಮಾಡುವುದು ಕಷ್ಟವಾಗಿದೆ ಏಕೆಂದರೆ ನೀವು ಅದರ ಬೆಲೆ ತೆರಬೇಕಾಗುತ್ತದೆ. ಆರಂಭದಿಂದಲೂ ನನ್ನ ನಿರ್ಮಾಪಕರು ಲಾಭ ಮತ್ತು ಅಂಚುಗಳ ಬಗ್ಗೆ ಯೋಚಿಸುತ್ತಾರೆ. ಚಿತ್ರ ಆರಂಭವಾಗುವ ಮೊದಲೇ, ಅದನ್ನು ಹೇಗೆ ಮಾರಾಟ ಮಾಡಬೇಕೆಂದು ನಿರ್ಧರಿಸುತ್ತಾರೆ.



ನಾನು ಹೇಳುತ್ತೇನೆ, ನೀವು ಚಿತ್ರ ಮಾಡಲು ಬಯಸುವುದಿಲ್ಲವೇ? ಹಾಗಾದರೆ ಮಾಡಬೇಡಿ. ಈ ಕಾರಣದಿಂದಾಗಿ ನಾನು ಈಗ ಚಿತ್ರಗಳನ್ನು ಮಾಡಲು ಸಾಧ್ಯವಿಲ್ಲ. ಆದ್ದರಿಂದ ನಾನು ಮುಂದಿನ ವರ್ಷ ಮುಂಬೈನಿಂದ ಹೊರಗೆ ಹೋಗಲು ಬಯಸುತ್ತೇನೆ. ನಾನು ದಕ್ಷಿಣಕ್ಕೆ ಹೋಗುತ್ತಿದ್ದೇನೆ. ಇಲ್ಲದಿದ್ದರೆ ನಾನು ಮುದುಕನಾಗಿ ಸಾಯುತ್ತೇನೆ. ನಾನು ನನ್ನ ಸ್ವಂತ ಉದ್ಯಮದಿಂದ ತುಂಬಾ ನಿರಾಶೆಗೊಂಡಿದ್ದೇನೆ ಮತ್ತು ಹತಾಶನಾಗಿದ್ದೇನೆ. ಅದರ ಮನಸ್ಥಿತಿಯಿಂದ ನನಗೆ ಅಸಹ್ಯವಾಗಿದೆ. ಈಗಾಗಲೇ ಕೆಲಸ ಮಾಡಿರುವುದನ್ನು ಮತ್ತೆ ಮಾಡುವುದು ಅವರ ಮನಸ್ಥಿತಿ. ಅವರು ಏನನ್ನೂ ಹೊಸದಾಗಿ ಮಾಡಲು ಪ್ರಯತ್ನಿಸುತ್ತಿಲ್ಲ.' ಬಾಲಿವುಡ್ 'ಪುಷ್ಪ' ರಂತಹ ಚಿತ್ರಗಳನ್ನು ಮಾಡಲು ಸಾಧ್ಯವಿಲ್ಲ: ಅನುರಾಗ್ ಹೇಳಿದರು, ಬಾಲಿವುಡ್ 'ಪುಷ್ಪ' ರಂತಹ ಹಣ ಗಳಿಸುವ ಚಿತ್ರವನ್ನು ಸಹ ಮಾಡಲು ಸಾಧ್ಯವಿಲ್ಲ. ಅನುರಾಗ್ ಹೇಳಿದರು, 'ಅವರು ಮಾಡಲು ಸಾಧ್ಯವಿಲ್ಲ ಏಕೆಂದರೆ ಅವರಿಗೆ ಚಿತ್ರ ಮಾಡಲು ಮಿದುಳಿಲ್ಲ. ಚಿತ್ರ ಮಾಡುವುದು ಎಂದರೆ ಏನೆಂದು ಅವರಿಗೆ ಅರ್ಥವಾಗುತ್ತಿಲ್ಲ. ಪುಷ್ಪವನ್ನು ಸುಕುಮಾರ್ ಮಾಡುತ್ತಾರೆ. ನೀವು ದಕ್ಷಿಣಕ್ಕೆ ಹೋದರೆ, ಅವರು ಚಿತ್ರ ನಿರ್ಮಾಪಕರಲ್ಲಿ ಹೂಡಿಕೆ ಮಾಡುತ್ತಾರೆ ಮತ್ತು ಅವರಿಗೆ ಚಿತ್ರ ಮಾಡಲು ಅಧಿಕಾರ ನೀಡುತ್ತಾರೆ. ಚಿತ್ರ ನಿರ್ಮಾಪಕರಿಗೆ ಅಧಿಕಾರ ನೀಡುವ ಅತ್ಯುತ್ತಮ ಮಿದುಳುಗಳಲ್ಲಿ ಒಬ್ಬರು ರಾಣಾ ದಗ್ಗುಬಾಟಿ ಅವರ ತಂದೆ ಸುರೇಶ್ ಬಾಬು. ಅವರು ಹಲವು ಮೊದಲ ಬಾರಿಗೆ ಚಿತ್ರ ನಿರ್ಮಾಪಕರಿಗೆ ಅವಕಾಶ ನೀಡಿದ್ದಾರೆ. ಅವರು ಬಹಳ ಬುದ್ಧಿವಂತಿಕೆಯಿಂದ ಮಾತನಾಡುತ್ತಾರೆ, ಆದರೆ ಹಿಂದಿ ಉದ್ಯಮದಲ್ಲಿ ಜನರು ಅವರ ಮಾತನ್ನು ಏಕೆ ಕೇಳುವುದಿಲ್ಲ ಎಂದು ನನಗೆ ತಿಳಿದಿಲ್ಲ.'

## ವಡಿವೇಲು ಮೇಲೆ ಕೆಂಡ ಕಾರಿದ ಕನ್ನಡತಿ!

ಕೆ.ಎಸ್. ರವಿಕುಮಾರ್ ನಿರ್ದೇಶನದ, ಸೂರ್ಯ ಮತ್ತು ನಯನತಾರಾ ಅಭಿನಯದ 'ಆದವನ್' ಚಿತ್ರ 2009ರಲ್ಲಿ ಬಿಡುಗಡೆಯಾಯಿತು. ಈ ಚಿತ್ರದಲ್ಲಿ ವಡಿವೇಲು ಹಾಸ್ಯನಟರಾಗಿ ನಟಿಸಿದ್ದರು. ಸರೋಜಾದೇವಿ, ರಾಹುಲ್ ದೇವ್, ಆನಂದ್ ಬಾಬು, ಸಾಯಾಜಿ ಶಿಂಧೆ, ಮುರಳಿ, ರಮೇಶ್ ಕನ್ನಾ, ಸತ್ಯನ್, ಮನೋಬಾಲ, ರಿಯಾಜ್ ಖಾನ್ ಮುಂತಾದವರು ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದರು. ಈ ಚಿತ್ರದಲ್ಲಿ ಸೂರ್ಯನಿಗೆ ಚಿಕ್ಕ ವಯಸ್ಸಿನ ಪಾತ್ರವನ್ನು ರಚಿಸಲಾಗಿತ್ತು. ಈ ಚಿತ್ರದಲ್ಲಿ ಸರೋಜಾದೇವಿ ನಯನತಾರಾ ಅವರ ಅಜ್ಜಿಯಾಗಿ ನಟಿಸಿದ್ದರು. ಹಲವು ವರ್ಷಗಳ ನಂತರ ಸಿನಿಮಾಕ್ಕೆ ಮರಳಿದ ಸರೋಜಾದೇವಿಗೆ ಈ ಚಿತ್ರ ಉತ್ತಮ ಪುನರಾಗಮನ ನೀಡಿತು. ಹ್ಯಾರಿಸ್ ಜಯರಾಜ್ ಸಂಗೀತದ ಈ ಚಿತ್ರದ ಎಲ್ಲಾ ಹಾಡುಗಳು ಉತ್ತಮ ಪ್ರತಿಕ್ರಿಯೆ ಪಡೆದರೂ, ಚಿತ್ರಕ್ಕೆ ಮಿಶ್ರ ಪ್ರತಿಕ್ರಿಯೆಗಳು ಬಂದವು. ಈ ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದ ರಮೇಶ್ ಕನ್ನಾ 'ಆದವನ್' ಚಿತ್ರಕ್ಕೆ ಕಥೆಗಾರರಾಗಿಯೂ ಕೆಲಸ ಮಾಡಿದ್ದರು. ಅವರು ವಡಿವೇಲುಗೆ ಬೇರೆ ಸಂಭಾಷಣೆ ಬರೆದುಕೊಟ್ಟಿದ್ದರು, ಆದರೆ ವಡಿವೇಲು ಅದನ್ನು ಸ್ವಲ್ಪ ಬದಲಾಯಿಸಿ



ಹೇಳಿದ್ದು ಸರೋಜಾದೇವಿ ಅವರ ಕೋಪಕ್ಕೆ ಕಾರಣವಾಯಿತು. ವಡಿವೇಲು ನಿರ್ದೇಶಕರು ಹೇಳಿಕೊಟ್ಟ ಸಂಭಾಷಣೆಗಿಂತ ತನಗೆ ತೋಚಿದ ಸಂಭಾಷಣೆಗಳನ್ನು ಹೇಳಿ ಪ್ರೇಕ್ಷಕರ ಮನಸ್ಸನ್ನು ಗೆದ್ದಿದ್ದಾರೆ. ಅವರು ಹೇಳಿದ ಹಲವು ಸಂಭಾಷಣೆಗಳು ಇಂದಿಗೂ ಮೀಮ್ಸ್ ಕ್ರಿಯೇಟರ್‌ಗಳಿಗೆ ಒಳ್ಳೆಯ ವಿಷಯವಾಗಿದೆ. ಆದವನ್ ಚಿತ್ರದಲ್ಲಿ 'ನೀನು ಹಾಗೆ ಮೇಲೆ ಹೋಗು... ಒಬ್ಬ ಅಮ್ಮ ತುಂಬ ಪೌಡರ್ ಹಚ್ಚಿಕೊಂಡು ಮಲಗಿರುತ್ತಾಳೆ' ಎಂಬ ಸಂಭಾಷಣೆಯನ್ನು ರಮೇಶ್ ಕನ್ನಾ ಬರೆದುಕೊಡದೆಯೇ ವಡಿವೇಲು ಹೇಳಿದ್ದಾರೆ. ಈ ಸಂಭಾಷಣೆಯಿಂದ ಕೋಪಗೊಂಡ ಸರೋಜಾದೇವಿ, ಕಥೆಗಾರ ರಮೇಶ್ ಕನ್ನಾಗೆ ಫೋನ್ ಮಾಡಿ, 'ನಾನು ನಿಮ್ಮ ಹತ್ತಿರ ನಟಿಸಲು ಅವಕಾಶ ಕೇಳಿದೆನಾ? ನೀವು ನನ್ನನ್ನು ಕರೆದಿದ್ದೀರಿ, ನನ್ನನ್ನು ನಟಿಸಲು ಹೇಳಿ ಹೀಗೆಲ್ಲಾ ಸಂಭಾಷಣೆ ಹೇಳಿಸುತ್ತೀರ' ಎಂದು ಕೋಪದಿಂದ ಕೇಳಿದ್ದಾರೆ. ಅದಕ್ಕೆ ರಮೇಶ್ ಕನ್ನಾ, 'ಅವನು ಹುಚ್ಚನಂತೆ ಮಾತಾಡಿದ್ದಾನೆ, ಅದನ್ನು ದೊಡ್ಡದು ಮಾಡಬೇಡಿ. ಅದರಲ್ಲಿ ತಪ್ಪೇನಿಲ್ಲ' ಎಂದು ಕೇಳಿದ್ದಾರೆ. ಅದಕ್ಕೆ ಸರೋಜಾದೇವಿ, 'ನಾನು ಮನೋರಮಾ ರೀತಿ ಹಾಸ್ಯನಟಿಯೇ? ನಾನು ನಾಯಕಿ' ಎಂದೆಲ್ಲಾ ಹೇಳಿದ್ದಾರಂತೆ. ನಂತರ ಆ ಸಮಸ್ಯೆ ಹೇಗೋ ಬಗೆಹರಿದಿದೆ ಎಂದು ತಿಳಿಸಿದ್ದಾರೆ. ಈ ಮಾಹಿತಿ ಈಗ ವೈರಲ್ ಆಗುತ್ತಿದೆ. ಈಗ 86 ವರ್ಷ ವಯಸ್ಸಿನ ಸರೋಜಾದೇವಿ ವಯಸ್ಸಾದ ಕಾರಣ ಚಿತ್ರರಂಗದಿಂದ ದೂರವಿದ್ದರೂ, ತಮಿಳು ಪ್ರೇಕ್ಷಕರಲ್ಲಿ 'ಕನ್ನಡದ ಬೆಡಗಿ' ಎಂದು ಹೆಸರುವಾಸಿಯಾಗಿದ್ದಾರೆ. 1955 ರಲ್ಲಿ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದ ಸರೋಜಾದೇವಿ, 1956ರಲ್ಲಿ ಬಿಡುಗಡೆಯಾದ 'ತಿರುಮಣಂ' ಚಿತ್ರದ ಮೂಲಕ ತಮಿಳಿನಲ್ಲಿ ನಾಯಕಿಯಾಗಿ ನಟಿಸಿದರು. ಎಂಜಿಆರ್ ಜೊತೆ ನಟಿಸಿದ 'ನಾಡೋಡಿ ಮನ್ನನ್' ಚಿತ್ರ ತಮಿಳು ಚಿತ್ರರಂಗದಲ್ಲಿ ಅವರಿಗೆ ದೊಡ್ಡ ತಿರುವು ನೀಡಿತು. 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿರುವ ಸರೋಜಾದೇವಿ, ಪದ್ಮಭೂಷಣ, ಪದ್ಮಶ್ರೀ ಮುಂತಾದ ಪ್ರಶಸ್ತಿಗಳನ್ನು ಪಡೆದಿದ್ದಾರೆ.

# ಆರ್‌ಜಿ ರೆಸಲ್ಯೂಷನ್ ಕೇಳಿ ಸಿನಿ ಇಂಡಸ್ಟ್ರಿ ಶಾಕ್!

ರಾಮ್ ಗೋಪಾಲ್ ವರ್ಮಾ ಒಂದು ಕಾಲದಲ್ಲಿ ಸೆನ್ಸೇಷನಲ್ ಡೈರೆಕ್ಟರ್ ಎಂದು ಹೆಸರಾಗಿದ್ದರು. ಶಿವ, ಸರ್ಕಾರ್, ಕ್ಷಣಸಾಕ್ಷಂ, ಮುಂತಾದ ಸಿನಿಮಾಗಳಿಂದ ಅವರು ಸೃಷ್ಟಿಸಿದ ಸಂಚಲನ ಅಷ್ಟಿಷ್ಟಲ್ಲ. ತೆಲುಗು ಮತ್ತು ಬಾಲಿವುಡ್ ಎರಡರಲ್ಲೂ ಟ್ರೆಂಡ್ ಸೆಟ್ಟರ್ ಆದರು.

ಎಸ್.ಎಸ್.ರಾಜಮೌಳಿಯಂತಹ ನಿರ್ದೇಶಕರೂ ವರ್ಮಾ ಅವರ ಸಾಮರ್ಥ್ಯದ ಬಗ್ಗೆ ಹಾಡಿ ಕೊಂಡಾಡುತ್ತಿದ್ದರು. ಆದರೆ ಸದ್ಯ ರಾಮ್ ಗೋಪಾಲ ವರ್ಮಾ ಸದ್ಯ ವಿವಾದಗಳಿಂದಲೇ ಸುತ್ತುವರೆಯುತ್ತಿದ್ದಾರೆ. ಅವರ ಕ್ರೇಜ್ ಕಡಿಮೆಯಾಗುತ್ತಿದೆ. ಅವರ ಪೋಸ್ಟ್‌ಗಳು ಮತ್ತು ಅವರು ಮಾಡುತ್ತಿರುವ ಚಿತ್ರಗಳು ವಿವಾದಗಳಾಗುತ್ತಿವೆ.

ಹೌದು. ಹಿಂದಿನ ವರ್ಮಾ ಈಗಿಲ್ಲ. ಈಗ ರಾಮ್ ಗೋಪಾಲ್ ವರ್ಮಾದಿಂದ ಬರುತ್ತಿರುವ ಚಿತ್ರಕ್ಕೆ ತಲೆಕೆಡಿಸಿಕೊಳ್ಳುವವರು ಕಡಿಮೆ. ವಿವಾದಾತ್ಮಕ ವಿಷಯಗಳನ್ನು ಇಟ್ಟುಕೊಂಡು ಸಿನಿಮಾ ಮಾಡುವುದಕ್ಕೂ ಇದೇ ಕಾರಣ.

ನಿರ್ದೇಶಕರಾಗಿ ಅವರ ಸಿನಿಮಾಗಳ ಗುಣಮಟ್ಟ



ಕಡಿಮೆಯಾಗುತ್ತಿದೆ. ರಾಮ್ ಗೋಪಾಲ್ ವರ್ಮಾ ಸಿನಿಮಾ ಈಗ ಗಲಾಟೆಯೇ ಹೊರತು ಬೇರೇನೂ ಅಲ್ಲ ಎಂಬ ಮಟ್ಟಿಗೆ ಅವರ ಚಿತ್ರಗಳು ವಿವಾದಕ್ಕೆ ಕಾರಣವಾಗುತ್ತಿವೆ.

1. ನಾನು ವಿವಾದರಹಿತನಾಗುತ್ತೇನೆ.
2. ಕುಟುಂಬದ ವ್ಯಕ್ತಿಯಾಗುತ್ತಾರೆ
3. ದೇವರಿಗೆ ಭಯಪಡುವವನಾಗುತ್ತೇನೆ
4. ಪ್ರತಿ ವರ್ಷ 10 ಸಿನಿಮಾ ಮಾಡುತ್ತೇನೆ
5. ಟ್ವೀಟ್ ಮಾಡುವುದನ್ನು ನಿಲ್ಲಿಸುತ್ತೇನೆ
6. ನಮಹಿಳೆಯರನ್ನು ನೋಡುವುದಿಲ್ಲ
7. ವೋಡ್ಕಾ ಸೇವಿಸುವುದನ್ನು ನಿಲ್ಲಿಸುತ್ತೇನೆ.

ಇಂತಿಪ್ಪ ರಾಮ್‌ಗೋಪಾಲ್ ವರ್ಮಾ ಅವರು, ಇದೀಗ ಹೊಸ ವರ್ಷದ ರೆಸಲ್ಯೂಷನ್ ಕೇಳಿ ಸಿನಿ ಇಂಡಸ್ಟ್ರಿಯೇ ಶಾಕ್ ಆಗಿದೆ.

ಇದಕ್ಕೆ ಮುಖ್ಯ ಕಾರಣ, ಮೊದಲನೆಯದ್ದು ರಾಮ್‌ಗೋಪಾಲ್ ವರ್ಮಾ ಎಂದ್ರೆ ವಿವಾದ ಎಂದು, ಇನ್ನೊಂದು ಇವರ ಹೆಸರಿನ ಆಸು ಪಾಸು ಸದಾ ಯಾವುದಾದರೂ ನಟಿಯರ ಇಲ್ಲವೇ ಹೆಣ್ಣುಮಕ್ಕಳ ಹೆಸರು ಥಳಕು ಹಾಕಿಕೊಂಡೇ ಇರುತ್ತದೆ. ಹೆಣ್ಣುಮಕ್ಕಳ ವಿಷಯದಲ್ಲಿ ಅಷ್ಟು ಫೇಮಸ್ ರಾಮಗೋಪಾಲ ವರ್ಮಾ ಅವರು. ಆದರೆ ಇದೀಗ ವಿಷಯಕ್ಕೆ ಸಂಬಂಧಿಸಿದಂತೆ ಅವರು ಹೊಸ ವರ್ಷದ ರೆಸಲ್ಯೂಷನ್ ಕೈಗೊಂಡಿದ್ದಾರೆ.

ಅವರು ಒಟ್ಟು ಏಳು ನಿರ್ಣಯಗಳನ್ನು ಕೈಗೊಂಡಿದ್ದು, ಈ ಏಳೂ ನಿರ್ಣಯಗಳು ಕೇಳಿ ಎಲ್ಲರೂ ಶಾಕ್ ಆಗುವ ಜೊತೆಗೆ ಬಿದ್ದೂ ಬಿದ್ದೂ ನಗುವಂತಾಗಿದೆ. ಇವುಗಳಲ್ಲಿ ಏಳನ್ನೂ ಕೂಡ ಅವರು ತಮಾಷೆಯಾಗಿ ಬರೆದಿರುವುದನ್ನು ನೋಡಬಹುದು.

ಏಕೆಂದರೆ ಈ ಏಳು ಮಾತುಗಳಿಂದಲೇ ಅವರು ಸದಾ ಸುದ್ದಿಯಲ್ಲಿ ಇರುವುದು ಜೊತೆಗೆ ವಿವಾದ ಸೃಷ್ಟಿಸುವುದು. ಅದರಲ್ಲಿಯೂ ಮದ್ಯ ಸೇವನೆ ಮತ್ತು ಹೆಣ್ಣು ಮಕ್ಕಳ ವಿಷಯದಲ್ಲಿ ಹಾಗೂ ವಿವಾದದಿಂದ ದೂರ ಇರುತ್ತೇನೆ ಎಂದು ಬರೆದಿರುವುದು ಮಾತ್ರ ಎಲ್ಲರನ್ನೂ ನಕ್ಕು ನಗಿಸುವಂತಿದೆ.

# ರಶ್ಮಿಕಾ ಮೇಲೆ ಯಾಕಿಷ್ಟು ಕೋಪ?



2016ರ ಡಿಸೆಂಬರ್ 30ಕ್ಕೆ ಸ್ಯಾಂಡಲ್‌ವುಡ್‌ನಲ್ಲಿ ಕಿರಿಕ್ ಪಾರ್ಟಿ ಅನ್ನೋ ಹೊಸತನದ ಸಿನಿಮಾ ಬಂದು ಹೊಸ ಅಲೆ ಎಬ್ಬಿಸಿತ್ತು. ಈ ಸಿನಿಮಾದಲ್ಲಿ ನಟಿಸಿದವರು ಈಗ ಪ್ಯಾನ್ ಇಂಡಿಯಾ ತಾರೆಯರಾಗಿ ಗುರುತಿಸಿಕೊಂಡಿದ್ದಾರೆ. ಆದ್ರೆ ಇವರ ನಡುವೆ ನಡೆದ ಕಿರಿಕ್ ಮಾತ್ರ ಕೊನೆಯಾಗಿಲ್ಲ. ಕಿರಿಕ್ ಪಾರ್ಟಿಗೆ 8 ವರ್ಷ ತುಂಬಿದ ಬೆನ್ನಲ್ಲೇ ಈ ಕಿರಿಕ್ ಎಪಿಸೋಡ್ ಆಚೆ ಬಂದಿದೆ.

ಇತ್ತೀಚಿಗೆ ಸ್ಯಾಂಡಲ್‌ವುಡ್‌ನಲ್ಲಿ ಒಂದು ಹೊಸ ಕಿರಿಕ್ ಶುರುವಾಗಿದೆ. ಡಿವೈನ್ ಸ್ಟಾರ್ ರಿಷಬ್ ಶೆಟ್ಟಿ ಮೇಲೆ ನ್ಯಾಷನಲ್ ಕ್ರಶ್ ರಶ್ಮಿಕಾ ಫ್ಯಾನ್ಸ್ ಗರಂ ಆಗಿದ್ದಾರೆ. ಅರೇ ಅದ್ಯಾಕಪ್ಪಾ ಶೆಟ್ಟರ ಮೇಲೆ ರಶ್ಮಿಕಾ ಫ್ಯಾನ್ಸ್ ಕೋಪ ಅಂತೀರಾ.. ಅದಕ್ಕೆ ಕಾರಣನೇ ರಿಷಬ್ ಹಾಕಿದ ಈ ಪೋಸ್ಟ್. ಡಿ. 30ನೇ ತಾರೀಖು ರಿಷಬ್ ಒಂದು ಪೋಸ್ಟ್ ಹಾಕಿದ್ದಾರೆ. ತಮ್ಮ ನಿರ್ದೇಶನದ ಕಿರಿಕ್ ಪಾರ್ಟಿ ಸಿನಿಮಾಗೆ 8 ವರ್ಷ ತುಂಬಿದ ಹಿನ್ನೆಲೆ ಚಿತ್ರದ ಪೋಸ್ಟರ್ ಶೇರ್ ಮಾಡಿ ರಕ್ಷಿತ್ ಅಂಡ್ ಟೀಂನ ನೆನೆಪಿಸಿಕೊಂಡಿದ್ದಾರೆ. ಚಿತ್ರಕ್ಕೆ ಅಷ್ಟು ದೊಡ್ಡ ಗೆಲುವು ತಂದುಕೊಟ್ಟ ಪ್ರೇಕ್ಷಕರಿಗೂ ಧನ್ಯವಾದ ಹೇಳಿದ್ದಾರೆ.

ಆದ್ರೆ ಈ ಪೋಸ್ಟ್‌ನಲ್ಲಿ ರಶ್ಮಿಕಾ ಹೆಸರಿಲ್ಲ.



ಪೋಸ್ಟರ್‌ನಲ್ಲೂ ರಶ್ಮಿಕಾ ಇಲ್ಲ. ಬೇಕಂತಲೇ ರಿಷಬ್ ಈ ರೀತಿ ಮಾಡಿದ್ದಾರೆ ಅನ್ನೋದು ರಶ್ಮಿಕಾ ಫ್ಯಾನ್ಸ್ ಆರೋಪ. ಅಸಲಿಗೆ ಕಿರಿಕ್ ಪಾರ್ಟಿ ಸಿನಿಮಾದಲ್ಲಿ ರಶ್ಮಿಕಾ ಮೊದಲ ನಾಯಕಿ, ಸಂಯುಕ್ತಾ ದ್ವಿತೀಯ ನಾಯಕಿ. ಈ ಪೋಸ್ಟರ್‌ನಲ್ಲಿ ಸಂಯುಕ್ತಾ ಇದ್ದಾಳೆ. ಅದ್ರೆ ರಶ್ಮಿಕಾ ಮಾಯ.

ಕಿರಿಕ್ ಪಾರ್ಟಿ ರಶ್ಮಿಕಾಳ ಮೊದಲ ಸಿನಿಮಾ. ರಕ್ಷಿತ್ ಅಂಡ್ ರಿಷಬ್ ಈಕೆಯನ್ನ ಬಣ್ಣದ ಲೋಕಕ್ಕೆ ಪರಿಚಯಿಸಿದ್ರು. ಮೊದಲ ಚಿತ್ರವೇ ಸೂಪರ್ ಹಿಟ್ ಆಯ್ತು. ಇಲ್ಲಿಂದ ಟಾಲಿವುಡ್‌ಗೆ.. ಅಲ್ಲಿಂದ ಬಾಲಿವುಡ್‌ಗೆ ಹಾರಿದ ರಶ್ಮಿಕಾ ನ್ಯಾಷನಲ್ ಕ್ರಶ್ ಆದ್ಳು. ಸದ್ಯ ಸಲ್ಮಾನ್ ಖಾನ್ ಜೊತೆ ನಟಿಸ್ತಾ ಇರೋ ರಶ್ಮಿಕಾ ಇಡೀ ಇಂಡಿಯನ್ ಸಿನಿ ಇಂಡಸ್ಟ್ರಿಯಲ್ಲಿ ಅತಿಹೆಚ್ಚು ಸಂಭಾವನೆ ಪಡೆಯೋ ನಟಿಮಣಿ ಎನ್ನಿಸಿಕೊಂಡಿದ್ದಾಳೆ.

ಇತ್ತ 777 ಚಾರ್ಲಿ ಮೂಲಕ ರಕ್ಷಿತ್, ಕಾಂತಾರ ಮೂಲಕ ರಿಷಬ್ ಕೂಡ ಪ್ಯಾನ್ ಇಂಡಿಯಾ ತಮ್ಮದೇ ಮಾರ್ಕೆಟ್ ಸೃಷ್ಟಿಸಿಕೊಂಡಿದ್ದಾರೆ. ಆದ್ರೆ ಇಷ್ಟು ಎತ್ತರಕ್ಕೆ ಬೆಳೆದರೂ ಈ ಮೂವರ ನಡುವಿನ ಕಿರಿಕ್ ಮಾತ್ರ ಕೊನೆಯಾಗೋದಿಲ್ಲ ಅನ್ನೋದನ್ನ ರಿಷಬ್ ಸೂಚ್ಯವಗಿ ಹೇಳಿದ್ದಾರೆ.

ಅಸಲಿಗೆ ಕಿರಿಕ್ ಪಾರ್ಟಿ ಸಿನಿಮಾದ ಬಳಿಕ ರಕ್ಷಿತ್ ಅಂಡ್ ರಶ್ಮಿಕಾ ಪ್ರೀತಿಯಲ್ಲಿ ಬಿದ್ದಿದ್ರು. ಇಬ್ಬರ ಎಂಗೇಜ್‌ಮೆಂಟ್ ಕೂಡ ನಡೆದಿತ್ತು. ಆದ್ರೆ ಮುದ್ರೆ ರಶ್ಮಿಕಾ ಈ ಸಂಬಂಧವನ್ನ ಮುರಿದುಕೊಂಡ್ರು. ರಕ್ಷಿತ್ ಮನಸ್ಸನ್ನ ಒಡೆದು ಮುಂದಕ್ಕೆ ನಡೆದ್ರು.

ಇನ್ನೂ ಟಾಲಿವುಡ್, ಬಾಲಿವುಡ್‌ನಲ್ಲಿ ನೀಡಿದ ಸಂದರ್ಶನಗಳಲ್ಲಿ ರಶ್ಮಿಕಾ ಅಪ್ಪಿ ತಪ್ಪಿಯೂ ತನ್ನನ್ನ ಪರಿಚಯಿಸಿದ ರಕ್ಷಿತ್, ರಿಷಬ್ ಹೆಸರನ್ನ ಹೇಳೋದಿಲ್ಲ. ಆದ್ರೆ ಇದೆಲ್ಲದರ ಹೊರತಾಗಿಯೂ ರಕ್ಷಿತ್ ಶೆಟ್ಟಿ ಎಲ್ಲೂ ರಶ್ಮಿಕಾ ಬಗ್ಗೆ ಇರೋ ಅಸಮಾಧಾನ ಹೇಳಿಕೊಂಡಿಲ್ಲ.

ಆದ್ರೆ ರಕ್ಷಿತ್ ಮರೆತ್ರೂ ರಿಷಬ್ ಮಾತ್ರ ರಶ್ಮಿಕಾ ಮೇಲಿನ ಕೋಪ ಮರೆತಿಲ್ಲ. ಚಾನ್ಸ್ ಸಿಕ್ಕಾಗೆಲ್ಲಾ ನ್ಯಾಷನಲ್ ಕ್ರಶ್ ಗೆ ಪಂಚ್ ಕೊಡ್ತಾನೇ ಇರ್ತಾರೆ. ಸದ್ಯ ಕಿರಿಕ್ ಪಾರ್ಟಿ ಅನಿವರ್ಸರಿ ನೆಪದಲ್ಲಿ ಮತ್ತೊಮ್ಮೆ ಕೊಟ್ಟಿದ್ದಾರೆ. ಕಿರಿಕ್ ಗ್ಯಾಂಗ್‌ನಿಂದ ರಶ್ಮಿಕಾನ ಆಚೆ ಇಟ್ಟು ನಿನಗೆ ನಮ್ಮ ಪ್ರಪಂಚದಲ್ಲಿ ಮತ್ತೆ ಜಾಗ ಇಲ್ಲ ಅನ್ನೋ ಸಂದೇಶ ಕೊಟ್ಟಿದ್ದಾರೆ.

# 'ಅಮ್ಮನ ನೆನಪು'; ನಾನಿನ್ನೂ ಸಿನಿಮಾವನ್ನು ಸಂಪೂರ್ಣ ವೀಕ್ಷಿಸಿಲ್ಲ



ಕಲೈಪುಲಿ ಎಸ್ ತನು ಅವರ ವಿ ಕ್ರಿಯೇಷನ್ಸ್ ಹಾಗೂ ಸುದೀಪ್ ಅವರ ಕಿಚ್ಚ ಕ್ರಿಯೇಷನ್ಸ್ ನಿರ್ಮಾಣದಲ್ಲಿ ಮೂಡಿ ಬಂದ "ಮ್ಯಾಕ್ಸ್" ಡಿಸೆಂಬರ್ 25ರಂದು ಬಿಡುಗಡೆಯಾಗಿ ರಾಜ್ಯಾದ್ಯಂತ ಯಶಸ್ವಿ ಪ್ರದರ್ಶನ ಕಾಣುತ್ತಿದೆ.

ವಿಜಯ್ ಕಾರ್ತಿಕೇಯ ನಿರ್ದೇಶನದ ಬಹುನಿರೀಕ್ಷಿತ ಚಿತ್ರದಲ್ಲಿ ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ನಾಯಕನಾಗಿ ಕಾಣಿಸಿಕೊಂಡಿದ್ದು, ಸಿನಿಮಾ ಬಹುತೇಕ ಮೆಚ್ಚುಗೆಯನ್ನೇ ಗಳಿಸಿದೆ. ಅಲ್ಲದೇ ಬಾಕ್ಸ್ ಆಫೀಸ್‌ನಲ್ಲೂ ಕಮಾಲ್ ಮಾಡಿದೆ. ಈ ಸಂತೋಷವನ್ನು ಸಂಭ್ರಮಿಸಲು ಇತ್ತೀಚೆಗೆ 'ಥ್ಯಾಂಕ್ಸ್ ಗಿವಿಂಗ್' ಸಮಾರಂಭ ಆಯೋಜಿಸಲಾಗಿತ್ತು.

ಕಿಚ್ಚ ಸುದೀಪ್ ಮಾತನಾಡಿ, ಎರಡೂವರೆ ವರ್ಷಗಳ ಬಳಿಕ ನನ್ನ ಸಿನಿಮಾ ಬಿಡುಗಡೆಯಾಗಿ, ಯಶಸ್ಸು ಕಂಡಿದೆ. ಅಭಿಮಾನಿಗಳ ಹಾಗೂ ಚಿತ್ರತಂಡದವರ ಮುಖದಲ್ಲಿ ಗೆಲುವಿನ ನಗು ಮೂಡಿದೆ. ಆ ನಗುವನ್ನು ನೋಡಿ ನಾನು ಸಂಭ್ರಮಿಸುತ್ತಿದ್ದೇನೆ. ನಾನು ಸದ್ಯ ಈ ಯಶಸ್ಸಿನ ಖುಷಿಯನ್ನು ಅನುಭವಿಸುತ್ತಿದ್ದೇನೆ ಎಂದು ಹರ್ಷ ಹಂಚಿಕೊಂಡರು.

ತಮಿಳಿನಲ್ಲೂ ಅದ್ಭುತ ಪ್ರದರ್ಶನ ಕಾಣುತ್ತಿದೆ : ಮಾತು ಮುಂದುವರಿಸಿದ ಅಭಿನಯ ಚಕ್ರವರ್ತಿ, ಪ್ರೀಕ್ವೆಲ್, ಸೀಕ್ವೆಲ್ ಯಾವುದರ ಬಗ್ಗೆಯೂ ಸದ್ಯಕ್ಕೆ ಗಮನ ಹರಿಸಿಲ್ಲ. ನಿರ್ದೇಶಕ ರಾಜಮೌಳಿ ಅವರು ಸಿನಿಮಾ ನೋಡುವುದಾಗಿ ಹೇಳಿದ್ದಾರೆ. ಅದು ಇನ್ನಷ್ಟು ಖುಷಿಯ ಸಂಗತಿ. ತಮಿಳಿನಲ್ಲಿಯೂ ಅದ್ಭುತ ಪ್ರದರ್ಶನ ಕಾಣುತ್ತಿದೆ. ನಿರ್ಮಾಪಕರು, ನಿರ್ದೇಶಕರು ಅಲ್ಲಿಯವರೇ ಆಗಿರುವುದರಿಂದ ಅವರ ಮುಖದಲ್ಲಿ ಖುಷಿ ಕಾಣುತ್ತಿದೆ. ನಟನಾಗಿ ನನಗೂ ಹೆಮ್ಮೆ ಇದೆ. ತಮಿಳಿನಲ್ಲಿ ಕಲಾವಿದರು ಸಹ ಚಿತ್ರ ವೀಕ್ಷಿಸುತ್ತಿದ್ದಾರೆ ಎಂದು ತಿಳಿಸಿದರು.

ಸ್ನೇಹಿತರ ಬಳಗ ಹೆಚ್ಚಾಗಿದೆ : 'ಮ್ಯಾಕ್ಸ್' ಚಿತ್ರದ ಯಶಸ್ಸಿನ ನಂತರ ನನ್ನ ಸ್ನೇಹಿತರ ಬಳಗ ಇನ್ನಷ್ಟು ಹೆಚ್ಚಾಗಿದೆ. ಚಿತ್ರದ ಕ್ಲೈಮ್ಯಾಕ್ಸ್ ನಲ್ಲಿ ಬಳಸಲಾಗಿದ್ದ ಕಾಸ್ಟ್ಯೂಮ್ ಎತ್ತಿಟ್ಟಿದ್ದೇನೆ. ಅದು ನೆನಪು. ಪ್ರತೀ ಸಿನಿಮಾದಲ್ಲಿಯೂ ಈ ರೀತಿ ಮಾಡುವ ಅಭ್ಯಾಸವಿದೆ ಎಂದರು.

ಪೂರ್ಣ ಪ್ರಮಾಣದಲ್ಲಿ ಸಿನಿಮಾ ನೋಡಿಲ್ಲ : ಮ್ಯಾಕ್ಸ್ ಸಿನಿಮಾವನ್ನು ನೋಡಿ ಅಪ್ಪ ಖುಷಿ ಪಟ್ಟಿದ್ದಾರೆ. ಕೆಲವೊಂದು ಸನ್ನಿವೇಶಗಳನ್ನು ಅಮ್ಮನ ನೆನಪಾಗಿ ನೋಡಲು ಆಗಲಿಲ್ಲ, ಹೀಗಾಗಿ ನಾನು ಇನ್ನೂ ಪೂರ್ಣ ಪ್ರಮಾಣದಲ್ಲಿ ಸಿನಿಮಾ ನೋಡಿಲ್ಲ. ಈ ಚಿತ್ರದ ಮೂಲಕ ಮಗಳು ಸಾನ್ವಿಯನ್ನು ಗಾಯಕಿಯಾಗಿ ಪರಿಚಯ ಮಾಡಿದ್ದೇನೆ. ಅದರ ಸಂಪೂರ್ಣ ಕ್ರೆಡಿಟ್ ಸಂಗೀತ ನಿರ್ದೇಶಕ ಅಜನೀಶ್ ಲೋಕನಾಥ್ ಅವರಿಗೆ ಸಲ್ಲಬೇಕು ಎಂದು ಕಿಚ್ಚ ಹೇಳಿದರು.


ಕನ್ನಡದಲ್ಲಿ ನನ್ನ ಮೊದಲ ಚಿತ್ರ ಗೆದ್ದಿರುವುದು ಖುಷಿಯಾಗಿದೆ. ಈ ಸಂದರ್ಭದಲ್ಲಿ ಚಿತ್ರತಂಡದ ಸದಸ್ಯರಿಗೆ, ಕನ್ನಡ ಕಲಾಭಿಮಾನಿಗಳಿಗೆ ಹಾಗೂ ವಿಶೇಷವಾಗಿ ಕಿಚ್ಚ ಸುದೀಪ್ ಅವರಿಗೆ ಧನ್ಯವಾದ ತಿಳಿಸುತ್ತೇನೆ. ಈ ಗೆಲುವು ತಂಡದ್ದು. ಅವಕಾಶ ನೀಡಿದ ನಿರ್ಮಾಪಕರಿಗೆ, ಕಿಚ್ಚ ಸುದೀಪ್ ಅವರಿಗೆ ಹಾಗೂ ಇಡೀ ತಂಡಕ್ಕೆ ಎಂದು ನಿರ್ದೇಶಕ ವಿಜಯ್ ಕಾರ್ತಿಕೇಯ ಧನ್ಯವಾದ ಅರ್ಪಿಸಿದರು.

ಕೆ.ಆರ್.ಜಿ ಸಂಸ್ಥೆಯ ಕಾರ್ತಿಕ್ ಗೌಡ, ಸಂಗೀತ ನಿರ್ದೇಶಕ ಅಜನೀಶ್ ಲೋಕನಾಥ್, ಛಾಯಾಗ್ರಾಹಕ ಶೇಖರ್ ಚಂದ್ರ, ಕಲಾ ನಿರ್ದೇಶಕ ಶಿವಕುಮಾರ್, ಸಂಕಲನಕಾರ ಗಣೇಶ್, ಸಂಭಾಷಣೆ ಬರೆದಿರುವ ಮಂಜು ಮಾಂಡವ್ಯ, ಕಲಾವಿದರಾದ ಸುಧಾ ಬೆಳವಾಡಿ, ಕರಿ ಸುಬ್ಬು, ಕೃಷ್ಣ ಹೆಬ್ಬಾಳೆ, ಸಂಯುಕ್ತ ಹೊರನಾಡು, ಸುಕೃತ ವಾಗ್ಲೆ, ವಿಜಯ್ ಚಂಡೂರ್, ಪ್ರವೀಣ್ ಸೇರಿ ಮುಂತಾದವರು ಚಿತ್ರದ ಗೆಲುವಿನ ಸಂತಸವನ್ನು ತಮ್ಮ ಮಾತುಗಳ ಮೂಲಕ ಹಂಚಿಕೊಂಡರು.

# ಸೌಂದರ್ಯಗೆ ಮನಸೋತಿದ್ದ ಸುಂದರ್!



ದಕ್ಷಿಣ ಭಾರತದ ಪ್ರಸಿದ್ಧ ನಿರ್ದೇಶಕ ಸುಂದರ್ ಸಿ. ಹಾಸ್ಯ ಚಿತ್ರಗಳಿಗೆ ಹೆಸರುವಾಸಿ. ಉಳ್ಳತ್ತೈ ಅಳ್ಳಿತ್ತಾ, ಅರುಣಾಚಲಂ, ಅನ್ಬೇ ಶಿವಂ, ವಿನ್ನರ್, ಕಲಕಲಪ್ಪು, ಅರಣ್ಮನೈ ಸೇರಿದಂತೆ ಹಲವು ಹಿಟ್ ಚಿತ್ರಗಳನ್ನು ನಿರ್ದೇಶಿಸಿದ್ದಾರೆ. ಅರಣ್ಮನೈ 3 ಫ್ಲಾಪ್ ಆದರೂ, ಕಳೆದ ವರ್ಷ ಅರಣ್ಮನೈ 4 ಯಶಸ್ಸು ಕಂಡಿತು.



ಅರಣ್ಮನೈ 4ರ ನಂತರ, ಸುಂದರ್ ನಿರ್ದೇಶನದಲ್ಲಿ ಗ್ಯಾಂಗ್‌ಸ್ಟರ್ಸ್ ಸಿನಿಮಾ ತಯಾರಾಗುತ್ತಿದೆ. ಈ ಚಿತ್ರದಲ್ಲಿ ಸುಂದರ್ ಅ ನಾಯಕರಾಗಿ ನಟಿಸುತ್ತಿದ್ದಾರೆ. ಹಾಸ್ಯನಟ ವಡುವೇಲು ಕೂಡ ಒಂದು ಪ್ರಮುಖ ಪಾತ್ರದಲ್ಲಿದ್ದಾರೆ. ಚಿತ್ರೀಕರಣ ಮುಗಿದಿದ್ದು, ಬಿಡುಗಡೆಗೆ ಸಿದ್ಧವಾಗಿದೆ. ಈ ಚಿತ್ರವನ್ನು ಸುಂದರ್ ಅ ಪತ್ನಿ ಖುಷ್ಬೂ ನಿರ್ಮಿಸುತ್ತಿದ್ದಾರೆ. ಈ ವರ್ಷ ಬಿಡುಗಡೆಯಾಗಲಿದೆ. ಇದಲ್ಲದೆ, ಸುಂದರ್ ಅ ಮತ್ತೊಂದು ಚಿತ್ರಕ್ಕೆ ಸಿದ್ಧತೆ ನಡೆಸುತ್ತಿದ್ದಾರೆ.

ಅದೇ ಮೂಕುತಿ ಅಮ್ಮನ್ 2. ಈ ಚಿತ್ರದ ಮೊದಲ ಭಾಗದಲ್ಲಿ ನಯನತಾರ ನಟಿಸಿದ್ದರು. ಆರ್.ಜೆ.ಬಾಲಾಜಿ ನಿರ್ದೇಶನದ ಈ ಚಿತ್ರ ಯಶಸ್ವಿಯಾಗಿತ್ತು. ಎರಡನೇ ಭಾಗವನ್ನು ಸುಂದರ್ ಅ ನಿರ್ದೇಶಿಸಲಿದ್ದಾರೆ. ಇದರಲ್ಲೂ ನಯನತಾರ ನಾಯಕಿ. ವೇಲ್ಸ್ ಫಿಲಂಸ್ ನಿರ್ಮಿಸುತ್ತಿರುವ ಈ ಚಿತ್ರದ ಚಿತ್ರೀಕರಣ ಈ ವರ್ಷ ಆರಂಭವಾಗಲಿದೆ. ಇದಲ್ಲದೆ, ಕಲಕಲಪ್ಪು ಚಿತ್ರದ ಮೂರನೇ ಭಾಗವನ್ನು ನಿರ್ದೇಶಿಸಲು ಸುಂದರ್ ಅ ಯೋಚಿಸುತ್ತಿದ್ದಾರೆ.

ಇತ್ತೀಚಿನ ಸಂದರ್ಶನವೊಂದರಲ್ಲಿ, ಸುಂದರ್ ಅ ಒಬ್ಬ ನಟಿಯ ಮೇಲೆ ಕ್ರಶ್ ಇತ್ತು ಎಂದು ಹೇಳಿದ್ದಾರೆ. "ನಾನು ಕೆಲಸ ಮಾಡದವರಲ್ಲಿ ನನ್ನ ಅಚ್ಚುಮೆಚ್ಚಿನ ನಟಿ ಸೌಂದರ್ಯ. ಖುಷ್ಬೂ ನನ್ನ ಜೀವನಕ್ಕೆ ಬಂದಿಲ್ಲದ್ರೆ, ಖಂಡಿತ ಸೌಂದರ್ಯಗೆ ಪ್ರಪೋಸ್ ಮಾಡ್ತಿದ್ದೆ. ಅವರು ತುಂಬಾ ಒಳ್ಳೆಯವರು. ಅಂಥ ಒಳ್ಳೆಯ ಹುಡುಗಿ ಸಿಗೋದು ತುಂಬಾ ಕಷ್ಟ. ಅವರ ಅಣ್ಣನನ್ನ ಒಂದು ಕ್ಷಣವೂ ಬಿಟ್ಟಿರ್ಲಿಲ್ಲ. ಅದಕ್ಕೇ ಸಾಯುವಾಗಲೂ ಇಬ್ಬರೂ ಒಟ್ಟಿಗೆ ಸತ್ತರು. ಅವರ ಸಾವು ತುಂಬಾ ದುರದೃಷ್ಟಕರ" ಎಂದಿದ್ದಾರೆ ಸುಂದರ್.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-41 Email-mussanje2010@gmail.com, Phone: 9448074878